ಸಂಪುಟ: 04 ಸಂಚಿಕೆ: 140 ಪುಟಗಳು: 08 ಶುಕ್ರವಾರ 02 ಆಗಸ್ಟ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಸತ್ಯಕ್ಕಾಗಿ ಸರ್ವಸ್ವವನ್ನು ಸಮರ್ಪಿಸಬಹುದು, ಆದರೆ ಸತ್ಯವನ್ನು ಮತ್ತಾವುದಕ್ಕೂ ತೆರುವುದಕ್ಕೆ ಆಗುವುದಿಲ್ಲ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರಾಜಭವನಕ್ಕೆ ಮುತ್ತಿಗೆ ಹಾಕೋದಾಗಿ ವಾಟಾಳ್ ನಾಗರಾಜ್ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಿಎಂ ಸಿದ್ದರಾಮಯ್ಯ ಅವರಿಗೆ ಶೋಕಾಸ್ ನೋಟಿಸ್ ನೀಡಿರುವ ವಿಚಾರವಾಗಿ ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಾಟಾಳ್ ನಾಗರಾಜ್, ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯನವರಿಗೆ ನೋಟೀಸ್ ನೀಡುವ ಮೂಲಕ ರಾಜಕೀಯವಾಗಿ ನಡೆದುಕೊಂಡಿದ್ದಾರೆ. ರಾಜ್ಯಪಾಲರ ಇಂತಹ ನಡೆ ಸರಿಯಲ್ಲ. ಜೈಲಿಗೆ ಹೋಗಬೇಕಾದವರು ಎಲಾ ಪಕ್ಷಗಳಲ್ಲಿಯೂ ಇದ್ದಾರೆ. ಆಡಳಿತ ಪಕ್ಷದಲ್ಲಿ ಮಾತ್ರವಲ್ಲ, ವಿಪಕ್ಷಗಳಲ್ಲಿಯೂ ಇದ್ದಾರೆ ಎಂದು ವಾಗ್ದಾಳಿ ನಡೆಸಿದರು.
ರಾಜ್ಯಪಾಲರು ತಮ್ಮ ನಡೆಯನ್ನು ಇನ್ನೆರಡು ದಿನಗಳೊಳಗಾಗಿ ಬದಲಿಸಿಕೊಳ್ಳಬೇಕು. ಇಲ್ಲವಾದಲ್ಲಿ ರಾಜ್ಯಪಾಲರ ಕ್ರಮ ಖಂಡಿಸಿ ರಾಜಭವನಕ್ಕೆ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.

## ನನ್ನ ಒಂದು ಷರತ್ತಿಗೆ ಒಪ್ಪಿದ್ರೆ ಪಾದಯಾತ್ರೆಗೆ ಬರುವೆ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿದ್ದರಾಮಯ್ಯ ವಿರುದ್ಧ ಹೋರಾಟ ನಡೆಸಲು ಬಿಜೆಪಿ ಹಮ್ಮಿಕೊಂಡಿರುವ ಪಾದಯಾತ್ರೆಯಲ್ಲಿ ಭಾಗಿಯಾಗದಿರಲು ಹೆಚ್‌ಡಿ ಕುಮಾರಸ್ವಾಮಿ ತೀರ್ಮಾನಿಸಿದ್ದು ಸದ್ಯ ಬಿಜೆಪಿ ನಾಯಕರು ಮನವೊಲಿಸುವ ಪ್ರಯತ್ನ ಮಾಡಿದ್ದಾರೆ. ಈ ವೇಳೆ ಹೆಚ್‌ಡಿಕೆ ಬಿಜೆಪಿ ಹೈಕಮಾಂಡ್‌ಗೆ ಷರತ್ತು ಹಾಕಿದ್ದು ಷರತ್ತಿಗೆ ಒಪ್ಪಿದರೆ ಪಾದಯಾತ್ರೆಗೆ ಬರುವೆ ಎಂದು ಖಡಕ್ ಆಗಿ ಸಂದೇಶ ರವಾನಿಸಿದ್ದಾರೆ.
ಹೌದು ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಹಾಗೂ ಜೆಡಿಎಸ್ ಸಿಎಂ ಸಿದ್ದರಾಮಯ್ಯ ಹಾಗೂ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಬಿಸಿ ಮುಟ್ಟಿಸಲು ಬೆಂಗಳೂರಿಂದ ಮೈಸೂರಿಗೆ ಆಗಸ್ಟ್ 3 ರಂದು ಪಾದಯಾತ್ರೆ ನಡೆಸಲು ತೀರ್ಮಾನಿಸಿತ್ತು. ಪಾದಯಾತ್ರೆ ಕುರಿತು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಬಿಜೆಪಿ ಜೆಡಿಎಸ್ ಜಂಟಿ ಸಭೆ ಕೂಡ ನಡೆಸಿದ್ದರು.

## ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ಆರೋಪ, ಬಿಎಸ್‌ವೈಗೆ ಬಿಗ್ ರಿಲೀಫ್!

• ಉದಯವಾಹಿನಿ, ಬೆಂಗಳೂರು

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ಕೇಳಿ ಬಂದಿದ್ದ ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಪೋಕ್ಸೋ ಪ್ರಕರಣದಲ್ಲಿ ಬಿಎಸ್‌ವೈಗೆ ಹೈಕೋರ್ಟ್ ರಿಲೀಫ್ ನೀಡಿದೆ. ಪ್ರಕರಣ ರದ್ದು ಕೋರಿ ಬಿಎಸ್ ವೈ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಆ.22ಕ್ಕೆ ನ್ಯಾಯಾಲಯ ನಿಗದಿ ಮಾಡಿದೆ. ಇದಲ್ಲದೇ ಮುಂದಿನ ವಿಚಾರಣೆವರೆಗೂ ಖುದ್ದು ಹಾಜರಾತಿಯಿಂದ ಬಿಎಸ್‌ವೈ ಸೇರಿದಂತೆ ಪ್ರಕರಣದ ಇತರ ಆರೋಪಿಗಳಿಗೂ ವಿನಾಯಿತಿ ನೀಡಿ ಕೋರ್ಟ್ ಆದೇಶಿಸಿದೆ. ಇದರೊಂದಿಗೆ ಯಡಿಯೂರಪ್ಪರನ್ನು ಅರೆಸ್ಟ್ ಮಾಡದಂತೆ ನೀಡಿದ್ದ ಆದೇಶವನ್ನೂ ವಿಸ್ತರಣೆ ಮಾಡಿ ಹೈಕೋರ್ಟ್ ಏಕಸದಸ್ಯ ಪೀಠ ಇಂದು ಮಧ್ಯಂತರ ಆದೇಶ ಹೊರಡಿಸಿದೆ. ಸಹಾಯಕೋರಿ ಬಿಎಸ್‌ವೈ ಬಳಿ ಬಂದಿದ್ದ ತಾಯಿಯ ಅಪ್ರಾಪ್ತ ಪುತ್ರಿಯೋರ್ವಳೊಂದಿಗೆ ಬಿಎಸ್‌ವೈ ಅವರು ಅನುಚಿತವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಿದ್ದರು.

## ಅನ್ನಭಾಗ್ಯ ಯೋಜನೆಗೆ ಕೇಂದ್ರದಿಂದ ಅಕ್ಕಿ ಕೊಡ್ತೇವೆ : ಜೋಷಿ

• ಉದಯವಾಹಿನಿ, ನವದೆಹಲಿ

ದುಡ್ಡು ಕೊಡುತ್ತೇವೆ ಎಂದರೂ ಕೇಂದ್ರ ಸರ್ಕಾರವು ಅಕ್ಕಿ ಕೊಡಲು ಹಿಂದೇಟು ಹಾಕುತ್ತಿದೆ ಎಂದು ಪದೇ-ಪದೇ ರಾಜ್ಯ ಕಾಂಗ್ರೆಸ್ ಸರ್ಕಾರ ಟೀಕಿಸುತ್ತಲೇ ಬಂದಿದೆ. ಇದೀಗ ಮಹತ್ವದ ಬೆಳವಣಿಗೆ ಎಂಬಂತೆ, ರಾಜ್ಯ ಸರ್ಕಾರದ ಅನ್ನ ಭಾಗ್ಯ ಯೋಜನೆಗೆ ಅಕ್ಕಿಯನ್ನು ಕೇಳಿದರೆ ಕೇಂದ್ರ ಕೊಡಲು ತಯಾರಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರು ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯಕ್ಕೆ ಅಕ್ಕಿ ಕೊಡಲು ಕೇಂದ್ರ ಸಿದ್ಧವಿದ್ದು, ಮನವಿ ಮಾಡಿಕೊಂಡರೆ ಹೆಚ್ಚುವರಿ ಅಕ್ಕಿಯನ್ನು ಕೇಂದ್ರ ಪೂರೈಕೆ ಮಾಡಲಿದೆ. ಕೆಜಿಗೆ 28 ರೂಪಾಯಿಯಂತೆ ಅಕ್ಕಿ ಕೊಡಲು ಕೇಂದ್ರ ಸರ್ಕಾರ ಸಿದ್ಧವಿದೆ. ಎಷ್ಟಾದರೂ ಅಕ್ಕಿ ಕೊಡಲಿದ್ದೇವೆ ಎಂದು ಮಾಹಿತಿ ನೀಡಿದ್ದಾರೆ. ಪ್ರಸ್ತುತ ದೇಶದಲ್ಲಿ ಉತ್ತಮ ಮಳೆಯಾಗಿದೆ. ಎಲ್ಲೆಡೆ ಉತ್ತಮ ಫಸಲು ನಿರೀಕ್ಷೆ ಮಾಡಲಾಗುತ್ತಿದೆ ಎಂದಿದ್ದಾರೆ. ಅಕ್ಕಿ ಕೊರತೆ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಆರಂಭದಲ್ಲಿ ಹೆಚ್ಚುವರಿ 5 ಕೆಜಿ ಅಕ್ಕಿ + ಉಳಿದ ಅಕ್ಕಿ ಬದಲು 170 ರೂಪಾಯಿ ಹಣ ನೀಡಲು ಘೋಷಿಸಿತ್ತು.

# ಪ್ರಜಾಪ್ರಭುತ್ವ ಯಶಸ್ವಿಗೆ ಶಿಸ್ತು

# ಒಳಮೀಸಲಾತಿಗೆ ಸುಪ್ರೀಂ ಅಸ್ತು

ಕೇಂದ್ರಕ್ಕೆ ಶಿಫಾರಸು ಮಾಡಿದ ರಾಜ್ಯ ಸರಕಾರ



**ಏಳು ಸದಸ್ಯರ ಸಾಂವಿಧಾನ ಪೀಠ:1ರ ಬಹುಮತದಲ್ಲಿ ಮಹತ್ವ ತೀರ್ಪು**

**ಕೇಂದ್ರದಿಂದ ರಾಜ್ಯ ಸರ್ಕಾರದ ಅಂಗಳಕ್ಕೆ ಬಂದ ಚೆಂಡು**

• ಉದಯವಾಹಿನಿ, ನವದೆಹಲಿ

ಮಹತ್ವದ ಬೆಳವಣಿಗೆಯಲ್ಲಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಒಳಮೀಸಲಾತಿಗೆ ಸುಪ್ರೀಂ ಕೋರ್ಟ್ ನ ಏಳು ಸದಸ್ಯರ ಸಾಂವಿಧಾನಿಕ ಪೀಠ ಒಪ್ಪಿಗೆ ಸಿಕ್ಕಿದೆ. ಸುಪ್ರೀಂ ಕೋರ್ಟ್ ನ ಮುಖ್ಯ ನ್ಯಾಯಮೂರ್ತಿ ನ್ಯಾ. ಚಂದ್ರಚೂಡ್ ನೇತೃತ್ವದ ಏಳು ನ್ಯಾಯಮೂರ್ತಿಗಳಿರುವ ಸಾಂವಿಧಾನಿಕ ಪೀಠವು, ಪರಿಶಿಷ್ಟ ಜಾತಿ, ಪಂಗಡಗಳಲ್ಲಿಯೇ ತೀರಾ ಹಿಂದುಳಿದಿರುವ ಜಾತಿಗಳಿಗೆ ಮರು ಮೀಸಲಾತಿ ಕಲ್ಪಿಸುವ ಮಹತ್ವದ ತೀರ್ಪು ನೀಡಿದೆ. ಶಿಕ್ಷಣ ಮತ್ತು ಉದ್ಯೋಗಗಳಲ್ಲಿ ಈ ಮೀಸಲಾತಿ ಜಾರಿಗೆ ತರಬಹುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಹಿಂದುಳಿದ ಸಮುದಾಯಗಳಲ್ಲಿ ಹಿಂದುಳಿದವರಿಗೆ ಹೆಚ್ಚು ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲಾತಿ ಒದಗಿಸಲು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವರ್ಗಗಳಲ್ಲಿ ಒಳಮೀಸಲಾತಿ (ಉಪವರ್ಗೀಕರಣಕ್ಕೆ) ಸುಪ್ರೀಂಕೋರ್ಟ್ ಒಳಮೀಸಲಾತಿ 7 ನ್ಯಾಯಾಧೀಶರ ಸಂವಿಧಾನ ಪೀಠ ಸಮ್ಮತಿಸಿದೆ. ಈ ಮಹತ್ವ ಸುಪ್ರೀಂಕೋರ್ಟಿನ ಭಾರತದ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡಾ ನೇತೃತ್ವದ ಪೀಠವು 6:1 ಬಹುಮತದ ಮೂಲಕ ಅಂಗೀಕರಿಸಿದೆ. ನ್ಯಾಯಮೂರ್ತಿ ಬೇಲಾ ತ್ರಿವೇದಿ ಅವರು ತೀರ್ಪು ಕುರಿತಂತೆ ಭಿನ್ನಾಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಉಳಿದಂತೆ 6 ಪ್ರತ್ಯೇಕ ತೀರ್ಪುಗಳನ್ನು ಬರೆಯಲಾಗಿದೆ.

**ಸರ್ಕಾರಗಳಿಗೆ ಅಗ್ನಿಪರೀಕ್ಷೆ**

**ಈಗ ಚೆಂಡು ಕೇಂದ್ರ ಸರ್ಕಾರದ ಮುಂದೆ ಬಂದು ನಿಂತಂತಾಗಿದೆ. ಏಕೆಂದರೆ, ಕೆನೆಪದರದ ಜಾತಿಗಳನ್ನು ಗುರುತಿಸುವ ಹೊಣೆಗಾರಿಕೆಯನ್ನೀಗ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ನೀಡಿರುವುದರಿಂದ ಅದಕ್ಕೆ ಬೇಕಾದ ಮಾರ್ಗಸೂಚಿಗಳನ್ನು ಪ್ರಕಟಿಸಬೇಕಿದೆ. ಯಾವ ಮಾನದಂಡಗಳನ್ನಿಟ್ಟುಕೊಂಡು ಈ ಮಾರ್ಗಸೂಚಿಗಳನ್ನು ಸಿದ್ಧಪಡಿಸಬೇಕು ಎನ್ನುವುದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ದೊಡ್ಡ ಸವಾಲಿನ ಕೆಲಸವಾಗಲಿದೆ. ಜೊತೆಗೆ, ಇದು ವಿವಾದಾತ್ಮಕ ವಿಚಾರವೂ ಆಗರುವುದರಿಂದ ಕತ್ತಿಯ ಅಲಗಿನ ಮೇಲಿನ ನಡೆಯಾಗಲಿದೆ.**

ಇ.ವಿ. ಚಿನ್ನಯ್ಯ ವಿರುದ್ಧ ಆಂಧ್ರಪ್ರದೇಶದ ಪ್ರಕರಣ ಐವರು ನ್ಯಾಯಾಧೀಶರ ಸಂವಿಧಾನ ಪೀಠ 2024ರ ತೀರ್ಪನ್ನು ಈ ತೀರ್ಪು ತಳ್ಳಿಹಾಕಿದೆ. ವಿಚಾರಣೆ ವೇಳೆ ಕೇಂದ್ರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪವರ್ಗೀಕರಣದ ಪರವಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿತ್ತು.

ಮುಖ್ಯ ನ್ಯಾಯಾಧೀಶರು ಉಪವರ್ಗೀಕರಣ ಮತ್ತು ಉಪವರ್ಗೀಕರಣಗಳ ನಡುವೆ ವ್ಯತ್ಯಾಸವಿರುವುದನ್ನು ಗಮನಿಸಿ, ರಾಜ್ಯಗಳು ಮತ್ತು ಮೀಸಲಾತಿ ವರ್ಗಗಳ ಸಮುದಾಯಗಳನ್ನು ಉಪವರ್ಗೀಕರಿಸಬೇಕಾಗಬಹುದು ಮತ್ತು ಈ ಪ್ರಯೋಜನಗಳು ಹಿಂದುಳಿದ ವರ್ಗಗಳಲ್ಲಿ ತಲುಪುವುದನ್ನು ಖಚಿತ ಪಡಿಸಿಕೊಳ್ಳಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ. ನನ್ನದು ನ್ಯಾಯಮೂರ್ತಿ ಮನೋಜ್ ಮಿಶ್ರಾ ಮತ್ತು ನನಗೆ ಬಹುಪಾಲು ಜನರು ಇ.ವಿ. ಚಿನ್ನಯ್ಯ ಅವರ ತೀರ್ಪುನ್ನು ತಳ್ಳಿಹಾಕಿದ್ದಾರೆ. ಮತ್ತು ನಾವು ಉಪವರ್ಗೀಕರಣ ಅನುಮತಿ ಸುತ್ತಿದ್ದೇವೆ. ನ್ಯಾಯಾಮೂರ್ತಿ ಬೇಲಾ ತ್ರಿವೇದಿ ಭಿನ್ನಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದ್ದಾರೆ. ಎಸ್ಸಿಎಸ್ಟಿ ವರ್ಗಗಳ ಸದಸ್ಯರು ಎದುರಿಸುತ್ತಿರುವ ವ್ಯವಸ್ಥಿತ ತಾರತಮ್ಯದಿಂದ ಹೆಚ್ಚು ಅಭಿವೃದ್ಧಿಯನ್ನು ಹೊಂದಲು ಸಾಧ್ಯವಾಗುತ್ತಿಲ್ಲ. ವಿಧಿ 14 ಜಾತಿಯ ಉಪವರ್ಗೀಕರಣವನ್ನು ಅನುಮತಿಸುತ್ತಿದೆ ಎಂದು ಹೇಳಿದ ನ್ಯಾಯಮೂರ್ತಿಗಳು ಐತಿಹಾಸಿಕ ಪುರಾವೆಗಳು ಇದರಿಂದ ಸಮಸ್ಯೆಗೊಳಗಾದ ವರ್ಗವನ್ನು ತೋರಿಸಿದೆ ಎಂದರು.

ನ್ಯಾಯಮೂರ್ತಿ ಬಿ.ಆರ್ ಗವಾಯಿ ಅವರು 1949ರಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಭಾಷಣವನ್ನು ಉಲ್ಲೇಖಿಸಿದ್ದಾರೆ. ಸಾಮಾಜಿಕ ಪ್ರಭುತ್ವವನ್ನು ಹೊಂದಿರದ ಹೊರತು ರಾಜಕೀಯ ಪ್ರಭುತ್ವದಿಂದ ಯಾವುದೇ ಪ್ರಯೋಜನ ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಕೆಲವು ಪರಿಶಿಷ್ಟ ಜಾತಿಗಳು ಅನುಭವಿಸುತ್ತಿರುವ ಕಷ್ಟಗಳು ಮತ್ತು ಅಭಿವೃದ್ಧಿಯಲ್ಲಿನ ಹಿನ್ನಡೆ ಜಾತಿಯಿಂದ ಜಾತಿಗೆ ವಿಭಿನ್ನವಾಗಿದೆ. ಇ.ವಿ. ಚಿನ್ನಯ್ಯ ಅವರ ಅಭಿಪ್ರಾಯ ತಪ್ಪಾಗಿ ಅರ್ಥೈಸಲಾಗಿದೆ. ರಾಜಕೀಯದಲ್ಲಿನ ಪ್ರಬುದ್ಧತೆ ಪಕ್ಷವು ಉಪಜಾತಿಗೆ ಮೀಸಲಾತಿ ನೀಡಬಹುದು ಎಂದು ವಾದಿಸಲಾಗಿತ್ತು. ಆದರೆ ಇದನ್ನು ನಾನು ಒಪ್ಪುವುದಿಲ್ಲ. ನಿಜವಾದ ಸಮಾನತೆ ಅರಿತುಕೊಳ್ಳುವುದೇ ನಮ್ಮ ಅಂತಿಮ ಉದ್ದೇಶ ಎಂದರು. ಬಹುಮತದ ತೀರ್ಪಿಗೆ ಅಸಮ್ಮತಿ ವ್ಯಕ್ತಪಡಿಸಿರುವ ನ್ಯಾಯಮೂರ್ತಿ ತ್ರಿವೇದಿ ಯಾವುದೇ ಕಾರಣಗಳನ್ನು ನೀಡದೆ ಅದನ್ನು ದೊಡ್ಡ ಪೀಠಕ್ಕೆ ಉಲ್ಲೇಖಿಸಿದ ವಿಧಾನವನ್ನು ನಾನು ಅನುಮೋದಿಸುವುದಿಲ್ಲ ಎಂದು ಹೇಳಿದ್ದಾರೆ. ಈ ಹಿಂದೆ ಮೂವರ ನ್ಯಾಯಾಧೀಶರ ಪೀಠದ ಯಾವುದೇ ಕಾರಣಗಳನ್ನು ನೀಡದೆ ನಿಗೂಢ ಮತ್ತು ನಿಷ್ಪ್ರಯೋಜಕ ಆದೇಶಗಳನ್ನು ನೀಡಿದೆ. ಪೂರ್ವ ನಿರ್ದೇಶನ ಸಿದ್ಧಾಂತ ನಮ್ಮ ಕಾನೂನು ವ್ಯವಸ್ಥೆಯ ಮೌಲ್ಯವಾಗಿದೆ. ತ್ವರಿತ ಪ್ರಕರಣದಲ್ಲಿ ಚಿನ್ನಯ್ಯ ಅವರ ತೀರ್ಪುನ್ನು ಪರಿಶೀಲಿಸುವಂತೆ ಉಲ್ಲೇಖಿಸಲಾಗಿದೆ. 15 ವರ್ಷಗಳ ನಂತರ ತೀರ್ಪು ತಪ್ಪಾಗಿದೆ ಎಂದು ತಿಳಿಸಿದ್ದಾರೆ.

**1** 3ದಿನಗಳ ಕಾಲ ನಡೆದ ಸುದೀರ್ಘ ವಿಚಾರಣೆಯಲ್ಲಿ ನ್ಯಾಯಾಲಯವು ಅಸ್ಪೃಶ್ಯತೆಯ ಸಾಮಾಜಿಕ ಇತಿಹಾಸ,

**2** ಸಂವಿಧಾನ ರಚನೆಕಾರರ ದೃಷ್ಟಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪರಿಕಲ್ಪನೆ

**3** ಭಾರತದಲ್ಲಿ ಮೀಸಲಾತಿಯ ಉದ್ದೇಶ ಮತ್ತು ಅದನ್ನು ಮುಂದುವರಿಸುವಲ್ಲಿ 341ನೇ ವಿಧಿಯ ಮಹತ್ವವನ್ನು ಚರ್ಚಿಸಿತ್ತು.

### ಮಾಧುಸ್ವಾಮಿ ಸಮಿತಿ



**ಹಿಂದೆ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರವು ಒಳ ಮೀಸಲಾತಿ ಕುರಿತು ಪರಿಶೀಲಿಸಿ ಶಿಫಾರಸು ಮಾಡಲು ಅಂದಿನ ಕಾನೂನು ಸಚಿವ ಜೆ.ಸಿ ಮಾಧುಸ್ವಾಮಿ ಅಧ್ಯಕ್ಷತೆಯಲ್ಲಿ ಸಂಪುಟ ಉಪ ಸಮಿತಿ ರಚಿಸಿತ್ತು. ಒಳ ಮೀಸಲಾತಿ ಕಲ್ಪಿಸುವ ಪ್ರಕ್ರಿಯೆಯು ಪರಿಶೀಲನೆಯಲ್ಲಿರುವಾಗಲೇ 2022ರಲ್ಲಿ 'ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಕಾಯ್ದೆ ರೂಪಿಸಿದ ಸರ್ಕಾರ, ಪರಿಶಿಷ್ಟ ಜಾತಿಯ ಮೀಸಲಾತಿಯನ್ನು ಶೇ. 15ರಿಂದ ಶೇ. 17ಕ್ಕೆ ಹೆಚ್ಚಿಸಿತು. ಸಂಪುಟ ಉಪ ಸಮಿತಿ 2011ರ ಜನಗಣತಿಯಂತೆ ಒಟ್ಟು 101 ಪರಿಶಿಷ್ಟ ಜಾತಿಗಳ ಜಾತಿವಾರು ಜನಸಂಖ್ಯೆಯನ್ನು ಪರಿಗಣಿಸಿ ನಾಲ್ಕು ಗುಂಪುಗಳಾಗಿ ವರ್ಗೀಕರಿಸಿ, ಒಳ ಮೀಸಲಾತಿ ಅನುಷ್ಠಾನ ಮಾಡುವಂತೆ ಸಚಿವ ಸಂಪುಟ ಸಭೆಗೆ ಶಿಫಾರಸು ಮಾಡಿತ್ತು. ಗುಂಪುಗಳ ವರ್ಗೀಕರಣ, ಶೇಕಡವಾರು ಮೀಸಲಾತಿ ನಿಗದಿಪಡಿಸಿ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲು ಸಂಪುಟ ಸಭೆ ನಿರ್ಣಯಿಸಿತ್ತು. 2023ರ ಮಾರ್ಚ್ 28 ಮತ್ತು 31ರಂದು ಈ ಪ್ರಸ್ತಾವ ಕೇಂದ್ರಕ್ಕೆ ಸಲ್ಲಿಸಲಾಗಿತ್ತು.**

### ಅಸಲಿಗೆ ಕೆನೆಪದರ ಎಂದಿದು ಯಾರಿಗೆ

**ಮೀಸಲಾತಿ ಸೌಲಭ್ಯಗಳನ್ನು ಬಳಸಿಕೊಂಡು ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿ ಸಾಧಿಸಿರುವವರನ್ನು ಕೆನೆಪದರದ ಜಾತಿಗಳು ಎಂದು ಹೇಳಲಾಗುತ್ತದೆ. ಅಂಥ ಜಾತಿಯವರಿಗೇ ಮತ್ತೆ ಮತ್ತೆ ಸೌಲಭ್ಯಗಳು ಸಿಗುತ್ತಾ ಹೋಗುವುದರಿಂದ, ಆ ನಿರ್ದಿಷ್ಟ ಜಾತಿಗಳು ಮಾತ್ರ ಅಭಿವೃದ್ಧಿ ಕಾಣುತ್ತಿವೆ. ಆದರೆ, ಪರಿಶಿಷ್ಟ ಜಾತಿ ಹಾಗೂ ಪಂಗಡಗಳಲ್ಲಿದ್ದರೂ ಮೀಸಲಾತಿಯ ಸಂಪೂರ್ಣ ಫಲ ಪಡೆಯುವಲ್ಲಿ ಹಿಂದುಳಿಯುತ್ತಿರುವ ಜಾತಿಗಳು ಇನ್ನೂ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿಯಾಗಿಲ್ಲ. ಹಾಗಾಗಿ, ಅವರ ಅಭಿವೃದ್ಧಿಯಾಗಬೇಕೆಂದರೆ, ಮೀಸಲಾತಿಯಲ್ಲಿ ಜನಬಲ, ತೋಳ್ಬಲ, ಹಣಬಲಗಳಿಂದ ಮೀಸಲಾತಿಯ ಲಾಭದಲ್ಲಿ ಸಿಂಹಪಾಲು ಪಡೆಯುತ್ತಿರುವ ಜಾತಿಗಳನ್ನು ಮೀಸಲಾತಿಯಿಂದ ಹೊರಗಿಡಬೇಕು ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.**

## ಜನ ಆಶೀರ್ವದಿಸಿದ ಸರ್ಕಾರ ತೆಗೆಯಲು ಹುನ್ನಾರ

### ಇದು ಯಾವ ಕಾರಣಕ್ಕೂ ಸಾಧ್ಯವಿಲ್ಲ : ಡಿಸಿಎಂ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಜನರು ಆಶೀರ್ವದಿಸಿ ಅಧಿಕಾರ ನೀಡಿದ್ದಾರೆ ಆದರೆ ಸರ್ಕಾರ ತೆಗೆಯಲು ಹುನ್ನಾರ ನಡೆಯುತ್ತಿದೆ. ಆದರೆ ಇದು ಯಾವ ಕಾರಣಕ್ಕು ಸಾಧ್ಯವಿಲ್ಲ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದರು. ಇಂದು ವಿಧಾನಸೌಧದಲ್ಲಿ ರಾಜ್ಯ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದಂತ ಅವರು, ಕಾನೂನು, ಸಂವಿಧಾನಕ್ಕೆ ನಾವು ಗೌರವ ಕೊಡುತ್ತೇವೆ.

ಗೌರವಾನ್ವಿತ ರಾಜ್ಯಪಾಲರು ನೋಟಿಸ್ ನೀಡಿದ್ದಾರೆ. ಪ್ರಜಾಪ್ರಭುತ್ವಕ್ಕೆ ಮಾರಕವಾಗುವಂತ ಪರಿಸ್ಥಿತಿ ಇದೆ ಎಂದರು. ಬಹುಮತದಿಂದ ಆಯ್ಕೆಯಾದ ಸಿಎಂಗೆ ತೊಂದರೆ ಕೊಡಲು ಯತ್ನಿಸುತ್ತಿದ್ದಾರೆ. ಸಿದ್ದರಾಮಯ್ಯ ಅವರು ಸಿಎಂ ಜವಾಬ್ದಾರಿಯನ್ನು ನಿರ್ವಹಿಸುತ್ತಿದ್ದಾರೆ. ಕೇಂದ್ರ ಸರ್ಕಾರ ಪ್ರಜಾಪ್ರಭುತ್ವದ ಕಗ್ಗೊಲೆಯನ್ನು ಮಾಡುತ್ತಿದೆ. ರಾಜ್ಯಪಾಲರ ಪತ್ರಕ್ಕೆ ಸಿಎಸ್ ಉತ್ತರಿಸಿದ್ದಾರೆ. ಸಿದ್ಧರಾಮಯ್ಯ ಕೂಡ ಗೌರವ ಕೊಟ್ಟಿದ್ದಾರೆ ಎಂದರು.

ಪ್ರಜಾಪ್ರಭುತ್ವಕ್ಕೆ ಮಾರಕ ಸ್ಥಿತಿ ಬಂದು ಒದಗಿದೆ. ಸಂವಿಧಾನದ ಕಗ್ಗೊಲೆ ಆಗಿದೆ. ರಾಜ್ಯಪಾಲರು ಸಿಎಸ್‌ಗೆ ಪತ್ರ ಬರೆಯುತ್ತಾರೆ.ಶಾಸಕಾಂಗ ಸಭೆ ಸಿದ್ದರಾಮಯ್ಯ ಅವರನ್ನು ಸಿಎಂ ಆಗಿ ಮಾಡಿದೆ. ಕಾನೂನಿಗೆ ಸಂವಿಧಾನಕ್ಕೆ ಗೌರವ ಕೊಡುತ್ತೇವೆ. ರಾಜ್ಯ ಪಾಲರನ್ನು ಕೇಂದ್ರ ಸರ್ಕಾರ ಬಳಸಿಕೊಂಡಿದೆ. ಟಿಜೆ ಅಬ್ರಹಾಮ ಹಿನ್ನೆಲೆ ಎಲ್ಲಾರಿಗೂ ಗೊತ್ತಿದೆ. ಸುಪ್ರೀಂ ಕೋರ್ಟ್ ಟಿಜೆ ಅಬ್ರಹಾಮ್ ಹೇಗೆ ಹಾಕಿದೆ ಅಂತ ಗೊತ್ತಿದೆ ಅಬ್ರಾಹಂ ಮೇಲೆ ನ್ಯಾಯಾಲಯ ಸಾಕಷ್ಟು ದಂಡ ಹಾಕಿದೆ ಎಂದರು. ಕೇಂದ್ರ ಸರ್ಕಾರ ಕಿರುಕುಳ ನೀಡುವ ಕೆಲಸ ಮಾಡುತ್ತಿದೆ. ಪ್ರಜಾಪ್ರಭುತ್ವಕ್ಕೆ ಮಾರಕವಾಗುವಂತ ಪರಿಸ್ಥಿತಿ ಇದೆ. ಸಿಎಂಗೆ ತೊಂದರೆ ಕೊಡಲು ಯತ್ನ ನಡೆಯುತ್ತಿದೆ. ಹಾಗಾಗಿ ರಾಜ್ಯಪಾಲರು ಸಿಎಂ ಸಿದ್ದರಾಮಯ್ಯ ಅವರಿಗೆ ನೀಡಿದ ನೋಟಿಸ್ ವಾಪಸ್ ಪಡೆಯಬೇಕು ಎಂಬುದಾಗಿ ಮನವಿ ಮಾಡಿದರು.



## ಆ.3ರಂದು 'ಪಾದಯಾತ್ರೆ'ಗೆ ಎಚ್‌ಡಿಕೆ, ಬಿಎಸ್‌ವೈ ಚಾಲನೆ


### ಭ್ರಷ್ಟ, ಹಗರಣಗಳ ಕಾಂಗ್ರೆಸ್ ಸರಕಾರದ ವಿರುದ್ಧ ಜನಾಂದೋಲನ

• ಉದಯವಾಹಿನಿ, ಬೆಂಗಳೂರು

ಬಿಜೆಪಿ- ಜೆಡಿಎಸ್ ಜಂಟಿಯಾಗಿ ಇದೇ 3ರಿಂದ ಮೈಸೂರು ಚಲೋ ಪಾದಯಾತ್ರೆ ನಡೆಸಲಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು. ಎರಡೂ ಪಕ್ಷಗಳ ಸಂಸದರು, ಶಾಸಕರು ಭಾಗವಹಿಸುತ್ತಾರೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಹಿರಿಯರಾದ ಬಿ.ಎಸ್.ಯಡಿಯೂರಪ್ಪ ಅವರು ಪಾದಯಾತ್ರೆಗೆ ಚಾಲನೆ ಕೊಡಲಿದ್ದಾರೆ ಎಂದು ನುಡಿದರು. ಭ್ರಷ್ಟ, ಹಗರಣಗಳ ಕಾಂಗ್ರೆಸ್ ಸರಕಾರದ ವಿರುದ್ಧ ಜನಾಂದೋಲನ ಇದಾಗಿರಲಿದೆ. ಇದನ್ನು ತಾರ್ಕಿಕ ಅಂತ್ಯಕ್ಕೆ ಒಯ್ಯುತ್ತೇವೆ ಎಂದು ಹೇಳಿದರು.

ವಾಲ್ಮೀಕಿ ನಿಗಮದ ಹಗರಣ ಮತ್ತು ಮುಡಾ ಹಗರಣವನ್ನು ಮುಂದಿಟ್ಟು ಬಿಜೆಪಿ ಮತ್ತು ಜೆಡಿಎಸ್ ಸದನದಲ್ಲಿ ಒಟ್ಟಾಗಿ ಹೋರಾಟ ಮಾಡಿದ್ದೆವು. ಸದನ ಮುಗಿದ ಬಳಿಕ ಈ ಹೋರಾಟ ಮುಂದುವರೆಸಲು ನಿರ್ಧರಿಸಲಾಗಿತ್ತು. ನಮ್ಮ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್‌ದಾಸ್ ಅಗರ್ ವಾಲ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮತ್ತು ನಾವೆಲ್ಲರೂ ಕುಳಿತು ಚರ್ಚಿಸಿದ್ದೇವೆ. ಎಲ್ಲಾವೂ ಇತ್ಯರ್ಥ ಆಗಿದೆ. ಮುಂದಿನ ಶನಿವಾರ ಬೆಳಿಗ್ಗೆ 8.30ಕ್ಕೆ ನೈಸ್ ರಸ್ತೆ ಜಂಕ್ಷನ್‌ನಿಂದ ಪಾದಯಾತ್ರೆ ಹೊರಡಲಿದೆ ಎಂದು ಪ್ರಕಟಿಸಿದರು.

ಅಹಿಂದ ಹೆಸರು ಹೇಳಿಕೊಂಡು ಅಧಿಕಾರ ಪಡೆದ ರಾಜ್ಯದ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರವು ಭ್ರಷ್ಟಾಚಾರದಲ್ಲಿ ಮುಳುಗಿದ ಬಗ್ಗೆ ಕರ್ನಾಟಕ ಮಾತ್ರವಲ್ಲದೆ, ದೇಶಾದ್ಯಂತ ಚರ್ಚೆ ಆಗುತ್ತಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ಹಗರಣದಡಿ ಪರಿಶಿಷ್ಟ ಪಂಗಡಗಳ ಹಣವನ್ನು ಕಾಂಗ್ರೆಸ್ ಸರಕಾರ ದೋಚಿತ್ತು ಎಂದು ಟೀಕಿಸಿದರು.ಸ್ವತಃ ಮುಖ್ಯಮಂತ್ರಿಗಳೇ ಸದನದಲ್ಲಿ ಇದನ್ನು ಒಪ್ಪಿಕೊಂಡಿದ್ದಾರೆ. ಮತ್ತೊಂದೆಡೆ ಮುಡಾದಲ್ಲಿ ಮುಖ್ಯಮಂತ್ರಿಗಳ ಕುಟುಂಬಕ್ಕೆ ಅಕ್ರಮವಾಗಿ ಬಂದ 14 ನಿವೇಶನಗಳ ಜೊತೆಗೇ 4 ಸಾವಿರ ಕೋಟಿಗೂ ಹೆಚ್ಚು ಮೌಲ್ಯದ ಸಾವಿರಾರು ನಿವೇಶನಗಳನ್ನು ಕಾಂಗ್ರೆಸ್ ಸರಕಾರ ಬಂದ ಬಳಿಕ ಬೇಕಾದವರಿಗೆ ಕೊಟ್ಟದ್ದು ಪ್ರಮುಖ ಅಂಶ ಎಂದು ವಿವರಿಸಿದರು.ಇದರಿಂದ ಮುಡಾಗೆ 4 ಸಾವಿರ ಕೋಟಿಗೂ ಹೆಚ್ಚು ನಷ್ಟವಾಗಿದೆ. ಬಡವರು, ಪರಿಶಿಷ್ಟ ಸಮುದಾಯಕ್ಕೆ ಸಿಗಬೇಕಾದ ನಿವೇಶನಗಳನ್ನು ಇವರ ಹಿಂಬಾಲಕರಿಗೆ, ರಿಯಲ್ ಎಸ್ಟೇಟ್ ದಂಧೆಗೆ ಕೊಡಲಾಗಿದೆ ಎಂದು ಆಕ್ಷೇಪಿಸಿದರು.



## ರಾಜ್ಯಪಾಲರ ನೋಟಿಸ್ ಎದುರಿಸಲು ತಂತ್ರಗಾರಿಕೆ ಶುರು


### ಸಿದ್ದರಾಮಯ್ಯನವರು ರಾಜ್ಯಪಾಲರನ್ನು ಭೇಟಿ ಮಾಡಿ ವಿವರಣೆ ನೀಡಿಕೆ

• ಉದಯವಾಹಿನಿ, ಬೆಂಗಳೂರು

ಮುಡಾ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ನೋಟಿಸ್ ನೀಡುತ್ತಿದ್ದಂತೆ ಅಲರ್ಟ್ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯಾತ್ಮಕವಾಗಿ ನಾನಾ ರೀತಿಯ ತಂತ್ರಗಾರಿಕೆಗಳನ್ನು ಅನುಸರಿಸಲಾರಂಭಿಸಿದ್ದಾರೆ.ನಿನ್ನೆ ರಾತ್ರಿ ಆಪ್ತಸಚಿವರ ಜೊತೆ ಕೆ.ಜೆ. ಜಾರ್ಜ್ ಅವರ ಮನೆಯಲ್ಲಿರಹಸ್ಯ ಸಭೆ ನಡೆಸಿ ಚರ್ಚೆ ನಡೆಸಿದ್ದ ಮುಖ್ಯ ಮಂತ್ರಿ ಸಿದ್ದರಾಮಯ್ಯ ಇಂದು ಬೆಳಿಗ್ಗೆ ಸಂಪು ಟದ ಬಹುತೇಕ ಸಚಿವರೊಂದಿಗೆ ಉಪಾಹಾರ ಕೂಟ ನಡೆಸಿ ಎಲ್ಲಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುವ ಪ್ರಯತ್ನ ನಡೆಸಿದ್ದಾರೆ.ಒಂದು ವೇಳೆ ರಾಜ್ಯಪಾಲರು ಅಭಿ ಯೋಜನೆಗೆ ಅನುಮತಿ ನೀಡಿದರೆ ಅನುಸರಿ ಸಬಹುದಾದ ಕಾನೂನಾತಕ ವಿಚಾರಗಳ ಕುರಿತು ಚರ್ಚೆ ನಡೆಸಲಾಗಿದೆ.

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಸಿದ್ದರಾಮಯ್ಯನವರು ರಾಜ್ಯಪಾಲರನ್ನು ಭೇಟಿ ಮಾಡಿ ವಿವರಣೆ ನೀಡಿದ್ದು, ದಾಖಲಾತಿಗಳನ್ನು ಕೂಡ ಸಲ್ಲಿಸಿದ್ದಾರೆ. ಅದರ ಹೊರತಾಗಿಯೂ ಖಾಸಗಿ ವ್ಯಕ್ತಿ ಅಬ್ರಹಾಂ ಹಾಗೂ ಬಿಜೆಪಿ ನೀಡಿದ ದೂರು ಆಧರಿಸಿ ರಾಜ್ಯಪಾಲರು ನೋಟಿಸ್ ನೀಡಿರುವುದು ಪರಿಸ್ಥಿತಿಯನ್ನು ಬಿಗಿಗೊಳಿಸಿದೆ. ಮುಖ್ಯಮಂತ್ರಿಯವರು ರಾಜಕೀಯ ಒತ್ತಡಕ್ಕೆ ಸಿಲುಕಿದ್ದಾರೆ.

ರಾಜ್ಯಪಾಲರ ನೋಟಿಸ್ಗೆ ಇಂದು ಉಪಹಾರ ಕೂಟದಲ್ಲಿ ತೀವ್ರ ಆಕ್ರೋಶಗಳು ವ್ಯಕ್ತವಾಗಿವೆ. ಕೇಂದ್ರದ ಆಡಳಿತದಲ್ಲಿರುವ ಬಿಜೆಪಿ ಸರ್ಕಾರ ಹಾಗೂ ಕೆಲವು ರಾಜ್ಯದ ಪ್ರಮುಖ ನಾಯಕರು ಷಡ್ಯಂತ್ರ ನಡೆಸಿ ಸಿದ್ದರಾಮಯ್ಯ ಅವರನ್ನು ಕಾನೂನಿನ ಇಕ್ಕಟ್ಟಿಗೆ ಸಿಲುಕಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂಬ ಟೀಕೆಗಳು ವ್ಯಕ್ತವಾಗಿವೆ.



**ನೋಟಿಸ್‌ಗೆ ಕೈ ಪಡೆ ಕಿಡಿಕಿಡಿ**

### ನಿರ್ಣಯ ಕೈಗೊಳ್ಳುವಂತೆ ಮನವಿ

**ಅಭಿಯೋಜನೆಗೆ ವಿರೋಧ ವ್ಯಕ್ತಪಡಿಸುವ ನಿರ್ಣಯ ಕೈಗೊಳ್ಳುವಂತೆ ಮುಖ್ಯಮಂತ್ರಿ ಮನವಿ ಮಾಡಿದ್ದಾರೆ. ರಾಜ್ಯಪಾಲರ ನಡವಳಿಕೆ ಸಾಂವಿಧಾನಿಕ ಸಂಘರ್ಷಕ್ಕೆ ಎಡೆಮಾಡಿಕೊಡುವ ಸಾಧ್ಯತೆ ಇದೆ. ಈ ಹಿಂದೆ ಯಡಿಯೂರಪ್ಪ ಅವರ ಪ್ರಕರಣದಲ್ಲಿ ರಾಜ್ಯಪಾಲರು ಅಭಿಯೋಜನೆಗೆ ಅನುಮತಿ ನೀಡಿದ್ದರಿಂದಾಗಿಯೇ ಸಾಕಷ್ಟು ಕಾನೂನಾತಕ ಸಮಸ್ಯೆಗಳು ಎದುರಾದವು. ಈಗ ಮುಡಾ ಪ್ರಕರಣದಲ್ಲಿ ಯಾವುದೇ ಲೋಪ ಇಲ್ಲದೇ ಇದ್ದರೂ ಉದ್ದೇಶಪೂರಕವಾಗಿ ರಾಜಕೀಯ ಕಾರಣಕ್ಕೆ ಮುಖ್ಯಮಂತ್ರಿ ಹಾಗೂ ಸರ್ಕಾರದ ವರ್ಚಸ್ಸಿಗೆ ಧಕ್ಕೆ ತರುವ ಪ್ರಯತ್ನ ನಡೆಯುತ್ತಿದೆ ಎಂಬ ಟೀಕೆಗಳು ಸಭೆಯಲ್ಲಿ ಕೇಳಿಬಂದಿವೆ.**

ರಾಷ್ಟ್ರಮಟ್ಟದಲ್ಲೂ ಬಿಜೆಪಿ ಸಂಸತ್ನಲ್ಲಿ ಮುಡಾ ಹಾಗೂ ವಾಲೀಕಿ ಅಭಿವೃದ್ಧಿ ನಿಗಮದ ಪ್ರಕರಣವನ್ನು ಪ್ರಸ್ತಾಪಿಸಿದೆ.



**ಸ್ಟಾರ್ಟ್‌ಅಪ್‌ಗಳ ಉತ್ತೇಜನ, ಸಾಮರ್ಥ್ಯ ವೃದ್ಧಿಗಾಗಿ ಪಾಲುದಾರಿಕೆ ಮತ್ತು ಸಹಯೋಗ**

## ರಾಜ್ಯದಲ್ಲಿ ಹೊಸ ಸೈಬರ್ ಭದ್ರತಾ ನೀತಿ ಜಾರಿ

• ಉದಯವಾಹಿನಿ, ಬೆಂಗಳೂರು

ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ಎದುರಿಸಲು ಮತ್ತು ರಾಜ್ಯದ ಡಿಜಿಟಲ್ ಮೂಲಸೌಕರ್ಯವನ್ನು ರಕ್ಷಿಸಲು ಜಾಗೃತಿ, ಕೌಶಲ್ಯ ನಿರ್ಮಾಣ, ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮತ್ತು ತಂತ್ರಜ್ಞಾನ ಏಕೀಕರಣವನ್ನು ಉತ್ತೇಜಿಸಲು ಸರ್ಕಾರವು ಗುರುವಾರ ಸಮಗ್ರ ಸೈಬರ್ ಭದ್ರತಾ ನೀತಿ 2024 ನ್ನು ಆರಂಭಿಸಿದೆ.ಈ ನೀತಿಯು ಅರಿವು ಮತ್ತು ಶಿಕ್ಷಣ, ಕೌಶಲ್ಯ ನಿರ್ಮಾಣ, ಉದ್ಯಮ ಮತ್ತು ಸ್ಟಾರ್ಟ್‌ಅಪ್ ಗಳ ಉತ್ತೇಜನ, ಸಾಮರ್ಥ್ಯ ವೃದ್ಧಿಗಾಗಿ ಪಾಲುದಾರಿಕೆ ಮತ್ತು ಸಹಯೋಗದಂತಹ ಹಲವಾರು ಪ್ರಮುಖ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ರಾಜ್ಯ ಸರ್ಕಾರವು ಹೆಚ್ಚುತ್ತಿರುವ ಸೈಬರ್ ಭದ್ರತೆಯ ಪ್ರಾಮುಖ್ಯತೆಯನ್ನು ಗುರುತಿಸಿ, ನಮ್ಮ ನಾಗರಿಕರು ಮತ್ತು ಉದ್ಯಮಗಳಿಗೆ ಸುರಕ್ಷಿತ ಸೈಬರ್ ಸ್ಪೇಸ್ ನ್ನು ಸ್ಥಾಪಿಸಲು ಈ ನೀತಿಯನ್ನು ನಿಖರವಾಗಿ ರೂಪಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಪ್ರಯತ್ನಗಳಿಗೆ ಹೊಂದಿಕೊಂಡಿರುವ ನೀತಿಯು ಸೈಬರ್ ಬೆದರಿಕೆಗಳನ್ನು ಎದುರಿಸುವಲ್ಲಿ ಕರ್ನಾಟಕದ ಪೂರ್ವಭಾವಿ ನಿಲುವನ್ನು ಎತ್ತಿ ತೋರಿಸುತ್ತದೆ ಎಂದು ಅವರು ಒತ್ತಿ ಹೇಳಿದರು.



ಇದು ರಾಜ್ಯದ ಕೆ-ಟೆಕ್ ಸೆಂಟರ್ ಆಫ್ ಎಕ್ಸಲೆನ್ಸ್ ಫಾರ್ ಸೈಬರ್ ಸೆಕ್ಯುರಿಟಿ ಗಾಗಿ ಆಧಾರ ಸಂಸ್ಥೆಯಾಗಿದೆ. ಅವರು ನೆಟ್‌ವರ್ಕ್ ದೈತ್ಯ ಸಿಸ್ಕೋನಿಂದ ಕೌಶಲ್ಯ ಕಾರ್ಯಕ್ರಮವನ್ನು ಆರಂಭಿಸಿದ್ದಾರೆ.

ಸಿಸ್ಕೊ ಸಂಸ್ಥೆ ಜೊತೆಗಿನ ಈ ಪಾಲುದಾರಿಕೆಯು ಸುರಕ್ಷಿತ ಡಿಜಿಟಲ್ ಪರಿಸರವನ್ನು ಪೋಷಿಸುವ ನಮ್ಮ ಬದ್ಧತೆಗೆ ಸಾಕ್ಷಿಯಾಗಿದೆ. 40,000 ವ್ಯಕ್ತಿಗಳಿಗೆ ತರಬೇತಿ ನೀಡುವ ಮೂಲಕ, ಮಹಿಳೆಯರ ಸಬಲೀಕರಣಕ್ಕೆ ವಿಶೇಷ ಒತ್ತು ನೀಡುವುದರೊಂದಿಗೆ, ನಾವು ಕೌಶಲ್ಯದ ಅಂತರವನ್ನು ಪರಿಹರಿಸುವುದು ಮಾತ್ರವಲ್ಲದೆ ಟೆಕ್ ವಲಯದಲ್ಲಿ ಒಳಗೊಳ್ಳುವಿಕೆಯನ್ನು ಉತ್ತೇಜಿಸುತ್ತೇವೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ನೀತಿಯ ಎರಡನೇ ಭಾಗವು ರಾಜ್ಯದ ಐಟಿ ಸ್ವತ್ತುಗಳ ಸೈಬರ್ ಭದ್ರತೆ ಬಲಪಡಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಮೊದಲ ಭಾಗವು ಸಾರ್ವಜನಿಕ ಡೊಮೇನ್‌ನಲ್ಲಿದ್ದರೆ, ಎರಡನೆಯದು ರಾಜ್ಯದ ಐಟಿ ತಂಡಗಳು ಮತ್ತು ಇಲಾಖೆಗಳ ಐಟಿ ಅನುಷ್ಠಾನಗಳಿಗೆ ಆಂತರಿಕವಾಗಿರುತ್ತದೆ. ಈ ನೀತಿಯನ್ನು ಎಲೆಕ್ಟ್ರಾನಿಕ್ಸ್, ಐಟಿ-ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ), ಗೃಹ ಇಲಾಖೆ, ಸರ್ಕಾರಿ ಮತ್ತು ಖಾಸಗಿ ವಲಯಗಳ ಸಂಬಂಧಿತ ಪಾಲುದಾರರೊಂದಿಗೆ ಸಮಾಲೋಚಿಸಿ ಸಹಯೋಗದೊಂದಿಗೆ ಕರಡು ರಚಿಸಿದೆ.

### 2 ಭಾಗಗಳಲ್ಲಿ ನೀತಿ ಜಾರಿ

**ಮೊದಲ ಭಾಗವು ಸಾರ್ವಜನಿಕ, ಶೈಕ್ಷಣಿಕ, ಉದ್ಯಮ, ಸ್ಟಾರ್ಟ್-ಅಪ್‌ಗಳು ಮತ್ತು ಸರ್ಕಾರವನ್ನು ಒಳಗೊಂಡಂತೆ ಸಮಾಜದ ಎಲ್ಲಾ ವಿಭಾಗಗಳಲ್ಲಿ ಬಲವಾದ ಸೈಬರ್ ಭದ್ರತಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದರ ಮೇಲೆ ಕೇಂದ್ರೀಕರಿಸುತ್ತದೆ.**

| ಈ ದಿನದ ದರ | | | | |
| --- | --- | --- | --- | --- |
| ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,036/Gram24ct | ₹6,450/Gram22ct | ಬೆಳ್ಳಿ: ₹87.10/Gram |



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

### ಗುಣಧರ್ಮವಾನಿಜ ಜ್ಞಪ್ತಿಯೊಳಿನಿತಿಲ್ಲ

ನಿಜಗುಣರ ಪರಮಾನುಭವ ಬೋಧೆಯ ಮಾತು. ವಾಸ್ತವಿಕ ಅರಿವು ಜ್ಞಾನ, ದೇವ ಗುರು ಹಿರಿಯರ ಪೂಜೆ ಅರ್ಚನೆ ವಚನೋಪದೇಶ ಪರಿಪಾಲನೆ, ಸ್ವಾರ್ಥರಹಿತ ವಿವಿಧ ಪ್ರಾಮಾಣಿಕ ಸೇವೆ, ಜಪ ತಪ ಧ್ಯಾನ ಮೌನ ವ್ರತ ನಿಯಮ ನೀತಿ ಸತ್ಕಾರ್ಯ ದಯೆ ಪ್ರೀತಿ ಕರುಣೆ ನೆರವು ತ್ಯಾಗ ಸಹನೆ ಉದಾರತೆ ಭಕ್ತಿ ಮುಂತಾದವು ಸತ್ತ್ವಗುಣಧರ್ಮಗಳು. ಇವು ಕೂಡಾ ಚೈತನ್ಯಮಯಿ ಆತ್ಮನಲ್ಲಿ ಇಲ್ಲ. ರಾಗ ವಿಷಯಪ್ರೀತಿ, ವಿಷಯ ಸುಖದ ಸವಿ, ಶೃಂಗಾರ ಅಲಂಕಾರ ರಸಿಕತನ, ನಿರ್ದಿಷ್ಟ ಪ್ರಯೋಜನ ಪಡೆಯಲು ಯಜ್ಞ ಯಾಗಾದಿಗಳ ಅನುಷ್ಠಾನ ಮುಂತಾದ ಅದಿದು ಬೇಕೆಂಬ ಬಯಕೆಯ ಪ್ರವೃತ್ತಿ ರಜೋಗುಣಧರ್ಮ. ಇದು ಕೂಡಾ ಆತ್ಮನೊಳಗಿಲ್ಲ. ಅಹಂಕಾರದಿಂದ ಬೇರೆಯವರ ಬಾಯಿ ಮುಚ್ಚಿಸುವ ಅರ್ಥವಿಲ್ಲದ ವಾದ, ಪರರ ಮೇಲೆ ದೌರ್ಜನ್ಯ ಹಿಂಸೆ ನಿಂದೆ ವಂಚನೆ, ತಿನ್ನಬಾರದ್ದನ್ನು ತಿನ್ನುವುದು, ಕುಡಿಯಬಾರದ್ದನ್ನು ಕುಡಿಯುವುದು, ಆಡಬಾರದ್ದನ್ನು ಆಡುವುದು, ನೋಡಬಾರದ್ದನ್ನು ನೋಡುವುದು, ಕೇಳಬಾರದ್ದನ್ನು ಕೇಳುವುದು, ಮೂಸಬಾರದ್ದನ್ನು ಮೂಸುವುದು, ಮುಟ್ಟಬಾರದ್ದನ್ನು ಮುಟ್ಟುವುದು, ಮಾಡಬಾರದ್ದನ್ನು ಮಾಡುವುದು, ಹೋಗಬಾರದ ಕಡೆ ಹೋಗುವುದು, ಕೆಟ್ಟದ್ದರ ಆಲೋಚನೆ ಮುಂತಾದವು ತಮೋಗುಣದ ಧರ್ಮಗಳು. ಇವು ಕೂಡಾ ಆತ್ಮನೊಳಗಿಲ್ಲ. ಎಲ್ಲಕ್ಕೂ ಮೂಲ ಆತ್ಮಾ ನಿರ್ಗುಣ ನಿರಾಕಾರ. ಗುಣಾತೀತನಾಗಿ ನಿಲ್ಲುವುದೇ ನಿಜ ಧ್ಯೇಯ ಸಾಧನೆ.

# 39,121 ಕೋಟಿ ರೂ.ಮೀಸಲಿಟ್ಟಿದ್ದೇವೆ: ಸಿಎಂ

■ ದಲಿತರ ಅಭಿವೃದ್ಧಿಗೆ ನ್ಯಾಯಬದ್ಧವಾಗಿ ಸಲ್ಲಬೇಕಾಗಿರುವ ಬಜೆಟ್ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸಿ ಅನ್ಯಾಯ

• **ಉದಯವಾಹಿನಿ, ಬೆಂಗಳೂರು**

ಈ ಬಾರಿಯ ಬಜೆಟ್‌ನಲ್ಲಿ ಎಸ್‌ಸಿಎಸ್‌ಪಿ/ಟಿಎಸ್‌ಪಿ' ಯೋಜನೆಗೆ 39,121 ಕೋಟಿ ರೂ. ಮೀಸಲಿಟ್ಟಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಈ ಕುರಿತು ಮಾಹಿತಿ ಹಂಚಿಕೊಂಡಿರುವ ಸಿಎಂ ಸಿದ್ದರಾಮಯ್ಯ, ರಾಷ್ಟ್ರಮಟ್ಟದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪಹಂಚಿಕೆ (ಎಸ್ ಸಿಎಸ್ ಪಿ/ಟಿಎಸ್ ಪಿ) ಯೋಜನೆಯನ್ನು ಜಾರಿಗೊಳಿಸದೆ, ದಲಿತರ ಅಭಿವೃದ್ಧಿಗೆ ನ್ಯಾಯಬದ್ಧವಾಗಿ ಸಲ್ಲಬೇಕಾಗಿರುವ ಬಜೆಟ್ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸಿ ಅನ್ಯಾಯ ಮಾಡುತ್ತಿರುವ ಕೇಂದ್ರ ಸರ್ಕಾರಕ್ಕೆ ನಮ್ಮ ಸರ್ಕಾರವನ್ನು ಪ್ರಶ್ನಿಸುವ ಯಾವ ನೈತಿಕ ಅಧಿಕಾರ ಇದೆ?

ದಲಿತರ ಬಗ್ಗೆ ಮೊಸಳೆ ಕಣ್ಣೀರು ಸುರಿಸುತ್ತಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಎಸ್ ಸಿ/ಎಸ್ ಟಿ ಕಲ್ಯಾಣದ ಬಗ್ಗೆ ಕರ್ನಾಟಕ ಸರ್ಕಾರವನ್ನು ಪ್ರಶ್ನಿಸಬೇಕೆಂದು ಕರೆ ಕೊಟ್ಟಿದ್ದಾರೆ. ನಿರ್ಮಲಾ ಸೀತಾರಾಮನ್ ಅವರೇ, ನಿಮಗೆ ದಲಿತರ ಬಗ್ಗೆ ಅಷ್ಟೊಂದು ಕಾಳಜಿ ಇದ್ದರೆ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯನ್ನು ಜಾರಿಗೆ ತಂದು ಕೇಂದ್ರ ಬಜೆಟ್ ನಲ್ಲಿ ದಲಿತರ ಜನಸಂಖ್ಯೆಗೆ ಅನುಗುಣವಾಗಿ ಶೇಕಡಾ 25ರಷ್ಟು ಅನುದಾನವನ್ನು ಮೀಸಲಿಡಿ, ಆ ಮೇಲೆ

**ಎಸ್ ಸಿ ಎಸ್ ಪಿ/ಟಿಎಸ್ ಪಿ ಕಾಯ್ದೆಗಿಂತ ಮೊದಲು ರಾಜ್ಯದಲ್ಲಿ ದಲಿತ ಸಮುದಾಯದ ಕಲ್ಯಾಣಕ್ಕಾಗಿಯೇ ಜಾರಿಯಲ್ಲಿದ್ದ ವಿಶೇಷ ಘಟಕ ಯೋಜನೆಯನ್ವಯ 2013-14ರ ಸಾಲಿನಲ್ಲಿ ನೀಡಲಾಗಿದ್ದ ಅನುದಾನ ರೂ.8,616 ಕೋಟಿಯಾಗಿದ್ದರೆ, ಎಸ್ ಸಿ ಎಸ್ ಪಿ/ಟಿ ಎಸ್ ಪಿ ಕಾಯ್ದೆ ಜಾರಿಯಾದ ವರ್ಷ (2014-2015)ರ ಸಾಲಿನಲ್ಲಿ ನೀಡಲಾಗಿದ್ದ ಅನುದಾನ ರೂ.15,894 ಕೋಟಿ. ಈ ಮೊತ್ತ ಈಗ ಹೆಚ್ಚು ಕಡಿಮೆ 40,000 ಕೋಟಿ ರೂಪಾಯಿಗೆ ತಲುಪಿದೆ. ಇದು ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಇರುವ ದಲಿತರ ಬಗೆಗಿನ ಕಾಳಜಿ.**

ನಮ್ಮನ್ನು ಪ್ರಶ್ನೆ ಮಾಡಲು ಬನ್ನಿ. ಅಲ್ಲಿಯ ವರೆಗೆ ಮೌನವಾಗಿರುವುದು ನಿಮಗೆ ಕ್ಷೇಮ.

ಪ್ರಸಕ್ತ ಸಾಲಿನ ನಮ್ಮ ಸರ್ಕಾರದ ಬಜೆಟ್ ಗಾತ್ರ ರೂ.3,71,383 ಕೋಟಿ, ಅದರಲ್ಲಿ ರೂ.39,121 ಕೋಟಿಯನ್ನು ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಗೆ ಮೀಸಲಿಟ್ಟಿದ್ದೇವೆ.



**ದಲಿತರ ಬಗೆಗಿನ ಕಾಳಜಿ**

ಪ್ರಸಕ್ತ ಸಾಲಿನ ಕೇಂದ್ರ ಸರ್ಕಾರದ ಬಜೆಟ್ ರೂ.48.21 ಲಕ್ಷ ಕೋಟಿಯಾಗಿದ್ದು ಇದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿಗಾಗಿ ನೀಡಿರುವ ಅನುದಾನ ರೂ.2,90,401 ಕೋಟಿ ಮಾತ್ರ.

ನಿರ್ಮಲಾ ಸೀತಾರಾಮನ್ ಅವರೇ, ನಿಮ್ಮ ಬಜೆಟ್ ನೋಡಿದರೆ ನೀವು ಯಾರಿಗೆ ಹಲ್ವಾ ಹಂಚಿದ್ದೀರಿ ಎನ್ನುವುದು ಸ್ಪಷ್ಟವಾಗಿ ಕಣ್ಣಿಗೆ ರಾಚುತ್ತದೆ. ಇದನ್ನೆ ನಮ್ಮ ನಾಯಕರಾದ ರಾಹುಲ್ ಗಾಂಧಿಯವರು ಲೋಕಸಭೆಯಲ್ಲಿ ಹೇಳಿದ್ದು.

ಶೇಕಡಾ 75ರಷ್ಟು ಮಂದಿಯನ್ನು ಉಪವಾಸ ಬೀಳಿಸಿ ಶೇಕಡಾ 25 ಮಂದಿಗೆ ಹಲ್ವಾ ತಿನ್ನಿಸುತ್ತಿದ್ದೀರಿ. ಈ ನಿಮ್ಮ ದಲಿತ ವಿರೋಧಿ ನೀತಿ ಬಯಲಾಗುವ ಭಯದಿಂದಲೇ ನೀವು ಜಾತಿ ಗಣತಿಯನ್ನು ವಿರೋಧಿಸುತ್ತಿರುವುದು.

> **ಕರ್ನಾಟಕದಲ್ಲಿ ಎಸ್ ಸಿ ಎಸ್ ಪಿ/ಟಿ ಎಸ್ ಪಿ ಕಾಯ್ದೆಯನ್ನು ಜಾರಿಗೆ ತರಲು ದೊಡ್ಡ ಮಟ್ಟದ ಜನಾಂದೋಲನಗಳೇನು ನಡೆದಿರಲಿಲ್ಲ. ರಾಜ್ಯದ ಕಾಂಗ್ರೆಸ್ ಪಕ್ಷ, ದಲಿತ ಸಮುದಾಯದ ಮೇಲಿನ ಪ್ರಾಮಾಣಿಕ ಕಾಳಜಿಯ ಕಾರಣಕ್ಕಾಗಿ ಸ್ವಯಂ ಇಚ್ಛೆಯಿಂದ 2013ರ ಚುನಾವಣಾ ಪ್ರಣಾಳಿಕೆಯಲ್ಲಿ ಸೇರಿಸಿತ್ತು. ಅಧಿಕಾರಕ್ಕೆ ಬಂದ ನಂತರ 2014-15ರಲ್ಲಿ ಕಾಯ್ದೆಯನ್ನು ಅನುಷ್ಠಾನಕ್ಕೆ ತಂದು ನಾವು ನುಡಿದಂತೆ ನಡೆದಿದ್ದೆವು.**

> **ಈಗ ಹೇಳಿ ನಿರ್ಮಲಾ ಸೀತಾರಾಮನ್ ಅವರೇ, ದಲಿತರು ಮೊದಲು ಪ್ರಶ್ನೆ ಮಾಡಬೇಕಾಗಿರುವುದು ಯಾರನ್ನು ಎಸ್ ಸಿ ಎಸ್ ಪಿ-ಟಿ ಎಸ್ ಪಿ ಕಾಯ್ದೆಯೂ ಸೇರಿದಂತೆ ದಲಿತರ ಕಲ್ಯಾಣಕ್ಕಾಗಿ ಸಾಲುಸಾಲು ಯೋಜನೆಗಳನ್ನು ಜಾರಿಗೆ ತರುತ್ತಿರುವ ನಮ್ಮ ರಾಜ್ಯ ಸರ್ಕಾರವನ್ನೇ ಬಜೆಟ್ ನಲ್ಲಿ ದಲಿತರಿಗೆ ನ್ಯಾಯಬದ್ಧವಾಗಿ ಸಲ್ಲಬೇಕಾದ ಪಾಲನ್ನೂ ನೀಡದೆ ಅನ್ಯಾಯ ಎಸಗುತ್ತಿರುವ ಕೇಂದ್ರ ಸರ್ಕಾರ**

### ನಿಜ ಜೀವನದ ಸಿಂಘಮ್‌ಗಳು ರೋಲ್ ಮಾಡೆಲ್‌ಗಳಲ್ಲ, ಖಳನಾಯಕರು

• **ಉದಯವಾಹಿನಿ, ಬೆಂಗಳೂರು**

ಚಲನಚಿತ್ರ ಶೈಲಿ, ನಿಜ ಜೀವನದ ಸಿಂಘಮಗಳು ರೋಲ್ ಮಾಡೆಲ್‌ಗಳಲ್ಲ ಅವರು ಖಳನಾಯಕರು ಎಂದು ಚೇತನ್ ಅಹಿಂಸಾ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಪೊಲೀಸರ ಕ್ರೌರ್ಯ/ಅಕ್ರಮಗಳು ನಮ್ಮ ಪ್ರಜಾಪ್ರಭುತ್ವಕ್ಕೆ ಅಪಾಯಗಳಾಗಿವೆ. ನಾವು ಸಮಾನತಾವಾದಿಗಳು ನಮ್ಮ ಸೈದ್ಧಾಂತಿಕ ಶತ್ರುಗಳಿಗೂ ಸಹ ಮಾನವ ಹಕ್ಕುಗಳನ್ನು ಕೋರಬೇಕು ಮತ್ತು ಪೊಲೀಸ್ ಉಲ್ಲಂಘನೆಗಳನ್ನು ಎಂದಿಗೂ ಸಮರ್ಥಿಸಬಾರದು ಎಂದಿದ್ದಾರೆ. ಚಲನಚಿತ್ರ ಶೈಲಿ, ನಿಜ ಜೀವನದ 'ಸಿಂಘಮಗಳು' ರೋಲ್ ಮಾಡೆಲ್‌ಗಳಲ್ಲ ಅವರು ಖಳನಾಯಕರು. ಎಲ್ಲಾ ಕಾನೂನುಬಾಹಿರ ಚಿತ್ರಹಿಂಸೆ ವಿಧಾನಗಳನ್ನು ತನಿಖೆ ಮಾಡಿ ಶಿಕ್ಷಿಸಬೇಕು ಎಂದು ಹೇಳಿದ್ದಾರೆ.

### ಆ.14ರವರೆಗೆ ನ್ಯಾಯಾಂಗ ಬಂಧನ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

**ನಟ ದರ್ಶನ್‌ಗೆ ಜೈಲೇ ಗತಿ**

ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲು ಸೇರಿರುವ ನಟ ದರ್ಶನ್ ಹಾಗೂ ಎಲ್ಲಾ 17 ಆರೋಪಿಗಳ ನ್ಯಾಯಾಂಗ ಬಂಧನದ ಅವಧಿಯನ್ನು ಆಗಸ್ಟ್ 14ರ ವರೆಗೆ ವಿಸ್ತರಿಸಿ ಬೆಂಗಳೂರಿನ 24ನೇ ಸಿಎಂ ನ್ಯಾಯಾಲಯವು ಆದೇಶ ಹೊರಡಿಸಿದೆ.

ಹೌದು ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಿಂದು ವಿಚಾರಣೆ ನಡೆಸಿದ ನ್ಯಾಯಾಲಯವು, ಆಗಸ್ಟ್ 14ರವರೆಗೆ ನ್ಯಾಯಾಂಗ ಬಂಧನ ಅವಧಿಯನ್ನು ವಿಸ್ತರಿಸಿ ಬೆಂಗಳೂರಿನ 24ನೇ ೦ಅಒಒ ನ್ಯಾಯಾಲಯ ಇದೀಗ ಆದೇಶ ಹೊರಡಿಸಿದೆ.

ಇನ್ನು ನನಗೆ ಜೈಲು ಊಟ ಸೇರುತ್ತಿಲ್ಲ ಇದರಿಂದ ವಾಂತಿ, ಭೇದಿ ಅತಿಸಾರ ಆಗುತ್ತಿದೆ ಎಂದು ನಟ ದರ್ಶನ ಅವರು ಇತ್ತೀಚಿಗೆ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಮನೆ ಊಟ ಬಟ್ಟೆ ಹಾಗೂ ಇತರೆ ವಸ್ತುಗಳಿಗಾಗಿ ಅರ್ಜಿ ಸಲ್ಲಿಸಿದ್ದರು.

ವಿಚಾರಣೆ ನಡೆಸಿದ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಅರ್ಜಿಯನ್ನು ವಜಾಗೊಳಿಸಿತ್ತು. ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಆದೇಶ ಪ್ರಶ್ನಿಸಿ ಅವರ ಪರ ವಕೀಲರು ಹೈಕೋರ್ಟಿಗೆ ಅರ್ಜಿ ಸಲ್ಲಿಸಿದರು. ಅರ್ಜಿ ವಿಚಾರ ನಡೆಸಿದ ಹೈಕೋರ್ಟ್ ವಿಚಾರಣೆಯನ್ನು ಆಗಸ್ಟ್ 20ಕ್ಕೆ ಮುಂದೂಡಿತು.

### ಮಹಿಳಾ ಪಿಜಿಗಳ ಸುರಕ್ಷತೆಗೆ 13 ಅಂಶಗಳ ಕಠಿಣ ಮಾರ್ಗಸೂಚಿ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಕೋರಮಂಗಲದ ಮಹಿಳಾ ಪಿಜಿಯಲ್ಲಿ ನಡೆದ ಯುವತಿ ಕೊಲೆ ಪ್ರಕರಣದ ಬಳಿಕ ಎಚ್ಚೆತ್ತುಕೊಂಡಿರುವ ಪೊಲೀಸರು ನಗರದ ಪಿಜಿಗಳಿಗೆ ಒಟ್ಟು 13 ಅಂಶಗಳ ಕಠಿಣ ಮಾರ್ಗಸೂಚಿಗಳನ್ನು ನೀಡಿದ್ದಾರೆ. ಕೋರಮಂಗಲದ ಪಿಜಿಗೆ ಹಂತಕ ಸಲೀಸಾಗಿ ನುಗ್ಗಿ ಖಾಸಗಿ ಕಂಪನಿ ಉದ್ಯೋಗಿ ಕೃತಿಕುಮಾರಿಯನ್ನು ಭೀಕರವಾಗಿ ಕೊಲೆ ಮಾಡಿದ ದೃಶ್ಯ ನಗರವನ್ನೇ ಬೆಚ್ಚಿ ಬೀಳಿಸಿತ್ತು.

ಹೊರಗಿನವರು ಸಲೀಸಾಗಿ ಮಹಿಳಾ ಪಿಜಿಯೊಳಗೆ ಬರಲು ಸಾಧ್ಯವೇ ಎಂಬ ಪ್ರಶ್ನೆ ಎಲ್ಲರಲ್ಲೂ ಮೂಡಿತ್ತು. ಆ ಪಿಜಿಯಲ್ಲಿನ ಯುವತಿಯರ ಭದ್ರತೆಯ ಪ್ರಶ್ನೆ ಎದುರಾಗಿತ್ತು. ನಗರ ಪೊಲೀಸ್ ಆಯುಕ್ತರಾದ ಬಿ. ದಯಾನಂದ ಅವರು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ನಗರದಲ್ಲಿರುವ ಎಲ್ಲಾ ಪಿಜಿಗಳ ಡೇಟಾ ಸಂಗ್ರಹಿಸುವಂತೆ ನಗರದ ಎಲ್ಲಾ ಠಾಣೆಯ ಪೊಲೀಸ್ ಇನ್‌ಸಪೆಕ್ಟರ್ಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಪ್ರತಿಯೊಂದು ಪಿಜಿಯ ರಕ್ಷಣೆಯ ಬಗ್ಗೆ ಮಾಹಿತಿ ಪಡೆಯಲು ಪೊಲೀಸರು ಮುಂದಾಗಿದ್ದಾರೆ. ನಗರದಲ್ಲಿರುವ ಎಲ್ಲಾ ಪಿಜಿಗಳನ್ನು ಗುರುತಿಸುವುದರ ಜೊತೆಗೆ ಪಿಜಿಯಲ್ಲಿ ಪಾಲಿಸಬೇಕಾದ ಹಾಗೂ ಪೊಲೀಸರು ಕ್ರಮ ಕೈಗೊಳ್ಳಬೇಕಾದ ಬಗ್ಗೆ ಒಟ್ಟು 13 ಅಂಶಗಳ ಮಾರ್ಗಸೂಚಿಯನ್ನು ಆಯುಕ್ತರು ನೀಡಿದ್ದಾರೆ.

ಪ್ರಮುಖವಾಗಿ ಪಿಜಿಗಳಲ್ಲಿ ಕಡ್ಡಾಯವಾಗಿ ಸಿಸಿ ಟಿವಿ ಅಳವಡಿಸಬೇಕು. ಸೆಕ್ಯುರಿಟಿ ಗಾರ್ಡ್ ನಿಯೋಜಿಸಬೇಕು. ಪಿಜಿಯಲ್ಲಿ ನೆಲೆಸುವ ಪ್ರತಿಯೊಬ್ಬರ ಮಾಹಿತಿಗಳನ್ನು ಸಂಗ್ರಹಿಸಬೇಕು. ಜೊತೆಗೆ ಕೆವೈಸಿ ಮಾಡಿಸಬೇಕು. ಹೊಸದಾಗಿ ಜಾರಿಗೆ ತಂದಿರುವ ಸಾಫ್ಟವೇರ್ನಲ್ಲಿ ಎಲ್ಲಾ ಮಾಹಿತಿಗಳನ್ನು ನಮೋದಿಸಬೇಕು. ಪಿಜಿ ಮಾಲೀಕರು ಸುರಕ್ಷತಾ ಮಾಲೀಕರು ಕೈಗೊಳ್ಳಬೇಕು. ಆಹಾರದ ಗುಣಮಟ್ಟದ ಬಗ್ಗೆ ಗಮನಿಸಬೇಕು.

> **ಪೊಲೀಸರು ಪಿಜಿಗಳ ಟ್ರೇಡ್ ಲೆಸೆನ್‌ಸಗಳ ಬಗ್ಗೆ ಮಾಹಿತಿ ಸಂಗ್ರಹಿಸಬೇಕು. ಅನಧಿಕೃತವೆಂದು ಕಂಡುಬಂದರೆ ಬಿಬಿಎಂಪಿಗೆ ಮಾಹಿತಿ ನೀಡಬೇಕು. ಪಿಜಿಗಳಲ್ಲಿ ಅಕ್ರಮ, ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದರೆ ಮಾಹಿತಿ ಕಲೆ ಹಾಕಬೇಕು. ಬಿಬಿಎಂಪಿ ಅಧಿಕಾರಿಗಳ ಜೊತೆ ಸೇರಿ ಪ್ರಕರಣ ದಾಖಲಿಸಬೇಕು. ತಿಂಗಳಿಗೊಮ್ಮೆ ಆಯಾ ಠಾಣಾ ವ್ಯಾಪ್ತಿಗಳಲ್ಲಿನ ಪಿಜಿಗಳನ್ನು ಪರಿಶೀಲನೆ ಮಾಡಬೇಕು. ಪಿಜಿಗಳಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂಬ ಮಾರ್ಗಸೂಚಿಗಳನ್ನು ನೀಡಲಾಗಿದೆ.**

### ರೇವಣ್ಣ ಸೇರಿ 7 ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದ ಎಸ್‌ಐಟಿ!

• **ಉದಯವಾಹಿನಿ, ಬೆಂಗಳೂರು**

ಮಹಿಳೆಯ ಅಪಹರಣ ಪ್ರಕರಣ ಸಂಬಂಧ ಎಸ್‌ಐಟಿ ಪೊಲೀಸರು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಸೇರಿದಂತೆ 7 ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ. ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಅತ್ಯಾಚಾರ ಆರೋಪ ಪ್ರಕರಣ ಸಂಬಂಧ ಮಹಿಳೆಯ ಅಪಹರಣ ಸಂಬಂಧ ಎಸ್‌ಐಟಿ ಅಧಿಕಾರಿಗಳು ಇಂದು ಬೆಂಗಳೂರಿನ ವಿಶೇಷ ಕೋರ್ಟ್‌ಗೆ ಚಾರ್ಜ್ ಶೀಟ್ ಸಲ್ಲಿಸಿದೆ. ರೇವಣ್ಣ ಸೂಚನೆ ಮೇರೆಗೆ ಅಪಹರಣ ಮಾಡಲಾಗಿತ್ತು ಎಂದು ಚಾರ್ಜ್ ಶೀಟ್‌ನಲ್ಲಿ ಉಲ್ಲೇಖಿಸಲಾಗಿದ್ದು, ರೇವಣ್ಣ ಪತ್ನಿ ಭವಾನಿ ರೇವಣ್ಣ ಪಾತ್ರದ ಬಗ್ಗೆಯೂ ಚಾರ್ಜ್ ಶೀಟ್‌ನಲ್ಲಿ ಉಲ್ಲೇಖಿಸಲಾಗಿದೆ ಎನ್ನಲಾಗಿದೆ. ಮಹಿಳೆಯ ಅಪಹರಣ ಪ್ರಕರಣ ಸಂಬಂಧ ಎಸ್ ಐಟಿ ಮಾಜಿ ಸಚಿವ ಹೆಚ್.ಡಿ. ರೇವಣ್ಣರನ್ನು ಬಂಧಿಸಿತ್ತು.

### ಸಿಎಂಗೆ ಶೋಕಾಸ್ ನೋಟಿಸ್

• **ಉದಯವಾಹಿನಿ, ಬೆಂಗಳೂರು**

ಮುಡಾ ಹಗರಣ ಆರೋಪದಲ್ಲಿ ಸಿಎಂ ಸಿದ್ದರಾಮಯ್ಯ ಅವರಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಶೋಕಾಸ್ ನೋಟಿಸ್ ಜಾರಿ ಮಾಡಿರುವುದು ರಾಜಕೀಯ ಪ್ರೇರಿತವಾಗಿದ್ದು, ಈ ಮೂಲಕ ಬಿಜೆಪಿ ರಾಜಭವನವನ್ನು ದುರುಪಯೋಗಪಡಿಸಿಕೊಂಡಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಈ ಸಂಬಂಧ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು, ಈ ಪ್ರಕರಣ ಸಂಬಂಧ ಹಿಂದೆ ಇಡಿ, ಸಿಬಿಐ ಮೂಲಕ ಪ್ರಯತ್ನಿಸಿದ್ದ ಬಿಜೆಪಿ ಇದೀಗ ರಾಜ್ಯಪಾಲರ ಕಚೇರಿಯನ್ನು ಬಳಸಿಕೊಳ್ಳುತ್ತಿದೆ. ಶೋಕಾಸ್ ನೋಟಿಸ್ ಬಗ್ಗೆ ಚರ್ಚಿಸಿದ್ದು, ಅದರ ಬಗ್ಗೆ ನಿರ್ಧಾರ ಕೈಗೊಳ್ಳುತ್ತೇವೆ. ಶೋಕಾಸ್ ನೋಟಿಸ್ ನ ಕಾನೂನು ಸ್ಥಿತಿ ಕುರಿತು ಬಹಿರಂಗಪಡಿಸುವುದಿಲ್ಲ. ಇದು ರಾಜಕೀಯ ಪ್ರೇರಿತವಾಗಿದೆ ಎಂದರು. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಈ ಸಂಬಂಧ ಎಕ್ಸ್‌ನಲ್ಲಿ ಆಕ್ರೋಶ ಹೊರಹಾಕಿದ್ದಾರೆ. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಪಾಲರ ಕಚೇರಿಯನ್ನು ದುರ್ಬಳಕೆ ಮಾಡಿಕೊಂಡು ರಾಜ್ಯ ಸರ್ಕಾರಗಳನ್ನು ಅಸ್ಥಿರಗೊಳಿಸುವ, ಕಿರುಕುಳಕೊಡುವ ಕೆಟ್ಟ ಸಂಪ್ರದಾಯವನ್ನು ಕೇಂದ್ರದ ಬಿಜೆಪಿ ಸರ್ಕಾರ ಅನುಸರಿಸುತ್ತಿದೆ.

### ಕರ್ನಾಟಕದಲ್ಲಿ ಮಳೆ ಬಗ್ಗೆ ಹೊಸ ಮಾಹಿತಿ ಕೊಟ್ಟ ಹವಾಮಾನ ಇಲಾಖೆ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಕರ್ನಾಟಕದಾದ್ಯಂತ ಕಳೆದ ಕೆಲವು ದಿನಗಳಿಂದ ನಿರಂತರ ಮಳೆಯಾಗುತ್ತಿದೆ. ಮಳೆಯ ಬಗ್ಗೆ ಹವಾಮಾನ ಇಲಾಖೆ ಲೇಟೆಸ್ಟ್ ಅಪ್ ಡೇಟ್ ಒಂದನ್ನು ನೀಡಿದೆ. ಇನ್ನೂ ಒಂದು ವಾರ ಮಳೆ ಗ್ಯಾರಂಟಿ ಎಂದು ವರದಿ ನೀಡಿದೆ.

ನಿನ್ನೆ ಹಲವು ದಿನಗಳ ನಂತರ ರಾಜ್ಯ ರಾಜಧಾನಿ ಬೆಂಗಳೂರಿನಲ್ಲೂ ಉತ್ತಮ ಮಳೆಯಾಗಿತ್ತು. ಸುರಿಯಲಾರಂಭಿಸಿದ್ದ ಮಳೆರಾಯ ರಾತ್ರಿವರೆಗೂ ಅಬ್ಬರಿಸಿದ್ದಾನೆ.

ಪರಿಣಾಮ ರಸ್ತೆಗಳಲ್ಲಿ ನೀರು ನಿಂತು ವಾಹನ ಸವಾರರು ಪರದಾಡುವಂತಾಯಿತು. ಕೆಲವೆಡೆ ಮನೆಗಳಿಗೂ ನೀರು ನುಗ್ಗಿದ ವರದಿಯಾಗಿದೆ.

ಇನ್ನು, ಕರಾವಳಿ ಜಿಲ್ಲೆ, ಉತ್ತರ ಕರ್ನಾಟಕದ ಕೆಲವು ಭಾಗಗಳಲ್ಲಿ ಈಗಾಗಲೇ ನೆರೆ ಸದೃಶ ವಾತಾ ವರಣ ಏದೆ. ಬಹುತೇಕ ಡ್ಯಾಮ್‌ಗಳು ಭರ್ತಿಯಾಗಿದ್ದು ಜನರು ಪ್ರವಾಹದ ಭೀತಿಯಲ್ಲಿದ್ದಾರೆ. ಇಂದೂ ಕೂಡಾ ಮೋಡ ಕವಿದ ವಾತಾವಾರಣವಿದ್ದು ಕರ್ನಾಟಕಾದ್ಯಂತ ಮಳೆಯಾಗುವ ನಿರೀಕ್ಷೆಯಿದೆ.

ಹವಾಮಾನ ಇಲಾಖೆ ವರದಿ ಪ್ರಕಾರ ಆಗಸ್ಟ್ 6 ರವರೆಗೂ ವರುಣನ ಅಬ್ಬರ ಮುಂದುವರಿಯಲಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರೆಡ್ ಅಲರ್ಟ್, ಉಡುಪಿ, ಉತ್ತರ ಕನ್ನಡ, ಕೊಡಗು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಮತ್ತು ಶಿವಮೊಗ್ಗ, ಬೆಳಗಾವಿ, ಚಿಕ್ಕಮಗಳೂರು ಜಿಲ್ಲೆಯಲ್ಲಿ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ.

### ಪ್ಲೇಟ್ ಬುಕಿಂಗ್ ವೇಳೆ ಇರಲಿ ಎಚ್ಚರ : ಸೈಬರ್ ವಂಚಕರಿಂದ 95 ಸಾವಿರ ರೂ. ಕಳೆದುಕೊಂಡ ವ್ಯಕ್ತಿ!

• **ಉದಯವಾಹಿನಿ, ಬೆಂಗಳೂರು**





ಉದಯವಾಹಿನಿ ಚಿತ್ರ

ವಾಹನಗಳಿಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಬುಕಿಂಗ್ ಮಾಡುವಾಗ ಜನರು ಇದೀಗ ಬಹಳ ಎಚ್ಚರಿಕೆ ಇರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಹೌದು ಬೆಂಗಳೂರಲ್ಲಿ ವ್ಯಕ್ತಿಯೊಬ್ಬರು ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಬುಕಿಂಗ್ ಮಾಡಿದ ಕೂಡಲೇ ಬರೋಬ್ಬರಿ 95 ಸಾವಿರ ರೂ.ಕಳೆದುಕೊಂಡಿದ್ದಾರೆ.

ಹೌದು, ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಹೆಸರಲ್ಲಿ ಸೈಬರ್ ವಂಚಕ ಜಾಲ ಸಕ್ರಿಯವಾಗಿದೆ. ವೆಬ್‌ಸೈಟ್ ಲಿಂಕ್ ಕ್ಲಿಕ್ ಮಾಡ್ತಿದ್ದಂತೆ ನಿಮ್ಮ ಅಕೌಂಟ್‌ನಲ್ಲಿರೊ ಹಣ ಮಾಯವಾಗಲಿದೆ. ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಬುಕ್ ಮಾಡಿದ್ದ ವಿಜಿತ್ ಕುಮಾರ್‌ಗೆ 95 ಸಾವಿರ ವಂಚನೆ ಮಾಡಲಾಗಿದೆ. ತನಗೆ ವಂಚನೆಯಾಗಿರುವ ಬಗ್ಗೆ ವಿಜಿತ್ ಕುಮಾರ್ ಅವರು ಬಾಗಲೂರು ಪೊಲೀಸ್ ಠಾಣೆಯಲ್ಲಿ FIR ದಾಖಲಿಸಿದ್ದಾರೆ. ವಿಜಿತ್ ಕುಮಾರ್ ತಮ್ಮ ವಾಹನಕ್ಕೆ ನಂಬರ್ ಪ್ಲೇಟ್ ಬುಕ್ ಮಾಡಲು bookmyhsrp.net ಲಿಂಕ್‌ನಲ್ಲಿ ರಿಜಿಸ್ಟರ್ ಮಾಡಿದ್ದರು. ಆದರೆ, ಒಂದು ವಾರದ ನಂತರ ನಿಮ್ಮ ಅಡ್ರೆಸ್ ಸರಿ ಇಲ್ಲ, ಕೆಳಗೆ ಕೊಟ್ಟ ಲಿಂಕ್ ಕ್ಲಿಕ್ ಮಾಡಿ ಅಪ್ಡೇಟ್ ಮಾಡಿ ಎಂದು ಮೇಲ್ ಬಂದಿತ್ತು. ಈ ಲಿಂಕ್ ಕ್ಲಿಕ್ ಮಾಡಿ ಅಡ್ರೆಸ್ ಅಪ್ಲೋಡ್ ಮಾಡಿದ್ದನು. ಇದಾದ ನಾಲ್ಕು ದಿನಗಳಲ್ಲಿ ಹಂತ ಹಂತವಾಗಿ ವಿಜಿತ್‌ಕುಮಾರ್ ಕ್ರೆಡಿಟ್ ಕಾರ್ಡ್‌ನಿಂದ 95 ಸಾವಿರ ರೂ. ಹಣ ಕಡಿತವಾಗಿದೆ.

> **ರಾಜ್ಯದಲ್ಲಿ ಇನ್ನೂ ಶೇ.55ಕ್ಕಿಂತ ಹೆಚ್ಚಿನ ವಾಹನ ಸವಾರರು ತಮ್ಮ ವಾಹನಗಳಿಗೆ ಹೆಚ್‌ಎಸ್ ಆರ್‌ಪಿ ನಂಬರ್ ಪ್ಲೇಟ್ ಪಡೆದಿಲ್ಲ. ಈ ಹಿನ್ನೆಲೆಯಲ್ಲಿ ಸರ್ಕಾರದಿಂದ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಪಡೆಯುವ ಅವಧಿಯನ್ನು ಈಗಾಗಲೇ 3 ಬಾರಿ ವಿಸ್ತರಣೆ ಮಾಡಲಾಗಿದೆ. ಅರ್ಜಿ ಸಲ್ಲಿಕೆ ವೇಳೆ ಸಾರಿಗೆ ಇಲಾಖೆಯ ಹಾಗೂ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯದ ವೆಬ್‌ಸೈಟ್‌ಗಳನ್ನು ಸರಿಯಾಗಿ ಗುರುತಿಸಿ ಅಪ್ಲೈ ಮಾಡಬೇಕು.**

### ಉರುಳಿಬಿದ್ದ ಭಾರಿ ಮರ, ಅಬ್ಬಾ ಬದುಕಿತು ಬಡಜೀವ..!

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿ ಸಿಬ್ಬಂದಿಗಳ ನಿರ್ಲಕ್ಷ್ಯಕ್ಕೆ ಮತ್ತೊಂದು ಜೀವ ಬಲಿಯಾಗುವುದು ಸ್ವಲ್ಪದರಲ್ಲೇ ತಪ್ಪಿರುವ ಘಟನೆ ಗೋವಿಂದರಾಜನಗರದಲ್ಲಿ ನಡೆದಿದೆ. ಮಳೆಯಿಂದ ಶಿಥಿಲಗೊಂಡಿದ್ದ ಮರ ಉರುಳಿಬಿದ್ದ ಸ್ಥಳದಲ್ಲಿ ಪೌರ ಕಾರ್ಮಿಕ ಮಹಿಳೆಯೊಬ್ಬರು ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.ಗೋವಿಂದರಾಜ ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸರಸ್ವತಿನಗರದಲ್ಲಿ ಈ ಘಟನೆ ನಡೆದಿದೆ.

ಮಳೆಯಾದ ಸಂದರ್ಭದಲ್ಲಿ ಶಿಥಿಲಗೊಂಡಿದ್ದ ಬೃಹತ್ ಮರವೊಂದು ಇಂದು ಬೆಳಿಗ್ಗೆ ರಸ್ತೆ ಪಕ್ಕದ ವಿದ್ಯುತ್‌ಕಂಬದ ಮೇಲೆ ಬಿತ್ತು. ಮರ ಬಿದ್ದ ರಭಸಕ್ಕೆ ವಿದ್ಯುತ್‌ಕಂಬ ಕಟ್ಟಾಗಿ ನೆಲಕ್ಕೆ ಬಿತ್ತು. ಈ ಸಂದರ್ಭದಲ್ಲಿ ಕಸ ಸಂಗ್ರಹ ಮಾಡುತ್ತಿದ್ದ ಪೌರ ಕಾರ್ಮಿಕ ಮಹಿಳೆಯೊಬ್ಬರು ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಘಟನೆಯಲ್ಲಿ ಮನೆ ಮೇಲೆ ಮರ ಬಿದ್ದು ಕಟ್ಟಡ, ಮನೆ ಮುಂದೆ ನಿಂತಿದ್ದ ಕಾರಿಗೂ ಹಾನಿಯಾಗಿದೆ. ಇಂದು ಉರುಳಿಬಿದ್ದಿರುವ ಮರ ಶಿಥಿಲಗೊಂಡಿದ್ದು ಅದನ್ನು ತೆರವುಗೊಳಿಸುವಂತೆ ಈ ಹಿಂದೆ ಬಿಬಿಎಂಪಿಗೆ ದೂರು ನೀಡಲಾಗಿತ್ತು. ಆದರೂ ಪಾಲಿಕೆಯವರು ಇದುವರೆಗೂ ಮರವನ್ನು ತೆರವುಗೊಳಿಸದಿರುವುದೇ ಇಂದಿನ ಅನಾಹುತಕ್ಕೆ ಕಾರಣ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಬಿಜೆಪಿ ಪಾದಯಾತ್ರೆಗೆ ಹೋಗಲು ಒಪ್ಪಿದ ಕುಮಾರಸ್ವಾಮಿ

• **ಉದಯವಾಹಿನಿ, ಬೆಂಗಳೂರು**

ಮುಡಾ ಹಗರಣಕ್ಕೆ ಸಂಬಂಧಿಸಿ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಬೆಂಗಳೂರು ಮೈಸೂರು ಪಾದಯಾತ್ರೆ ವಿಚಾರದಲ್ಲಿ ಬಿಜೆಪಿ-ಜೆಡಿಎಸ್ ನಾಯಕರ ನಡುವೆ ಸ್ಫೋಟಿಸಿದ್ದ ಭಿನ್ನಮತ ಶಮನವಾಗಿದೆ ಎಂದು ತಿಳಿದುಬಂದಿದೆ. ಬಿಜೆಪಿ ಮುಂದಾಳತ್ವದಲ್ಲಿ ಆ.3ರಿಂದ ನಡೆಯಲಿರುವ ಪಾದಯಾತ್ರೆಗೆ ಹಿಂದೇಟು ಹಾಕಿದ್ದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಮನವೊಲಿಸುವಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಯಶಸ್ವಿಯಾಗಿದ್ದಾರೆ. ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಚರ್ಚಿಸಿದ ವಿಜಯೇಂದ್ರ, ಹೆಚ್ಡಿಕೆ, ಜೆಡಿಎಸ್ ನಾಯಕರು ಪಾದಯಾತ್ರೆಯಲ್ಲಿ ಭಾಗಿಯಾಗಲು ಮನವೊಲಿಸಿದ್ದಾರೆ. ಈ ಮಧ್ಯೆಯೇ ಕುಮಾರಸ್ವಾಮಿ ಕೂಡಾ ಅಮೀತ್ ಶಾ ಜೊತೆ ಮಾತುಕತೆ ನಡೆಸಿ ಪಾದಯಾತ್ರೆಗೆ ಹೋಗಲು ನಿರ್ಧಾರ ಮಾಡಿದ್ದಾರಂತೆ.

### ದೋಷಾರೋಪ ಪಟ್ಟಿಯಲ್ಲಿ ಭವಾನಿ ರೇವಣ್ಣ ಪಾತ್ರದ ಬಗ್ಗೆ ಉಲ್ಲೇಖ

• **ಉದಯವಾಹಿನಿ, ಬೆಂಗಳೂರು**

ಕೆ.ಆರ್ ನಗರದ ಮಹಿಳೆಯ ಕಿಡ್ನಾಪ್ ಪ್ರಕರಣದಲ್ಲಿ ಎಸ್‌ಐಟಿ ಅಧಿಕಾರಿಗಳು ದೋಷರೋಪ ಪಟ್ಟಿ ಸಲ್ಲಿಸಿದ್ದು, ಇದರಲ್ಲಿ ಮಾಜಿ ಸಚಿವ ಎಚ್ ಡಿ ರೇವಣ್ಣ ಜತೆಗೆ ಪತ್ನಿ ಭವಾನಿ ರೇವಣ್ಣ ಅವರನ್ನು ಆರೋಪಿ ಎಂದು ಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ. ಅತ್ಯಾಚಾರ ಪ್ರಕರಣದ ಸಂತ್ರಸ್ತೆಯ ಅಪಹರಣ ಪ್ರಕರಣದಲ್ಲಿ 7 ಆರೋಪಿಗಳ ವಿರುದ್ಧ 42ನೇ ಎಸಿಎಂಎಂ ನ್ಯಾಯಾಲಯಕ್ಕೆ ಎಸ್‌ಐಟಿ ದೋಷರೋಪ ಪಟ್ಟಿ ಸಲ್ಲಿಕೆ ಮಾಡಿದೆ. ಈ ಪ್ರಕರಣದಲ್ಲಿ ಭವಾನಿ ರೇವಣ್ಣ ಅವರು 8ನೇ ಆರೋಪಿಯಾಗಿದ್ದಾರೆ. ರೇವಣ್ಣ ಸೂಚನೆ ಮೇರೆಗೆ ಮಹಿಳೆ ಅಪಹರಣ ಮಾಡಲಾಗಿತ್ತು ಎಂದು ಚಾರ್ಜ್ ಶೀಟ್ ನಲ್ಲಿ ಉಲ್ಲೇಖಿಸಲಾಗಿದೆ. ಹಾಗೆಯೇ ಪ್ರಕರಣದಲ್ಲಿ ರೇವಣ್ಣ ಪತ್ನಿ ಭವಾನಿ ರೇವಣ್ಣ ಪಾತ್ರವೂ ಇದೆ ಎಂದು ಉಲ್ಲೇಖಿಸಲಾಗಿದೆ ಎಂದು ತಿಳಿದುಬಂದಿದೆ. ಲೈಂಗಿಕ ದೌರ್ಜನ್ಯ ಪ್ರಕರಣದ ಸಂತ್ರಸ್ತೆಯನ್ನು ಕಿಡ್ನಾಪ್ ಮಾಡಿದ ಆರೋಪದ ಮೇಲೆ ಕೆಆರ್ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಮಾಜಿ ಸಚಿವ ಹೆಚ್. ಡಿ ರೇವಣ್ಣ ಅವರನ್ನು ಎಸ್ ಐಟಿ ಅಧಿಕಾರಿಗಳು ಬಂಧಿಸಿದ್ದರು. ಹೆಚ್.ಡಿ ರೇವಣ್ಣ ಜಾಮೀನು ಪಡೆದು ಬಿಡುಗಡೆಯಾಗಿದ್ದಾರೆ.

# ವಿವಿಧ ಯೋಜನೆಗಳಡಿ ಸಾಲ, ಸೌಲಭ್ಯಕ್ಕೆ ಅರ್ಜಿ ಆಹ್ವಾನ

■ ಚಾಲ್ತಿಯಲ್ಲಿರುವ ಜಾತಿ ಆದಾಯ ಪ್ರಮಾಣ ಪತ್ರ ಕಡ್ಡಾಯ ■ ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಗಮದಿಂದ 2024-25ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ, ಈ ಯೋಜನೆಗಳಡಿ ಸಹಾಯಧನ/ಸಾಲ- ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ.


ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31/08/2024 (ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ)

**ಅರ್ಜಿ ಸಲ್ಲಿಸಲು ಇರಬೇಕಾದ ಸಾಮಾನ್ಯ ಅರ್ಹತೆಗಳು,**

1. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
2. ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಸರ್ಕಾರದ ಆದೇಶ ಸಂಖ್ಯೆ:ಹಿಂವಕ/155/ಬಿಸಿಎ/2020, ದಿನಾಂಕ: 28/09/2020ರನ್ವಯ ಕಾಡುಗೊಲ್ಲ ಜಾತಿಗೆ ಸೇರಿ ರಬೇಕು.
3. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ.
4. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಗಮದ/ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು.
6. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು.
7. ಅರಿವು ಯೋಜನೆಯಡಿ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನ ರೂ.3.50 ಲಕ್ಷಗಳು,
8. ಸ್ವಾವಲಂಬಿ ಸಾರಥಿ ಯೋಜನೆಯಡಿ ಅರ್ಜಿದಾರರು 21 ವರ್ಷ ಮೇಲ್ಪಟ್ಟು 45 ವರ್ಷದ ಮಿತಿಯಲ್ಲಿರಬೇಕು.
9. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು.
10. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ. 98,000/- ನಗರ ಪ್ರದೇಶದವರಿಗೆ ರೂ. 1,20,000/-ಗಳ ಮಿತಿಯೊಳಗಿರಬೇಕು.
11. ಆಯ್ಕೆ ಮಾಡುವಾಗ ಮಹಿಳೆಯರಿಗೆ 33%, ವಿಕಲಚೇತನರಿಗೆ 5% ಹಾಗೂ ತೃತೀಯ ಲಿಂಗಿಗಳಿಗೆ ಶೇ% ಮೀಸಲಾತಿ ಇರಿಸಿದೆ.

**ಅರ್ಜಿದಾರರು ಕಡ್ಡಾಯವಾಗಿ ಆಧಾರ್ ಕಾರ್ಡ್**

> **ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಕಡ್ಡಾಯವಾಗಿ ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು/ವಿಳಾಸ/ಜಾತಿ, ಆದಾಯ ಪ್ರಮಾಣ ಪತ್ರ ಮತ್ತುಬ್ಯಾಂಕ್ ಪಾಸ್ ಪುಸ್ತಕಗಳಲ್ಲಿ ತಾಳೆ ಯಾಗಬೇಕು (ಶ್ರೀ ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳು) ಬೆಂಗಳೂರು-ಒನ್/ಕರ್ನಾಟಕ-ಒನ್/ಅಟಲ್-ಜಿ ಜನಸ್ನೇಹಿ ಕೇಂದ್ರ, ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ.**



ಉದಯವಾಹಿನಿ ಚಿತ್ರ

> **ನಿಗಮದ ಕೇಂದ್ರ ಕಛೇರಿಯ ದೂರವಾಣಿ ಸಂಖ್ಯೆ 080-22374848/7899899039ಯಿಂದ ಪಡೆಯಬಹುದಾಗಿದೆ. ಹಾಗೂ ಜಿಲ್ಲೆಗಳಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಛೇರಿಗಳಲ್ಲಿ ಪೂರ್ವಾಹ್ನ 10.00ರಿಂದ ಸಂಜೆ 5.30 ರವರೆಗೆ ಸಂಪರ್ಕಿಸಬಹುದಾಗಿದೆ.**

#### ಆನ್ ಲೈನ್ ಮೂಲಕ ಅರ್ಜಿ ಸ್ವೀಕರಿಸುವ ಯೋಜನೆಗಳು

- ಸ್ವಯಂ ಉದ್ಯೋಗ ನೇರಸಾಲ ಯೋಜನೆ
- ಅರಿವು-ಶೈಕ್ಷಣಿಕ ನೇರಸಾಲ ಯೋಜನೆ (ಹೊಸದು)
- ಗಂಗಾ ಕಲ್ಯಾಣ ಯೋಜನೆ. ಈ ಯೋಜನೆಯಲ್ಲಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕ ಮಗಳೂರು, ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು ಇತರೇ ಜಿಲ್ಲೆಗಳಲ್ಲಿ ಕನಿಷ್ಠ 2 ಎಕರೆ ಹೊಂದಿರಬೇಕು(4) ಸ್ವಯಂ ಉದ್ಯೋಗ ನೇರಸಾಲ (ಬ್ಯಾಂಕ್‌ಗಳ ಸಹಯೋಗದೊಂದಿಗೆ)
- ಸ್ವಾವಲಂಬಿ ಸಾರಥಿ ಯೋಜನೆ
- ವಿದೇಶಿ ವ್ಯಾಸಂಗ ಯೋಜನೆ-ಈ ಯೋಜನೆಯಡಿ ವಾರ್ಷಿಕ ವರಮಾನವು ರೂ.8.00 ಲಕ್ಷಗಳ ಮಿತಿಯಲ್ಲಿರಬೇಕು. ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿ 31/08/2024 ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

# ನಿಷ್ಠೂರವಾಗಿ ಸ್ಥಳಾಂತರ ಮಾಡಿ: ಸಚಿವ ಕೃಷ್ಣ ಬೈರೇಗೌಡ

## • ಜೀವ ಹೋದ ನಂತರ ಪರಿಹಾರ ನೀಡುವುದಕ್ಕಿಂತ ಜೀವ ಉಳಿಸುವುದು ನಮ್ಮ ಉದ್ದೇಶವಾಗಬೇಕು

• ಉದಯವಾಹಿನಿ ಮಡಿಕೇರಿ

ಕೇರಳದ ವಯನಾಡ್‌ನಲ್ಲಿ ಸಂಭವಿಸಿದಂತಹ ದುರಂತ ಎಲ್ಲಿ ಬೇಕಾದರೂ ಸಂಭವಿಸಬಹುದು. ಕೊಡಗು ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾಗುತ್ತಿರುವುದರಿಂದ ಅಪಾಯಕಾರಿ ಸ್ಥಳಗಳಲ್ಲಿ ವಾಸಿಸುತ್ತಿರುವವರು ಸ್ವಯಂಪ್ರೇರಣೆಯಿಂದ ಸ್ಥಳಾಂತರವಾಗಬೇಕು. ಇಲ್ಲದಿದ್ದರೆ, ಜಿಲ್ಲಾಡಳಿತ ನಿಷ್ಠುರವಾಗಿ ಸ್ಥಳಾಂತರ ಮಾಡಬೇಕು.

ಜೀವ ಹೋದ ನಂತರ ಪರಿಹಾರ ನೀಡುವುದಕ್ಕಿಂತ ಜೀವ ಉಳಿಸುವುದು ನಮ್ಮ ಉದ್ದೇಶವಾಗಬೇಕು' ಎಂದು ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ಸೂಚಿಸಿದರು. ಕೊಡಗು ಜಿಲ್ಲೆಯಲ್ಲಿ ಗುಡ್ಡ ಕುಸಿತದಂತಹ ಘಟನೆಗಳು ಸಂಭವಿಸುವಂತಹ ಸ್ಥಳಗಳಲ್ಲಿ ಹೆಚ್ಚಿನ ನಿಗಾ ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಮಳೆಹಾನಿ ಪ್ರದೇಶಗಳ ವೀಕ್ಷಣೆಗೆಂದು ಬುಧವಾರ ಜಿಲ್ಲೆಗೆ ಆಗಮಿಸಿದ್ದ ಇಬ್ಬರೂ ಸಚಿವರು ಕುಶಾಲನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲಾಧಿಕಾರಿ ಸೇರಿದಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ರಸ್ತೆ, ಸೇತುವೆ, ವಿದ್ಯುತ್ ಕಂಬ ಮತ್ತು ಪರಿವರ್ತಕಗಳು, ಬೆಳೆ ಹಾಗೂ ಮನೆ ಹಾನಿ ಹೀಗೆ ಪ್ರಾಕೃತಿಕ ವಿಕೋಪದಿಂದ

### ಪ್ರಾಣ ಹಾನಿ ಆಗದಂತೆ ಮುಂಜಾಗ್ರತಾ ಕ್ರಮ

**ಹಾನಿಯಾದ ಮನೆಗಳಿಗೆ ಹಾಗೂ ಸ್ವತ್ತುಗಳಿಗೆ ಅಗತ್ಯ ನೆರವು ನೀಡುವಂತೆ ಹಾಗೂ ಪ್ರಾಣ ಹಾನಿ ಆಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಇದೆ ಸಂಧರ್ಭದಲ್ಲಿ ಸಚಿವರು ಸೂಚನೆ ನೀಡಿದರು. ಗುಡ್ಡೆಹೊಸೂರು ಬಳಿಯ ತೆಪ್ಪದಕಂಡಿಗೆ ಭೇಟಿ ನೀಡಿ ಮಳೆಹಾನಿ ಪ್ರದೇಶಗಳನ್ನು ವೀಕ್ಷಣೆ ಮಾಡಿದರು.**

ಉಂಟಾದ ನಷ್ಟದ ಬಗ್ಗೆ ಮಾಹಿತಿ ಪಡೆದ ಅವರು, ಜುಲೈನಲ್ಲಿ ಹೆಚ್ಚಿನ ಮಳೆಯಾಗಿದೆ. ಆಗಸ್ಟ್‌ನಲ್ಲಿಯೂ ಹೆಚ್ಚಿನ ಮಳೆಯಾಗುವ ಸಂಭವ ಇದೆ. ಹಾಗಾಗಿ, ಕಟ್ಟೆಚ್ಚರ ವಹಿಸುವಂತೆ ಹೇಳಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೃಷ್ಣ ಬೈರೇಗೌಡ, 'ಕೊಡಗು ಜಿಲ್ಲೆಯಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ತಂಡ, ಸಿವಿಲ್ ಪೊಲೀಸ್ ತಂಡಗಳನ್ನು ರಕ್ಷಣೆಗಾಗಿ


ಉದಯವಾಹಿನಿ ಚಿತ್ರ

**ಸರ್ಕಾರ ಸಂತ್ರಸ್ತರಿಗೆ ಅಗತ್ಯ ಮೂಲಸೌಲಭ್ಯ ಒದಗಿಸಲಿದ್ದು ಯಾರೂ ಸಹ ಆತಂಕಕ್ಕೆ ತುತ್ತಾಗಬಾರದು. ನಿಮ್ಮ ನೆರವಿಗೆ ಸರ್ಕಾರ ಸದಾ ಸಿದ್ಧವಿದೆ. ಆ ನಿಟ್ಟಿನಲ್ಲಿ ಧೈರ್ಯದಿಂದ ಬದುಕು ಕಟ್ಟಿಕೊಳ್ಳುವತ್ತ ಮುನ್ನಡೆಯಬೇಕು**
**-ಡಾ.ಮಂತರ್‌ಗೌಡ, ಶಾಸಕ**

ನಿಯೋಜಿಸಲಾಗಿದೆ' ಎಂದು ತಿಳಿಸಿದರು.

ಕೊಡಗು ಜಿಲ್ಲೆಯಲ್ಲಿ ಗುಡ್ಡ ಕುಸಿಯುವ ಪ್ರದೇಶವನ್ನು ಜಿಯೊಲಾಜಿಕಲ್ ಸರ್ವೇ ಆಫ್ ಇಂಡಿಯಾ ತಾಂತ್ರಿಕ ಸಂಸ್ಥೆ ಅಧ್ಯಯನ ಮಾಡಿ ವರದಿ ನೀಡಿದ್ದು, ಗುಡ್ಡ ಕುಸಿಯುವ ಪ್ರದೇಶಗಳಲ್ಲಿ ಅಗತ್ಯ ಕಾರ್ಯಗಳನ್ನು ಕೈಗೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 100 ಕೋಟಿ ಮಂಜೂರು ಮಾಡಿದ್ದಾರೆ. ಮುಂದಿನ ವರ್ಷ 200 ಕೋಟಿ ಬಿಡುಗಡೆಗೆ ಒಪ್ಪಿಗೆ ನೀಡಿದ್ದಾರೆ ಎಂದು ಹೇಳಿದರು. ಇಬ್ಬರೂ ಸಚಿವರು ಶಾಸಕ ಡಾ.ಮಂತರ್‌ಗೌಡ ಅವರೊಂದಿಗೆ ಕೊಡಗು ಜಿಲ್ಲೆಯ ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ವೀಕ್ಷಿಸಿದರು.

ಕುಶಾಲನಗರ ತಾಲ್ಲೂಕಿನ ಹಾರಂಗಿ ಬಳಿಯ ಅತ್ತೂರು ಗ್ರಾಮ, ಮಡಿಕೇರಿ -ಕುಟ್ಟ ಮುಖ್ಯ ರಸ್ತೆ ಮಂಚಳ್ಳಿ ಹತ್ತಿರ ಮಳೆಯಿಂದ ಕುಸಿದು ಹಾನಿಯಾದ ಸ್ಥಳಗಳನ್ನು ಪರಿಶೀಲಿಸಿದರು.

ವಿರಾಜಪೇಟೆ ತಾಲ್ಲೂಕು ಸಿದ್ದಾಪುರ ಸ್ವರ್ಣ ಮಾಲ ಕಲ್ಯಾಣ ಮಂಟಪ ಹಾಗೂ ವಾಲ್ನೂರು ತ್ಯಾಗತ್ತೂರು ಗ್ರಾಮದ ಪ್ರಾಥಮಿಕ ಶಾಲೆಯಲ್ಲಿ ತೆರೆದಿರುವ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಂತ್ರಸ್ಥರ ಯೋಗ ಕ್ಷೇಮ ವಿಚಾರಿಸಿದರು.

ವಾಲ್ನೂರು ತ್ಯಾಗತ್ತೂರು ಕಾಳಜಿ ಕೇಂದ್ರಕ್ಕೆ ಸಚಿವರಾದ ಕೃಷ್ಣ ಬೈರೇಗೌಡ ಹಾಗೂ ಎನ್.ಎಸ್.ಭೋಸರಾಜು ಭೇಟಿ ನೀಡಿ ಸಂತ್ರಸ್ತರ ಅಹವಾಲು ಆಲಿಸಿದರು. ಅತ್ತೂರಿನಲ್ಲಿ ಮನೆ ಕಳೆದುಕೊಂಡ ಕುಟುಂಬಕ್ಕೆ ಸಾಂತ್ವನ ತಾಲ್ಲೂಕು ವ್ಯಾಪ್ತಿಯಲ್ಲಿ ಮಳೆಹಾನಿ ಪ್ರದೇಶಗಳಿಗೆ ಬುಧವಾರ ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅತ್ತೂರು ಗ್ರಾಮಕ್ಕೆ ಭೇಟಿ ನೀಡಿದ ಸಚಿವರು ಮಳೆಗೆ ಹಾನಿಯಾಗಿರುವ ವಾಸದ ಮನೆಯನ್ನು ವೀಕ್ಷಣೆ ಮಾಡಿ ಕುಟುಂಬದವರಿಗೆ ಧೈರ್ಯ ಹೇಳಿದರು. ಎಲ್ಲಾ ರೀತಿಯ ನೆರವು ನೀಡುವುದಾಗಿ ಭರವಸೆ ನೀಡಿದರು.

**ಕಟ್ಟೆಚ್ಚರ ವಹಿಸುವಂತೆ ಸೂಚನೆ**

ಈ ವೇಳೆ ಶಾಸಕ ಡಾ.ಮಂತರ್‌ಗೌಡ ಜಿಲ್ಲಾಧಿಕಾರಿ ವೆಂಕಟ್ ರಾಜಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಉಪ ವಿಭಾಗಾಧಿಕಾರಿ ವಿನಾಯಕ ನರ್ವಾಡೆ ತಹಶಿಲ್ದಾರ ಕಿರಣ್ ಗೌರಯ್ಯ ನೀರಾವರಿ ಇಲಾಖೆಯ ಕಾರ್ಯ ಪಾಲಕ ಎಂಜಿನಿಯರ್ ಪುಟ್ಟಸ್ವಾಮಿ ಸಹಾಯಕ ಎಂಜಿನಿಯರ್ ಸಿದ್ದರಾಜು ಕಿರಣ್ ಸೌಮ್ಯಾ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವಿ.ಪಿ.ಶಶಿಧರ್ ಕುಶಾಲನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಪ್ರಮೋದ್ ಮುತ್ತಪ್ಪ ಗುಡ್ಡೆಹೊಸೂರು ಗ್ರಾಮ ಪಂಚಾಯತಿ ಅಧ್ಯಕ್ಷೆ ರುಕ್ಮಿಣಿ ಹಾಗೂ ಸದಸ್ಯರು ಮುಖಂಡರಾದ ಕೆ.ಎಂ.ಲೋಕೇಶ್ ಯಾಕುಬ್ ಚಂದ್ರಶೇಖರ್ ಪಾಲ್ಗೊಂಡಿದ್ದರು.


---

## ಪಿಡಿಓ ನಾರಾಯಣಪ್ಪನವರ ವಯೋನಿವೃತ್ತಿ ಬೀಳ್ಕೊಡುಗೆ ಸಮಾರಂಭ

• ಉದಯವಾಹಿನಿ, ಬಂಗಾರಪೇಟೆ

ಬೆಟ್ಟದಂತಿರುವ ಸಮಸ್ಯೆಗಳನ್ನು ಸುಲಭವಾಗಿ ಬಗೆಹರಿಸುವ ಆಡಳಿತ ನೀತಿಯ ಚಾಣಾಕ್ಷ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪಿ ನಾರಾಯಣಪ್ಪ ಎಂದು ಚಿನ್ನಕೋಟೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುನಂದಮ್ಮ ತಿಳಿಸಿದರು.

ತಾಲ್ಲೂಕಿನ ಚಿನ್ನಕೋಟೆ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಪಿ ಡಿ ಓ ನಾರಾಯಣಪ್ಪನವರ ವಯೋನಿವೃತಿ ಬಿಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ, ಧೈರ್ಯಂ ಸರ್ವತ್ರ ಸಾಧನಂ ನಾನ್ನುಡಿಗೆ ಪ್ರತಿರೂಪವಾಗಿ ನಾರಾಯಣಪ್ಪನವರು ಗೊಂದಲಗಳ ಗೂಡಾಗಿದ್ದ ಚಿನ್ನಕೋಟೆ ಗ್ರಾಮ ಪಂಚಾಯಿತಿಯ ಪಿಡಿಓ ಅಧಿಕಾರಿಯಾಗಿ 3,ವರ್ಷಗಳ ಹಿಂದೆ ಜವಾಬ್ದಾರಿಯನ್ನು ವಹಿಸಿಕೊಂಡಿದ್ದರು, ತದನಂತರ ಎಲ್ಲಾ ಸದಸ್ಯರ ಒಡನಾಡಿಯಾಗಿ ಅತ್ಯಂತ ಕ್ರಿಯಾಶೀಲ ಮತ್ತು ಧೈರ್ಯದಿಂದ ಕ್ರಿಯಾ ಯೋಜನೆಗಳನ್ನು ರೂಪಿಸಿ ಗ್ರಾಮಗಳ ಅಭಿವೃದ್ಧಿಗೆ ಕಾರಣಭೂತರಾಗಿದ್ದಾರೆ ಅವರ ಸೇವೆ ಹಾಗೂ ಕೊಡುಗೆ ಅನನ್ಯ ಮತ್ತು ಅವಿಸ್ಮರಣೀಯ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ಗ್ರಾಮಗಳ ಅಭಿವೃದ್ಧಿಗೆ ಸಹಭಾಗಿತ್ವ ಅಗತ್ಯ:**

ನನ್ನ ನಿವೃತ್ತಿಯ ನಂತರ ಮುಂದಿನ ದಿನಗಳಲ್ಲಿ ನೂತನವಾಗಿ ಪಿಡಿಓ ಅಧಿಕಾರ ಸ್ವೀಕರಿಸಲಿದ್ದಾರೆ ಗ್ರಾಮಗಳ ಅಭಿವೃದ್ಧಿಗೆ ಅಧಿಕಾರಿ ವರ್ಗ ಮತ್ತು ಚುನಾಯಿತ ಪ್ರತಿನಿಧಿಗಳ ಸಹಭಾಗಿತ್ವ ಅತ್ಯಗತ್ಯ ಈ ನಿಟ್ಟಿನಲ್ಲಿ ಎಲ್ಲರೂ ಸಹಕರಿಸಬೇಕು ಎಂದು ಕಿವಿಮಾತು ಹೇಳಿದರು. ಇದರೊಟ್ಟಿಗೆ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿಗೆ ಅಧ್ಯಕ್ಷರನ್ನು ಒಳಗೊಂಡಂತೆ ಎಲ್ಲಾ ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ಸಿಬ್ಬಂದಿಗಳು ಸಹಕರಿಸಿದ್ದಾರೆ ಎಲ್ಲರಿಗೂ ಹೃತ್ಪೂರ್ವಕ ಧನ್ಯವಾದಗಳು ಎಂದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ವಿವೇಕ್ ಕುಮಾರ್, ಗ್ರಾಮ ಪಂಚಾಯಿತಿ ಸದಸ್ಯರಾದ ಸುಬ್ರಮಣಿ, ಲಕ್ಷ್ಮಯ್ಯ, ಶಶಿಕಲಾ ,ಎಂ ನಾರಾಯಣಸ್ವಾಮಿ, ಸಾವಿತ್ರಮ್ಮ, ರಾಮೇಗೌಡ, ವರಲಕ್ಷ್ಮಿ, ಎಸ್ ಮುನಿವೆಂಕಟಪ್ಪ, ವೆಂಕಟೇಶ್, ಸರಸ್ವತಿ, ಸಿಬ್ಬಂದಿ ವರ್ಗದವರಾದ ಪ್ರಭಾಕರ್, ವೆಂಕಟೇಶ್, ದಿನೇಶ್, ಇತರರು ಉಪಸ್ಥಿತರಿದ್ದರು.

## ರಸ್ತೆ ಬದಿಗಳಲ್ಲಿ ಎಳನೀರು ಖರೀದಿ: ಕ್ರಮಕ್ಕೆ ಆಗ್ರಹ

• ಉದಯವಾಹಿನಿ, ಮದ್ದೂರು

ತಾಲ್ಲೂಕು ಮತ್ತು ಜಿಲ್ಲೆಯಾದ್ಯಂತ ಲೈಸೆನ್ಸ್ ಪಡೆಯದೆ ರಸ್ತೆ ಬದಿಗಳಲ್ಲಿ ಎಳನೀರು ವ್ಯಾಪಾರ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಎಪಿಎಂಸಿ ಎಳನೀರು ವರ್ತಕರು ಪಟ್ಟಣದ ಎಪಿಎಂಸಿ ಕಚೇರಿಯಲ್ಲಿ ಕಾರ್ಯದರ್ಶಿ ಲತಾಕುಮಾರಿ ಅವರನ್ನು ಒತ್ತಾಯಿಸಲಾಯಿತು.

ವರ್ತಕರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಎಚ್. ರವಿ ಚನ್ನಸಂದ್ರ, ಮಾತನಾಡಿ, ಎಳನೀರು ವರ್ತಕರು ಲೈಸೆನ್ಸ್ ಪಡೆದು ಪಟ್ಟಣದ ಎಳನೀರು ಮಾರುಕಟ್ಟೆಯ ಪ್ರಾಂಗಣದಲ್ಲಿ ವ್ಯಾಪಾರ ಮಾಡುತ್ತಿದ್ದು, ಪ್ರಾಂಗಣಗಳಿಗೆ ಎಳನೀರು ಬರದೆ ವರ್ತಕರಿಗೆ ತುಂಬಾ ತೊಂದರೆಯಾಗುತ್ತಿದೆ. ಅಷ್ಟೇ ಅಲ್ಲದೇ ಕೃಷಿ ಉತ್ಪನ್ನ ಮಾರುಕಟ್ಟೆಗೂ ಆದಾಯ ಸೋರಿಕೆಯಾಗುತ್ತಿದೆ'


ಉದಯವಾಹಿನಿ ಚಿತ್ರ


ಎಂದರು.ಎಲ್ಲಾ ಎಪಿಎಂಸಿ ಪ್ರಾಂಗಣಗಳಲ್ಲಿ ಮಾತ್ರ ವ್ಯಾಪಾರ ನಡೆಸುವಂತೆ ಕ್ರಮವಹಿಸಬೇಕು. ಅನಧಿಕೃತ ಎಳನೀರು ವ್ಯಾಪಾರಕ್ಕೆ ಕಡಿವಾಣ ಹಾಕಬೇಕು ಎಂದು ಅವರು ಒತ್ತಾಯಿಸಿದರು.

ಜುಲೈ 30ರಂದು ಮಧ್ಯಾಹ್ನ 12.30ಕ್ಕೆ ಕೃಷಿ ಉತ್ಪನ್ನ ಮಾರುಕಟ್ಟೆಯ ಸಮಿತಿಯ ಸಭಾಂಗಣದಲ್ಲಿ ಈ ಸಂಬಂಧ ಉಪ ನಿರ್ದೇಶಕರು ಸಭೆಯನ್ನು ಕರೆದಿದ್ದು, ಸಮಿತಿಯಲ್ಲಿ ಲೈಸೆನ್ಸ್ ಪಡೆದು ವ್ಯವಹರಿಸುತ್ತಿರುವ ಎಲ್ಲಾ ವರ್ತಕರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಗೆ ಆಗಮಿಸಬೇಕು ಎಂದು ಮನವಿ ಮಾಡಿದರು.

## ಅಂಗನವಾಡಿ ಕೇಂದ್ರಗಳ ಮೂಲಭೂತ ಸೌಕರ್ಯಗಳ ಪರಿಶೀಲನೆ

• ಉದಯವಾಹಿನಿ, ತುಮಕೂರು

ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಆದೇಶದ ಮೇರೆಗೆ ಜಿಲ್ಲೆಯ ಹಲವು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಜಯಂತ ಕುಮಾರ್ ಅವರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಭೇಟಿ ನೀಡಿದ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರಗಳಲ್ಲಿರುವ ಕುಡಿಯುವ ನೀರು, ಪ್ರಾಥಮಿಕ ಚಿಕಿತ್ಸಾ ಸಲಕರಣೆ ಮೊದಲಾದ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ, ಭೇಟಿ ನೀಡಿದ ಪ್ರತಿಯೊಂದು ಅಂಗನವಾಡಿ ಕೇಂದ್ರಗಳ ಕುಂದು ಕೊರತೆಗಳನ್ನು ಆಲಿಸಲಾಗಿದೆ.

ಪ್ರಧಾನ ಜಿಲ್ಲಾ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಜಯಂತ ಕುಮಾರ್ ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ನ್ಯಾ.ನೂರುನ್ನಿಸ ಅವರ ನೇತೃತ್ವದಲ್ಲಿ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದ್ದು, ಭೇಟಿ ನೀಡಿದ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರಗಳ ಒಳ ಮತ್ತು ಹೊರಾಂಗಣಗಳಲ್ಲಿ ಶುಚಿತ್ವ ಕಾಪಾಡಿಕೊಂಡು ಶುದ್ಧ ಕುಡಿಯುವ ನೀರನ್ನು ಮಕ್ಕಳಿಗೆ ಪೂರೈಸುವಂತೆ, ಆರೋಗ್ಯಕರ ಆಟಿಕೆ ಸಾಮಾನುಗಳನ್ನು ಮಕ್ಕಳಿಗೆ ಒದಗಿಸಬೇಕು.

ಮಕ್ಕಳಿಗೆ ಕೊಡುವ ಆಹಾರವನ್ನು ಪೋಲು ಮಾಡದೆ, ಶುಚಿ-ರುಚಿಯಾಗಿರುವಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಹಾಗೂ ಕೆಲವೊಂದು ಅಂಗನವಾಡಿ ಕಟ್ಟಡಗಳ ದುರಸ್ತಿ ಅವಶ್ಯಕತೆ ಇದ್ದು, ಇನ್ನಿತರ ಮೂಲಭೂತ ಸೌಕರ್ಯದ ಕೊರತೆಗಳನ್ನು ತ್ವರಿತವಾಗಿ ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಪತ್ರಿಕಾ ಪ್ರಕಟಣೆ ತಿಳಿಸಿದೆ.

## 12 ಸಾವಿರ ಕೋಳಿ ಮರಿಗಳು ಸುಟ್ಟು ಭಸ್ಮ: 15 ಲಕ್ಷಕ್ಕೂ ಅಧಿಕ ರೂ. ನಷ್ಟ

• ಉದಯವಾಹಿನಿ, ಬೇತಮಂಗಲ

ಗ್ರಾಮದ ಸಮೀಪದ ನೆರ್ನಹಳ್ಳಿ ಗ್ರಾಮದ ಹೊರ ವಲಯದಲ್ಲಿರುವ ಪ್ರಕೃತಿ (ಆರ್ ಎಲ್) ಪೌಲ್ಟ್ರಿ ಪರಂಗೆ ಕಳೆದ ಮಧ್ಯ ರಾತ್ರಿ ಬೆಂಕಿ ಬಿದ್ದು ಸುಮಾರು 12 ಸಾವಿರ ಕೋಳಿ ಮರಿಗಳು ಸುಟ್ಟು ಭಸ್ಮ ಆಗಿದೆ.

ನೆರ್ನಹಳ್ಳಿ ಗ್ರಾಮದ ಹೊರವಲಯದಲ್ಲಿ ಸಮಾಜ ಸೇವಕ ವಿ.ಮೋಹನ್ ಕೃಷ್ಣ ಅವರಿಗೆ ಸೇರಿರುವ ಪ್ರಕೃತಿ ಪೌಲ್ಟ್ರಿ ಪರಂಗೆ ಬೆಂಕಿ ಬಿದ್ದ ಹಿನ್ನೆಲೆ ಸುಮಾರು 12 ಸಾವಿರ ಕೋಳಿ ಮರಿಗಳು ಸಂಪೂರ್ಣವಾಗಿ ಸುಟ್ಟು ಕರುಕಳಾಗಿ ಸುಮಾರು 15 ಲಕ್ಷಕ್ಕೂ ಅಧಿಕ ರೂಪಾಯಿ ನಷ್ಟ ಸಂಭವಿಸಿದೆ.

ಕೋಳಿ ಪೌಲ್ಟ್ರಿ ಪರಂನಲ್ಲಿ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ತಕ್ಷಣ ಅಗ್ನಿ ಶಾಮಕ ದಳಕ್ಕೆ ಮಾಹಿತಿ ನೀಡಿದ್ದು, ಪೌಲ್ಟ್ರಿ ಪರಂನಲ್ಲಿದ್ದ ಕಾರ್ಮಿಕರು ಬೆಂಕಿ ನಂದಿಸಲು ಶತಪ್ರಯತ್ನ ನಡೆಸಿ ಹೆಚ್ಚು ನಷ್ಟ ಸಂಭವಿಸಿದಂತೆ ತಡೆದಿದ್ದಾರೆ, ನಂತರ ಅಗ್ನಿ ಶಾಮಕ ದಳದ ಸಿಬ್ಬಂದಿ ಕೈಜೋಡಿಸಿ ಬೆಂಕಿಯನ್ನು ನಿಂದಿಸಿದ್ದಾರೆ.


ಉದಯವಾಹಿನಿ ಚಿತ್ರ

ಕೋಳಿ ಮರಿಗಳು ಸುಟ್ಟು ಬಸ್ಮವಾಗಿದ್ದು, ಕೋಳಿ ಶೆಡ್‌ನಲ್ಲಿ ಅಳವಡಿಸಿದ್ದು ನೀರಿನ ಪೈಪುಗಳು, ಕೋಳಿ ಮೇವು, ವಿದ್ಯುತ್, ಸಲಕರಣೆ ಹಾಗೂ ಸೀಟುಗಳು ಸಹ ಸಂಪೂರ್ಣವಾಗಿ ನಾಶವಾಗಿದೆ.

ಸಮಾಜ ಸೇವಕ ಹಾಗೂ ಪೌಲ್ಟ್ರಿ ಪರಂ ಮಾಲೀಕರಾದ ವಿ.ಮೋಹನ್ ಕೃಷ್ಣ ರವರು ಸುದ್ದಿಗಾರರೊಂದಿಗೆ ಮಾತನಾಡಿ ಅನೇಕ ವರ್ಷಗಳಿಂದ ಕೋಳಿ ಸಾಕಾಣಿಕೆ ಮಾಡಲಾಗುತ್ತಿದೆ ಅಂದರೆ ಯಾವುದೇ ದುರ್ಘಟನೆ ನಡೆದಿಲ್ಲ ಅಂದರೆ ಮಂಗಳವಾರ ರಾತ್ರಿ ಯಾರೋ ಗುರುತು ಇಲ್ಲದವರು ಬೆಂಕಿ ಹಾಕಿ ನಷ್ಟ ಉಂಟುಮಾಡಿದ್ದಾರೆ. ವಿ.ಮೋಹನ್ ಕೃಷ್ಣ. ಸಮಾಜ ಸೇವಕ ಹಾಗೂ ಪೌಲ್ಟ್ರಿ ಪರಂ ಮಾಲೀಕರು.

### ಪೊಲೀಸ್ ಠಾಣೆಗೆ ದೂರು

**ಕೋಳಿ ಪೌಲ್ಟ್ರಿ ಪರಂ ಹಿಂಬದಿಯಿಂದ ಯಾರೋ ಇಬ್ಬರು ಕಿಡಿಗೇಡಿಗಳು ಬೆಂಕಿ ಹಚ್ಚಿ ಪರಾರಿಯಾಗಿದ್ದಾರೆ ಎಂದು ಕೂಲಿ ಕಾರ್ಮಿಕರ ತಿಳಿಸುತ್ತಾರೆ. ಕೋಳಿ ಪೌಲ್ಟ್ರಿ ಪರಂ ಬೆಂಕಿ ಬಿದ್ದಿರುವ ಘಟನೆ ಬಗ್ಗೆ ಬೇತಮಂಗಲ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ.**


## ಜನರಿಗೆ ಸಿಗದ ಸರ್ಕಾರಿ ಸೇವೆಗಳು

• ಉದಯವಾಹಿನಿ, ಮಿಟ್ಟೇಮರಿ

ತಾಲ್ಲೂಕಿನ ಮಿಟ್ಟೇಮರಿ ಹೋಬಳಿ ಕೇಂದ್ರದಲ್ಲಿ ಆರಂಭಿಸಿದ ಡಿಜಿಟಲ್ ಕೇಂದ್ರ, ಗ್ರಂಥಾಲಯದಲ್ಲಿ ಮೇಲ್ವಿಚಾರಕರು ಹಾಗೂ ಡಿಜಿಟಲ್ ಸೇವಾ ಕಾಮನ್ ಸರ್ವಿಸ್ ಕೇಂದ್ರದಲ್ಲಿ ಸಿಬ್ಬಂದಿ ಇಲ್ಲದೇ 2 ಕೊಠಡಿಗಳಿಗೆ ಬೀಗ ಜಡಿಯಲಾಗಿದೆ. ಹೋಬಳಿ ಕೇಂದ್ರ, ಗ್ರಾಮ ಪಂಚಾಯಿತಿ ಕಚೇರಿಯ ಹಿಂದೆ ಹಳೆ ಕಟ್ಟಡ ಪಾಳು ಬಿದ್ದಿತ್ತು.

ಈ ಕಟ್ಟಡದಲ್ಲಿ ಸರ್ಕಾರದ ಯೋಜನೆ, ಸೌಲಭ್ಯ ಪಡೆಯಲು ಹಾಗೂ ಗ್ರಾಮೀಣ ಜನರಿಗೆ ಡಿಜಿಟಲ್ ಗ್ರಂಥಾಲಯ ಸಿಗುವ ಉದ್ದೇಶದಿಂದ ಕೇಂದ್ರವನ್ನು ನವೀಕರಣ ಮಾಡಲಾಗಿದೆ.

ಆದರೆ ಡಿಜಿಟಲ್ ಕೇಂದ್ರ ಗ್ರಂಥಾಲಯಕ್ಕೆ ಜಿಲ್ಲಾ ಪಂಚಾಯಿತಿಯವರು ಒಂದು ವರ್ಷದಿಂದ ಸಿಬ್ಬಂದಿ ನೇಮಕ ಮಾಡಿಲ್ಲ. ಇದರಿಂದ ಗ್ರಾಮೀಣ ಜನರಿಗೆ ಡಿಜಿಟಲ್ ಗ್ರಂಥಾಲಯದಲ್ಲಿ ದಿನಪತ್ರಿಕೆ, ಪುಸ್ತಕ ಓದಲು ಆಗುತ್ತಿಲ್ಲ. ಪಕ್ಕದ ಕೊಠಡಿಯಲ್ಲಿ ಆನ್‌ಲೈನ್ ಸೇವೆ, ಸರ್ಕಾರದ ಯೋಜನೆ, ಸೌಲಭ್ಯ ಪಡೆಯಲು ಹಾಗೂ ವಿವಿಧ ಸರ್ಕಾರಿ ದಾಖಲೆ ಸಿಗದೇ ಪರದಾಡುತ್ತಿದ್ದಾರೆ. ಸರ್ಕಾರಿ ದಾಖಲೆಗಳಿಗೆ, ಸೌಲಭ್ಯಕ್ಕೆ ತಾಲ್ಲೂಕು ಕೇಂದ್ರದ ಆನ್‌ಲೈನ್ ಸೇವಾ ಕೇಂದ್ರಕ್ಕೆ ತೆರಳಬೇಕಾದ ಅನಿವಾರ್ಯತೆ ಎದುರಾಗಿದೆ.


ಉದಯವಾಹಿನಿ ಚಿತ್ರ

ಈ ಕೇಂದ್ರದಲ್ಲಿ ಕೃಷಿ ಸೇವಾ ಸೌಲಭ್ಯ, ಪಾನ್‌ಕಾರ್ಡ್, ಆಧಾರ್, ಪಾಸ್‌ಪೋರ್ಟ್, ರೈಲು, ಬಸ್ ಟಿಕೆಟ್ ಬುಕ್ಕಿಂಗ್, ಉದ್ಯೋಗ ನೋಂದಣಿ, ಕೌಶಲ ತರಬೇತಿ ಕೇಂದ್ರ, ಹೊಲಿಗೆ ತರಬೇತಿ, ಸೌಂದರ್ಯವರ್ಧಕ, ಕಂಪ್ಯೂಟರ್ ಕಲಿಕೆಗೆ ವ್ಯವಸ್ಥೆ ಮಾಡಲಾಗಿದೆ. ಆದರೆ ಮಿಟ್ಟೇಮರಿ ಕೇಂದ್ರದಲ್ಲಿ ಸಿಬ್ಬಂದಿ ಇಲ್ಲ. ಹೀಗಾಗಿ ಕೇಂದ್ರದ ಬಾಗಿಲು ಮುಚ್ಚಲಾಗಿದೆ.

ಮೇಲ್ವಿಚಾರಕರ ನೇಮಕಕ್ಕೆ ಕ್ರಮ ಒಂದು ವರ್ಷದಿಂದ ಮಿಟ್ಟೇಮರಿ ಡಿಜಿಟಲ್ ಕೇಂದ್ರ ಗ್ರಂಥಾಲಯಗಳಲ್ಲಿ ಮೇಲ್ವಿಚಾರಕರು ಇಲ್ಲ. ಕೆಲವೇ ದಿನಗಳಲ್ಲಿ ಜಿಲ್ಲಾ ಪಂಚಾಯಿತಿ ಅಧಿಕಾರಿಗಳ ಜೊತೆ ಚರ್ಚಿಸಿ ಮೇಲ್ವಿಚಾರಕನ್ನು ನೇಮಕ ಮಾಡಿಸಿ ಕೇಂದ್ರವು ಜನರ ಬಳಕೆಗೆ ನೀಡಲಾಗುವುದು ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರಮೇಶ್ ತಿಳಿಸಿದರು.

**ಸರ್ವಿಸ್ ಕೇಂದ್ರಗಳಲ್ಲಿ ಅಗತ್ಯ ಸಿಬ್ಬಂದಿ ಇಲ್ಲ. ಮಿಟ್ಟೇಮರಿ ಸೇರಿದಂತೆ ವಿವಿಧ ಕಡೆಗಳ ಡಿಜಿಟಲ್ ಗ್ರಂಥಾಲಯಗಳಿಗೆ ಖಾಸಗಿ ಕಂಪನಿಯವರು ಕಂಪ್ಯೂಟರ್, ಕಟ್ಟಡ ನವೀಕರಣ ಮಾಡಿಸಿದ್ದಾರೆ. ಆದರೆ ಸರ್ಕಾರ ಅಗತ್ಯ ಸಿಬ್ಬಂದಿ ನೇಮಕ ಮಾಡಿಲ್ಲ. ಇದರಿಂದ ಜನರಿಗೆ ತೊಂದರೆಯಾಗಿದೆ**
**-ಜಗನ್ನಾಥ್, ಜೂಲಪಾಳ್ಯ ಗ್ರಾ.ಪಂ ಸದಸ್ಯ ಪೈಪಾಳ್ಯ**

## ಪರಿಶಿಷ್ಠ ಜಾತಿ ಮೀಸಲಾತಿ ವರ್ಗೀಕರಣಕ್ಕೆ ಸುಪ್ರೀಂ ಅಸ್ತು

• ಉದಯವಾಹಿನಿ, ಶಿಡ್ಲಘಟ್ಟ

ಪರಿಶಿಷ್ಠ ಜಾತಿ ಮೀಸಲಾತಿ ವರ್ಗೀಕರಣಕ್ಕಾಗಿ ಸುಮಾರು 30 ವರ್ಷಗಳಿಂದ ಸುದೀರ್ಘ ಹೋರಾಟ ಹಮ್ಮಿಕೊಂಡಿರುವ ಪ್ರತಿಫಲ, ಸುಪ್ರೀಂ ಕೋರ್ಟ್ ನ್ಯಾಯಲಯದ ಏಳು ಜನ ನ್ಯಾಯಾಧೀಶರಿಂದ ಪರಿಶಿಷ್ಠ ಜಾತಿ ವರ್ಗೀಕರಣಕ್ಕೆ ನಾಂದಿ ಹಾಡಿರುವುದಕ್ಕೆ ಮಾದಿಗ ದಂಡೋರ ಸಂಘಟನೆಯಿಂದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಎಂ ದೇವರಾಜ್ ಧನ್ಯವಾದಗಳು ತಿಳಿಸಿದರು.

ಶಿಡ್ಲಘಟ್ಟ ನಗರದ ಪ್ರವಾಸ ಮಂದಿರದಲ್ಲಿ ಕರ್ನಾಟಕದ ಮಾದಿಗ ರಿಸರ್ವೇಷನ್ ಹೋರಾಟ ಸಮಿತಿ ಹಾಗೂ ಮಾದಿಗ ದಂಡೋರ ತಂಡದಿಂದ ಹಮ್ಮಿಕೊಂಡಿದ್ದ ಸುದ್ದಿಗೊಷ್ಠಿಯಲ್ಲಿ ತಿಳಿಸಿದರು.

ಸುಪ್ರಿಂಕೋರ್ಟ್ ನೀಡಿರುವ ಈ ತೀರ್ಪಿನಿಂದ ಸಮುದಾಯದ ಮುಖಂಡರು ವಿಜಯೋತ್ಸವ ಆಚರಣೆ ಮಾಡಿ ಸಿಹಿ ಹಂಚಿ ಸಂಭ್ರಮಿಸಿದರು .

ಈ ಸಂದರ್ಭದಲ್ಲಿ ರಾಜ್ಯ ಯುವ ಘಟಕ ಉಪಾಧ್ಯಕ್ಷರಾದ ಎಂ.ಆಂಜಿ ಹಲಸೂರು, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಎ ಎನ್ ಮಂಜುನಾಥ್, ಸಮುದಾಯದ ಹಿರಿಯರಾದ ಸುಗಟೂರು ದೇವರಾಜ್,ರಾಜ್ಯ ವಿದ್ಯಾರ್ಥಿ ಘಟಕದ ರಾಜ್ಯಾಧ್ಯಕ್ಷರಾದ ಪ್ರಮೋದ್ ಕುಮಾರ್, ಚಾಲಕ ಘಟಕದ ತಾಲ್ಲೂಕು ಅಧ್ಯಕ್ಷ ವೇಣು ಗೋಪಾಲ್, ತಾಲ್ಲೂಕು ಕಾರ್ಯದರ್ಶಿಗಳಾದ ಅಂಬರೀಶ್, ತಾಲ್ಲೂಕು ಉಪಾಧ್ಯಕ್ಷ ನರಸಿಂಹಪ್ಪ ಹಾಗೂ ಸಮುದಾಯದ ಮುಖಂಡರು ಹಾಜರಿದ್ದರು.


ಉದಯವಾಹಿನಿ ಚಿತ್ರ

**ಈ ಹೋರಾಟದ ನಾಯಕತ್ವ ವಹಿಸಿದ್ದ ರಾಷ್ಟ್ರೀಯ ನಾಯಕರಾದ ಮಂದಕೃಷ್ಣ ಮಾದಿಗ ಅಣ್ಣ ನವರಿಗೆ ಸಲ್ಲಬೇಕು. ಈ ಕಾಲಘಟ್ಟಕ್ಕೆ ಮಂದಕೃಷ್ಣ ಮಾದಿಗರವರು ಅಭಿನವ ಅಂಬೇಡ್ಕರ್ ಆಗಿದ್ದಾರೆ ಇಂದಿನ ತೀರ್ಪು ಇತಿಹಾಸದ ಪುಟಗಳಲ್ಲಿ ಅವರ ಹೆಸರು ಚಿರಾಯುವಾಗಿರುತ್ತದೆ ಎಂದು ಬಣ್ಣಿಸಿದರು**
**-ಜೆ.ಎಂ ದೇವರಾಜ್, ಪ್ರಧಾನ ಕಾರ್ಯದರ್ಶಿ**

---

# ಬೆಳೆದ ಬೆಳೆಗೆ ಮಾರುಕಟ್ಟೆ ಸೃಷ್ಟಿಸಿದ ಮಾದರಿ ರೈತ

## ಮಿಶ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡು ಪ್ರಗತಿ ಸಾಧಿಸಿ ಕೃಷಿ ಬಗ್ಗೆ ಹೊಂದಿರುವ ಕಾಯಕನಿಷ್ಠೆ ರೈತಕುಲಕ್ಕೆ ಮಾದರಿ

• ಉದಯವಾಹಿನಿ ಚನ್ನಪಟ್ಟಣ

ಕಷ್ಟಪಟ್ಟು ಬೆಳೆದ ಬೆಳೆಗೆ ಸೂಕ್ತ ಬೆಲೆ ಹಾಗೂ ಮಾರುಕಟ್ಟೆ ಸಿಗುತ್ತಿಲ್ಲ ಎನ್ನುವುದು ರೈತರ ಕೊರಗು. ಆದರೆ ಇಲ್ಲೊಬ್ಬ ರೈತ ತಾನು ಬೆಳೆದ ಬೆಳೆಗೆ ತಾನೇ ಮಾರುಕಟ್ಟೆ ಸೃಷ್ಟಿಸಿಕೊಳ್ಳುವ ಮೂಲಕ ಇತರ ರೈತರಿಗೆ ಮಾದರಿಯಾಗಿದ್ದಾರೆ.ತಾಲ್ಲೂಕಿನ ಸೀಬನಹಳ್ಳಿ ಗ್ರಾಮದ ಶಶಿಕುಮಾರ್ ಈ ಮಾದರಿ ಕೃಷಿಕ.

ಮಿಶ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡು ಪ್ರಗತಿ ಸಾಧಿಸಿರುವ ಇವರು ಕೃಷಿ ಬಗ್ಗೆ ಹೊಂದಿರುವ ಅಪರಿಮಿತ ಪ್ರೀತಿ ಹಾಗೂ ಕಾಯಕನಿಷ್ಠೆ ರೈತಕುಲಕ್ಕೆ ಮಾದರಿಯಾಗಿದೆ. ಹತ್ತನೆ ತರಗತಿ ಓದಿರುವ ಇವರು ಚಿಕ್ಕಂದಿನಿಂದಲೂ ಕೃಷಿ ಬಗ್ಗೆ ತೀವ್ರ ಆಸಕ್ತಿ ಹೊಂದಿದ್ದವರು.

ತಮಗೆ ಬಂದಿರುವ ಪಿತ್ರಾರ್ಜಿತ ಐದು ಎಕರೆ ಜಮೀನಿನಲ್ಲಿ ವಿವಿಧ ಕೃಷಿ ನಡೆಸುತ್ತಿದ್ದಾರೆ. ಮಾವು, ಭತ್ತ, ತೆಂಗು, ರಾಗಿ, ತೊಗರಿ, ಅಲಸಂದೆ ಸೇರಿದಂತೆ ವಿವಿಧ ದ್ವಿದಳ ಧಾನ್ಯಗಳು ಹಾಗೂ ಆಯಾ ಋತುಮಾನಕ್ಕೆ ತಕ್ಕಂತೆ ವಿವಿಧ ತರಕಾರಿ, ವಿವಿಧ ಸೊಪ್ಪು, ಮೆಣಸಿನಕಾಯಿ, ಚೆಂಡುಹೂಗಳನ್ನು ಬೆಳೆಯುತ್ತಾರೆ. ರೇಷ್ಮೆ ಸಾಕಾಣಿಕೆ, ಹಸು, ಕುರಿ ಹಾಗೂ ಕೋಳಿ ಸಾಕಾಣಿಕೆ ಇವರ ಉಪಕಸುಬುಗಳು. ಇವರ ಕೃಷಿ ಕಾರ್ಯಕ್ಕೆ ಇವರ ತಂದೆ ರಾಮಕೃಷ್ಣೇಗೌಡ, ಪತ್ನಿ ಎಂ.ಎಚ್.ರೂಪ ಹಾಗೂ ಮೂವರು ಹೆಣ್ಣುಮಕ್ಕಳು ಕೈಜೋಡಿಸಿದ್ದಾರೆ.

**ನೇರ ಮಾರಾಟಗಾರ:**

ಶಶಿಕುಮಾರ್ ಅವರು ತಾವು ಬೆಳೆದ ಬೆಳೆಯನ್ನು ಮಾರಾಟ ಮಾಡಲು ಯಾವುದೇ ದಲ್ಲಾಳಿ ಹಾಗೂ ಮಾರುಕಟ್ಟೆ ನೆಚ್ಚಿಕೊಂಡಿಲ್ಲ, ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡುವ ವ್ಯವಸ್ಥೆ ಕಂಡುಕೊಂಡಿದ್ದಾರೆ. ತಮ್ಮ ಗ್ರಾಮ ಹಾಗೂ ಅಕ್ಕಪಕ್ಕ ಗ್ರಾಮಗಳ ಗ್ರಾಹಕರು ಹಾಗೂ ರೈತರು ಸ್ಥಳಕ್ಕೆ ಬಂದು ಇವರ ಬೆಳೆಗಳನ್ನು ಕೊಂಡುಕೊಳ್ಳುತ್ತಾರೆ.

**ಇತರ ರೈತರಿಗೆ ಮಾದರಿ**

ಸಾಮಾಜಿಕ ಜಾಲತಾಣವನ್ನು ಸಹ ತಮ್ಮ ವ್ಯಾಪಾರಕ್ಕೆ ಬಳಕೆ ಮಾಡಿಕೊಂಡಿರುವ ಇವರು, ಆ ದಿನದ ಬೆಳೆಯ ಮಾಹಿತಿಯನ್ನು ಗ್ರಾಹಕರಿಗೆ ತಲುಪಿಸುವ ಮೂಲಕ ಅವಶ್ಯಕತೆ ಇರುವವರಿಗೆ ಆಯಾ ದಿನದ ತಾಜಾ ಸೊಪ್ಪು, ತರಕಾರಿ ಹಾಗೂ ಇನ್ನಿತರ ಬೆಳೆಯನ್ನು ಮಾರಾಟ ಮಾಡುತ್ತಾರೆ.


ಉದಯವಾಹಿನಿ ಚಿತ್ರ

**ರೈತರು ಮಿಶ್ರ ಕೃಷಿ ಪದ್ಧತಿ ಅಳವಡಿಸಿಕೊಂಡು ನೇರ ಮಾರುಕಟ್ಟೆ ಮಾಡಿಕೊಂಡರೆ ಲಾಭ ಕಾಣಬಹುದು. ನಾನು ಕಲಿತುಕೊಂಡಿರುವುದನ್ನು ಆಸಕ್ತರಿಗೆ ತಿಳಿಸಬೇಕು ಎಂಬುದು ನನ್ನ ಆಶಯ**
**-ಶಶಿಕುಮಾರ್, ರೈತ ಸೀಬನಹಳ್ಳಿ**

ಬೆಂಗಳೂರು ಮೈಸೂರು ಹೆದ್ದಾರಿಯಲ್ಲಿ ಶಿವಳ್ಳಿ ಹೋಟೆಲ್ ಮುಂಭಾಗ ಅಂಗಡಿ ತೆರೆದು ಗ್ರಾಹಕರಿಗೆ ತನ್ನ ಬೆಳೆಗಳನ್ನು ಮಾರುತ್ತಾರೆ. ಜೊತೆಗೆ ಬುಧವಾರ ನಿಡಘಟ್ಟ ಸಂತೆ, ಶುಕ್ರವಾರ ಕೆಸ್ತೂರು ಸಂತೆ, ಶನಿವಾರ ಬೆಸಗರಹಳ್ಳಿ ಸಂತೆ ಹಾಗೂ ಮಂಗಳವಾರ ಮದ್ದೂರು ಸಂತೆಗಳಿಗೆ ತೆರಳಿ ಅಲ್ಲಿ ಅಂಗಡಿ ಇಟ್ಟು ತನ್ನ ಬೆಳೆಗಳನ್ನು ಗ್ರಾಹಕರಿಗೆ ತಲುಪಿಸುತ್ತಾರೆ. ಜೊತೆಗೆ ತನ್ನ ತೋಟದಲ್ಲಿ ಬೆಳೆಯುವ ರಸಭರಿತ ಮಾವಿನಹಣ್ಣುಗಳನ್ನು ನೈಸರ್ಗಿಕವಾಗಿ ಹಣ್ಣು ಮಾಡಿ ಗ್ರಾಹಕರಿಗೆ ನೀಡುತ್ತಾರೆ. ಇವರ ಬಳಿ ಪ್ರತಿನಿತ್ಯ ಒಂದಲ್ಲ ಒಂದು ಬೆಳೆ ಮಾರಾಟವಾಗುತ್ತವೆ. ಪ್ರತಿನಿತ್ಯ ಆದಾಯ ನೋಡುತ್ತಾರೆ.

ಮಾಗಡಿ ಕೃಷಿ ವಿಜ್ಞಾನ ಕೇಂದ್ರ ಹಾಗೂ ಬೆಂಗಳೂರು ಜಿಕೆವಿಕೆಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಹೊಸ ವಿಧದ ತಳಿಗಳ ಕೃಷಿಯನ್ನು ಮಾಡುತ್ತಿದ್ದಾರೆ. ಮಧುಮೇಹಕ್ಕೆ ರಾಮಬಾಣ ಎಂದು ನಂಬಲಾಗಿರುವ ಅಪರೂಪದ ವೈಟ್ ರಾಗಿ (ಕೆ.ಎಂ.ಆರ್. 340) ನಲ್ಲೂ ಲಾಭ ಕಂಡಿದ್ದಾರೆ. ಸಿರಿಧಾನ್ಯ ಬೆಳೆಯೂ ಸಹ ಇವರ ಕೃಷಿಯ ಪಟ್ಟಿಯಲ್ಲಿದೆ. ಟ್ರ್ಯಾಕ್ಟರ್ ಸೇರಿದಂತೆ ಆಧುನಿಕ ಕೃಷಿ ಉಪಕರಣಗಳನ್ನು ಹೊಂದಿರುವ ಇವರು ಕೃಷಿಯಿಂದ ವಾರ್ಷಿಕವಾಗಿ ಉತ್ತಮ ಆದಾಯ ಗಳಿಸುವ ಮೂಲಕ ಸಂತೃಪ್ತ ಜೀವನ ನಡೆಸುತ್ತಿದ್ದಾರೆ. ನೇರ ಮಾರುಕಟ್ಟೆ ವ್ಯವಸ್ಥೆ ಇವರ ಆದಾಯದ ಪ್ರಮುಖ ಭಾಗವಾಗಿದೆ.

### ಅಕಾಶವಾಣಿ ಹಾಗೂ ಚಂದನ ವಾಹಿನಿಯ ಫೋನ್ ಇನ್ ಕಾರ್ಯಕ್ರಮದಲ್ಲಿ ರೈತರಿಗೆ ಮಾರ್ಗದರ್ಶನ

**ಅಕಾಶವಾಣಿ ಹಾಗೂ ಚಂದನ ವಾಹಿನಿಯ ಫೋನ್ ಇನ್ ಕಾರ್ಯಕ್ರಮದಲ್ಲಿ ರೈತರಿಗೆ ಮಾರ್ಗದರ್ಶನ ನೀಡುವ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಜೊತೆಗೆ ತಮ್ಮ ತೋಟಕ್ಕೆ ಬರುವ ರೈತರಿಗೂ ಸೂಕ್ತ ಮಾರ್ಗದರ್ಶನ ನೀಡುತ್ತಾರೆ. ರೈತ ಚಳುವಳಿಯಲ್ಲೂ ಮುಂಚೂಣಿಯಲ್ಲಿದ್ದು, ರೈತಸಂಘದ ಚಟುವಟಿಕೆಗಳಲ್ಲೂ ಸಕ್ರಿಯರಾಗಿದ್ದಾರೆ. ಇವರ ಕೃಷಿ ಸಾಧನೆಯನ್ನು ಗುರುತಿಸಿ ಸರ್ಕಾರ ಸೇರಿದಂತೆ ವಿವಿಧ ಸಂಘಸಂಸ್ಥೆಗಳು ಸನ್ಮಾನಿಸಿವೆ.**

---

## ಮಿನಿ ನ್ಯೂಸ್

### ಗ್ಯಾರಂಟಿಗೆ ಪರಿಶಿಷ್ಟರ ಹಣ ಬಳಕೆ: ಖಂಡನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ತುಮಕೂರು

ಗ್ಯಾರಂಟಿ ಯೋಜನೆಗೆ ಎಸ್‌ಸಿಎಸ್‌ಪಿ-ಟಿಎಸ್‌ಪಿ ಹಣ ಬಳಕೆ ಮಾಡಿಕೊಂಡಿರುವುದನ್ನು ಖಂಡಿಸಿ ಸ್ಲಂ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಯಿತು.

ಚುನಾವಣೆಗೂ ಮುನ್ನ ಘೋಷಣೆ ಮಾಡಿದ 5 ಗ್ಯಾರಂಟಿಗಳಿಗೆ ಪರಿಶಿಷ್ಟರಿಗೆ ಮೀಸಲಿಟ್ಟ ಹಣ ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ.2017-18ರಿಂದ ಅನ್ನ ಭಾಗ್ಯ ಯೋಜನೆಗೂ ಪರಿಶಿಷ್ಟರ ಹಣ ಬಳಸುತ್ತಿದ್ದು, ಈವರೆಗೆ ಪರಿಶಿಷ್ಟ ಸಮುದಾಯದ ಕಾರ್ಡುದಾರರ ವಿವರ ನೀಡಿಲ್ಲ' ಎಂದು ಸ್ಲಂ ಸಮಿತಿ ಅಧ್ಯಕ್ಷ ಎ.ನರಸಿಂಹಮೂರ್ತಿ ಅಸಮಾಧಾನ ವ್ಯಕ್ತಪಡಿಸಿದರು. ಪರಿಶಿಷ್ಟ ಸಮುದಾಯಗಳ ಹಣವನ್ನು ಸಂಬಂಧಪಟ್ಟ ಇಲಾಖೆಗಳ ಹೊಸ ಕಟ್ಟಡ, ದುರಸ್ತಿ, ಶಾಲಾ-ಕಾಲೇಜು, ಹಾಸ್ಟೆಲ್ ಕಟ್ಟಡ ನಿರ್ಮಾಣ, ಮೂಲಭೂತ ಸೌಲಭ್ಯ ಕಲ್ಪಿಸಲು ಖರ್ಚು ಮಾಡಲಾಗುತ್ತಿದೆ. ಯಾವುದೇ ಕಾರಣಕ್ಕೂ ಗ್ಯಾರಂಟಿಗಳಿಗೆ ಎಸ್‌ಸಿಎಸ್‌ಪಿ-ಟಿಎಸ್‌ಪಿ ಹಣ ಬಳಸಬಾರದು. ಅವಕಾಶ ವಂಚಿತ ಸಮುದಾಯಗಳ ಅಭಿವೃದ್ಧಿಗೆ ಮೀಸಲಿಡಬೇಕು ಎಂದು ಒತ್ತಾಯಿಸಿದರು.

### ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸುವುದಿಲ್ಲ: ಹೈಕೋರ್ಟ್‌ಗೆ ಮಾಹಿತಿ

• ಉದಯವಾಹಿನಿ ಪಾಂಡವಪುರ

ತಾಲ್ಲೂಕಿನ ಬೇಬಿಬೆಟ್ಟದ ಗಣಿಗಾರಿಕೆ ಪ್ರದೇಶದಲ್ಲಿ ಟ್ರಯಲ್ ಬ್ಲಾಸ್ಟ್ ಮಾಡುವುದಿಲ್ಲ ಎಂದು ಸರ್ಕಾರಿ ವಕೀಲರು ಹೈಕೋರ್ಟ್‌ಗೆ ಮಾಹಿತಿ ನೀಡಿದರು. ಹೈಕೋರ್ಟ್‌ನ ಮುಖ್ಯನ್ಯಾಯಮೂರ್ತಿಗಳ ಭಾಗೀಯ ಪೀಠದಲ್ಲಿ ಕೆಆರ್‌ಎಸ್ ಜಲಾಶಯದ ವ್ಯಾಪ್ತಿಯಲ್ಲಿ ಟ್ರಯಲ್ ಬ್ಲಾಸ್ಟ್ ಸಂಬಂಧ ನಡೆದ ಚಾರಣೆಯ ವೇಳೆ ಸರ್ಕಾರಿ ವಕೀಲರು ಈ ಸ್ಪಷ್ಟನೆ ನೀಡಿದರು. 'ಅಣೆಕಟ್ಟೆ ಸುರಕ್ಷಾ ಸುತಿ ಸಭೆಯಲ್ಲಿ ಕೆಆರ್‌ಎಸ್ ಅಣೆಕಟ್ಟೆಯ 20 ಕಿ.ಮೀ.ವ್ಯಾಪ್ತಿಯಲ್ಲಿ ಗಣಿಗಾರಿಕೆಯ ಟ್ರಯಲ್ ಬ್ಲಾಸ್ಟ್ ನಡೆಸಬೇಕೇ? ಬೇಡವೇ? ಎಂಬ ಬಗ್ಗೆ ತೀರ್ಮಾನ ತೆಗೆದುಕೊಂಡು ನ್ಯಾಯಾಲಯಕ್ಕೆ ಮಾಹಿತಿ ನೀಡಲಾಗುವುದು' ಎಂದು ಸರ್ಕಾರಿ ವಕೀಲರು ನ್ಯಾಯಾಲಯಕ್ಕೆ ತಿಳಿಸಿದರು. ಈ ಚಾರಕ್ಕೆ ಸಂಬಂಧಪಟ್ಟಂತೆ 4 ವಾರಗಳ ಕಾಲಾವಕಾಶ ನೀಡಿ ಚಾರಣೆಯನ್ನು ನ್ಯಾಯಾಲಯವು ಮುಂದೂಡಿತು.


ಉದಯವಾಹಿನಿ ಚಿತ್ರ

### ಕಾವೇರಿ ನದಿಗೆ 1.70 ಲಕ್ಷ ಕ್ಯುಸೆಕ್ ಹೊರಹರಿವು


• ಉದಯವಾಹಿನಿ ಮಂಡ್ಯ

ಜಿಲ್ಲೆಯ ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರವಾಗಿ ಮಳೆಯಾಗುತ್ತಿದ್ದು, ಕೃಷ್ಣರಾಜ ಸಾಗರದ ಜಲಾಶಯಕ್ಕೆ ಒಳಹರಿವಿನ ಪ್ರಮಾಣ ಹೆಚ್ಚಾಗಿರುವುದರಿಂದ, ನದಿಯ ಹೊರಹರಿವು ತೀವ್ರವಾಗಿದ್ದು, ಜಲಾಶಯದಿಂದ ಜುಲೈ 31ರಂದು ಸುಮಾರು 1,70,000 ಕ್ಯುಸೆಕ್ ನೀರನ್ನು ಕಾವೇರಿ ನದಿಗೆ ಹರಿಸಲಾಗಿರುತ್ತದೆ.

ಶ್ರೀರಂಗಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ಸ್ಥಳಗಳಾದ ಕೆ.ಆರ್.ಎಸ್ ಜಲಾಶಯ, ಬೃಂದಾವನ ಉದ್ಯಾನ, ಪಶ್ಚಿಮವಾಹಿನಿ, ಗೋಸಾಯ್ ಘಾಟ್, ಬಲಮುರಿ ಎಡಮುರಿ, ವೆಲ್ಲೆಸ್ಲಿ ಸೇತುವೆ, ನಿಮಿಷಾಂಬ ದೇವಸ್ಥಾನದ ಪಕ್ಕದಲ್ಲಿರುವ ಸ್ನಾನ ಘಟ್ಟ, ರಂಗನತಿಟ್ಟು ಹಾಗೂ ಕೆ.ಆರ್.ಎಸ್ ಜಲಾಶಯದಿಂದ ಕಾವೇರಿ ನದಿಯ ಹೊರಹರಿವಿನ ಆಜು-ಬಾಜು ಸ್ಥಳಗಳ ವೀಕ್ಷಣೆಯನ್ನು ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕರ ಹಾಗೂ ಪ್ರವಾಸಿಗರ ಹಿತದೃಷ್ಟಿಯಿಂದ ಆಗಸ್ಟ್ 1 ಮತ್ತು 2 ರಂದು ಸಾರ್ವಜನಿಕರ ಹಾಗೂ ಪ್ರವಾಸಿಗರ ಪ್ರವೇಶವನ್ನು ನಿರ್ಬಂಧಿಸಿ ಜಿಲ್ಲಾಧಿಕಾರಿ ಕುಮಾರ ಅವರು ಆದೇಶ ಹೊರಡಿಸಿದ್ದಾರೆ.

### ಕೊಡಗಿಗೆ ಸಿಎಂ ಸಿದ್ದರಾಮಯ್ಯ ಭೇಟಿ

• ಉದಯವಾಹಿನಿ ಮಡಿಕೇರಿ



ಕೊಡಗು ಜಿಲ್ಲೆಯಲ್ಲಿ ಮಳೆ ನಿರಂತರವಾಗಿ ಮುಂದುವರೆದಿರುವಂ ತೆಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಸ್ಟ್ 2ರಂದು ಜಿಲ್ಲೆಗೆ ಭೇಟಿ ನೀಡಿ ಮಳೆಹಾನಿ ಪ್ರದೇಶಗಳನ್ನು ವೀಕ್ಷಿಸಲಿದ್ದಾರೆ. ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನಿಂದ ಮೈಸೂರಿಗೆ ವಿಶೇಷ ವಿಮಾನದಲ್ಲಿ ಬಂದು ಅಲ್ಲಿಂದ ರಸ್ತೆ ಮಾರ್ಗದಲ್ಲಿ ಶ್ರೀಮಂಗಲ ತಲುಪಿ, ಕುಟ್ಟ-ಕೇರಳ ಹೆದ್ದಾರಿ ಕುಸಿದ ಪ್ರದೇಶವನ್ನು ವೀಕ್ಷಿಸಲಿದ್ದಾರೆ. ಬಳಿಕ ಪ್ರವಾಹಪೀಡಿತ ಪ್ರದೇಶಗಳಾದ ವಿರಾಜಪೇಟೆಯ ಕೆದಮುಳ್ಳೂರು, ಸಿದ್ದಾಪುರವನ್ನು ವೀಕ್ಷಿಸಿ, ಸ್ವರ್ಣಮಾಲಾ ಕಲ್ಯಾಣಮಂಟಪದಲ್ಲಿ ತೆರೆದಿರುವ ಕಾಳಜಿ ಕೇಂದ್ರಕ್ಕೆ ಭೇಟಿ ನೀಡುವರು. ನಂತರ ಕುಶಾಲನಗರದ ಮಾದಾಪಟ್ಟಣ ಸೇರಿದಂತೆ ಮಳೆ ಹಾನಿಪ್ರದೇಶಗಳನ್ನು ವೀಕ್ಷಿಸಲಿದ್ದಾರೆ.

### ಕೊಡಗಿನಲ್ಲಿ ಮುಂದುವರಿದ ವರ್ಷಧಾರೆ

• ಉದಯವಾಹಿನಿ ಮಡಿಕೇರಿ

ಕೊಡಗು ಜಿಲ್ಲೆಯಲ್ಲಿ ಬುಧವಾರ ರಾತ್ರಿ ಬಿಡುವು ನೀಡಿದ್ದ ಮಳೆ ಗುರುವಾರ ಬೆಳಿಗ್ಗೆಯಿಂದ ಮತ್ತೆ ಆರಂಭವಾಗಿದೆ. ಮಡಿಕೇರಿ ನಗರ ಸೇರಿದಂತೆ ಬಹುತೇಕ ಎಲ್ಲೆಡೆ ಬಿರುಸಿನಿಂದ ಸುರಿಯುತ್ತಿದೆ. ಮಡಿಕೇರಿ ನಗರದಲ್ಲಿ ದಟ್ಟ ಮಂಜಿನೊಂದಿಗೆ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.


ಉದಯವಾಹಿನಿ ಚಿತ್ರ

ಜಿಲ್ಲೆಯ ಎಲ್ಲಾ ಶಾಲೆಗಳಿಗೆ ರಜೆ ನೀಡಲಾಗಿದೆ. ಸಿದ್ದಾಪುರ ಭಾಗದಲ್ಲಿ ಪ್ರವಾಹ ಪರಿಸ್ಥಿತಿ ಉಲ್ಬಣಿಸಿದೆ. ಗುಹ್ಯ ಗ್ರಾಮದ ಕಕ್ಕಟ್ಟುಕಾಡುವಿಗೆ ತೆರಳುವ ರಸ್ತೆ ಜಲಾವೃತಗೊಂಡಿದ್ದು, ಸಂಪರ್ಕ ಕಡಿತಗೊಂಡಿದೆ. ಕರಡಿಗೋಡು ಗ್ರಾಮಕ್ಕೆ ತೆರಳುವ ರಸ್ತೆಯೂ ಜಲಾವೃತಗೊಂಡಿದೆ. ಕರಡಿಗೋಡು ನದಿ ದಡದ 24 ಕುಟುಂಬಗಳ 76 ಮಂದಿಯನ್ನು ಸಿದ್ದಾಪುರದ ಸ್ವರ್ಣಮಾಲ ಕಲ್ಯಾಣ ಮಂಟಪದ ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ.

ಹಚ್ಚಿನಾಡು ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕಾಳಜಿ ಕೇಂದ್ರ ಆರಂಭಿಸಿದ್ದು, 10 ಕುಟುಂಬದ 44 ಮಂದಿಯನ್ನು ಸ್ಥಳಾಂತರಿಸಲಾಗಿದೆ. ವಿರಾಜಪೇಟೆ ತಹಶೀಲ್ದಾರ್ ರಾಮಚಂದ್ರ, ಅಮೃತ್ತಿ ಕಂದಾಯ ಪರಿವೀಕ್ಷಕ ಅನಿಲ್ ಸ್ಥಳದಲ್ಲೇ ಠಿಕಾಣಿ ಹೂಡಿದ್ದಾರೆ.

ಅಂತರಾಳದಿಂದ... EDITORIAL

# ರಣಹದ್ದುಗಳ ಸ್ಥಾನ ತುಂಬುತ್ತಿರುವ ಮನುಷ್ಯ

ಸಾಧಾರಣವಾಗಿ ಹುಲಿ, ಸಿಂಹಗಳು ಕ್ರೂರ ಮಾಂಸಾಹಾರಿ ಪ್ರಾಣಿಗಳಾದರೂ, ಆ ಹೆಸರುಗಳನ್ನು ಮನುಷ್ಯ ತನ್ನ ಹೆಗ್ಗಳಿಕೆಗಾಗಿ ದುರುಪಯೋಗ ಪಡಿಸಿಕೊಳ್ಳುವುದಿದೆ. ತಮ್ಮ ನಾಯಕರನ್ನು ಹಿಂಬಾಲಕರು ಹುಲಿ, ಸಿಂಹಗಳಿಗೆ ಹೋಲಿಸುವುದು ಇಂದಿನ ದಿನಗಳಲ್ಲಿ ಸಾಮಾನ್ಯವಾಗಿ ಬಿಟ್ಟಿದೆ. ಇದೇ ಸಂದರ್ಭದಲ್ಲಿ ದುಷ್ಟ ರಾಜಕಾರಣಿಗಳನ್ನು, ಶ್ರೀಸಾಮಾನ್ಯರನ್ನು ಶೋಷಿಸುವ ಅಧಿಕಾರಿಗಳನ್ನು ರಣ ಹದ್ದುಗಳಿಗೆ ಹೋಲಿಸುವುದಿದೆ. ವಿಪರ್ಯಾಸವೆಂದರೆ, ಮನುಷ್ಯ ವೇಷದಲ್ಲಿರುವ ಇಂತಹ ರಣಹದ್ದುಗಳ ಸಂಖ್ಯೆ ಹೆಚ್ಚುತ್ತಿವೆ. ಇದೇ ಸಂದರ್ಭದಲ್ಲಿ ಈ ಮನುಷ್ಯರ ರಾಕ್ಷಸತ್ವದೊಂದಿಗೆ ಸ್ಪರ್ಧಿಸಲು ಕಸುವು ಸಾಲದೆ ರಣಹದ್ದುಗಳು ಅಳಿವಿನಂಚಿನಲ್ಲಿವೆ. ಸಾಧಾರಣವಾಗಿ ಹದ್ದುಗಳಿಗೆ, ಗಿಡುಗಗಳಿಗೆ ಇರುವ ಗೌರವ ರಣ ಹದ್ದುಗಳಿಗಿಲ್ಲ. ಹಲವು ಮಾಂಸಾಹಾರಿ ಪ್ರಾಣಿ, ಪಕ್ಷಿಗಳಂತೆಯೇ ರಣಹದ್ದುಗಳೂ ಕಳೇಬರಗಳನ್ನೇ ಆಹಾರಕ್ಕೆ ನೆಚ್ಚಿಕೊಂಡಿವೆ. ಆದರೆ ರಣಹದ್ದುಗಳನ್ನು ಮನುಕುಲ ಸದಾ ನಿಕೃಷ್ಟವಾಗಿ ನಡೆಸಿಕೊಂಡು ಬಂದಿದೆ. ಯುದ್ಧಗಳು, ನರಮೇಧಗಳು, ಸಾಂಕ್ರಾಮಿಕ ರೋಗಗಳೊಂದಿಗೆ ಮನುಷ್ಯರು ರಣಹದ್ದುಗಳನ್ನು ನೆನಪಿಸಿ ಕೊಳ್ಳುತ್ತಾರೆ. ವಿಪರ್ಯಾಸವೆಂದರೆ, ಯುದ್ಧಗಳು, ನರಮೇಧಗಳ ಮುಖ್ಯ ಕಾರಣಕರ್ತರು ಮನುಷ್ಯರೇ ಹೊರತು, ರಣ ಹದ್ದುಗಳಲ್ಲ. ಮನುಷ್ಯರು ಮಾಡಿದ ಅನಾಹುತಗಳ ಪರಿಣಾಮಗಳನ್ನು ತನ್ನ ಆಹಾರವಾಗಿಸಿ, ಈ ಜಗತ್ತನ್ನು ತಲೆ ತಲಾಂತರಗಳಿಂದ ರಣಹದ್ದುಗಳು ಪೊರೆಯುತ್ತಾ ಬಂದಿವೆ.

**ಭಾರತೀಯ ಪರಿಸರ ವ್ಯವಸ್ಥೆಗೆ ಅತ್ಯಂತ ಅಗತ್ಯ**

**ರಣಹದ್ದುಗಳ ಸಂಖ್ಯೆಯಲ್ಲಿ ಕುಸಿತವುಂಟಾಗಿರುವ ಕಾರಣದಿಂದಾಗಿ 2000-2005ರ ನಡುವೆ ದೇಶವು ವಾರ್ಷಿಕ 52,621 ಕೋಟಿ ರೂಪಾಯಿಗಳ ಆರ್ಥಿಕ ಹಾನಿಗಳನ್ನು ಅನುಭವಿಸಿತ್ತು ಎಂದು ಅಮೆರಿಕನ್ ಇಕನಾಮಿಕ್ಸ್ ಅಸೋಸಿಯೇಶನ್ ತನ್ನ ಅಧ್ಯಯನದಲ್ಲಿ ಹೇಳಿದೆ. ರಣಹದ್ದುಗಳು ಭಾರತೀಯ ಪರಿಸರ ವ್ಯವಸ್ಥೆಗೆ ಅತ್ಯಂತ ಅಗತ್ಯವಾಗಿರುವ ಪಕ್ಷಿಗಳಲ್ಲಿ ಒಂದಾಗಿವೆ ಎನ್ನುವುದು ವರದಿಯಿಂದ ಬಹಿರಂಗವಾಗಿದೆ.**

ರಣಹದ್ದುಗಳ ಕುರಿತಂತೆ ಇತ್ತೀಚೆಗೆ ಕುತೂಹಲಕರ ವರದಿಯೊಂದು ಹೊರ ಬಿದ್ದಿದೆ. ಭಾರತದಲ್ಲಿ ರಣಹದ್ದುಗಳು ವರ್ಷದಿಂದ ವರ್ಷಕ್ಕೆ ಇಳಿಮುಖವಾಗುತ್ತಿದೆ ಎನ್ನುವುದು ವರದಿಯಿಂದ ಬಹಿರಂಗವಾಗಿದೆ.

ಅದಕ್ಕಿಂತಲೂ ಆತಂಕಕಾರಿ ಸಂಗತಿಯೆಂದರೆ, ಈ ರಣಹದ್ದುಗಳ ಸಂಖ್ಯೆ ಇಳಿಕೆಯಾಗುತ್ತಿರುವ ಪ್ರದೇಶದಲ್ಲಿ ಮನುಷ್ಯನ ಸಾವಿನ ಪ್ರಮಾಣಗಳು ಹೆಚ್ಚುತ್ತಿವೆ ಎನ್ನುವುದು. ರಣಹದ್ದುಗಳ ಇಳಿಕೆಯ ಕಾರಣದಿಂದ ಐದು ವರ್ಷಗಳಲ್ಲಿ ಐದು ಲಕ್ಷ ಜನರು ಮೃತಪಟ್ಟಿದ್ದರು ಎನ್ನುವ ಅಂಶವನ್ನು ವರದಿ ಉಲ್ಲೇಖಿಸಿದೆ. ಈ ಅಧ್ಯಯನಕ್ಕಾಗಿ ರಣಹದ್ದುಗಳು ಹೆಚ್ಚಿನ ಸಂಖ್ಯೆಯಲ್ಲಿದ್ದ 600ಕ್ಕೂ ಅಧಿಕ ಜಿಲ್ಲೆಗಳನ್ನು ಸಮೀಕ್ಷೆಗೊಳಪಡಿಸಲಾಗಿತ್ತು. 1994ಕ್ಕಿಂತ ಮೊದಲು ಈ ಜಿಲ್ಲೆಗಳಲ್ಲಿ ಮಾನವ ಸಾವಿನ ಸರಾಸರಿ ಪ್ರಮಾಣ ಶೇ. 0.9ರಷ್ಟಿತ್ತು ಎನ್ನುವುದು ಸಮೀಕ್ಷೆಯಿಂದ ಬೆಳಕಿಗೆ ಬಂದಿತ್ತು. ಆದರೆ ರಣಹದ್ದುಗಳ ಸಂಖ್ಯೆ ಇಳಿಕೆಯಾಗುತ್ತಿದ್ದಂತೆಯೇ ಮನುಷ್ಯರ ಸಾವಿನ ಸಂಖ್ಯೆಯಲ್ಲಿ ಹೆಚ್ಚಳವಾಗತೊಡಗಿತು. ರಣಹದ್ದುಗಳು 'ಮನುಷ್ಯರಂತೆ' ಜೀವಂತ ಮನುಷ್ಯರನ್ನು ಬಲಿತೆಗೆದುಕೊಳ್ಳುವುದಿಲ್ಲ. ದೇಶದಲ್ಲಿ ಹೆಚ್ಚುತ್ತಿರುವ ಹಿಂಸೆ, ನರಮೇಧಗಳಿಗೆ ಹೋಲಿಸಿದರೆ ರಣಹದ್ದುಗಳ ಸಂಖ್ಯೆ ಹೆಚ್ಚಾಗಬೇಕಾಗಿತ್ತು. ಕಳೆದ ಎರಡು ದಶಕಗಳಲ್ಲಿ ಈ ದೇಶದಲ್ಲಿ ನಡೆದಿರುವ ಹಿಂಸಾಚಾರ, ದಂಗೆ, ಗಲಭೆಯಿಂದ ಸತ್ತ ಮನುಷ್ಯರ ಸಂಖ್ಯೆ ಬಹುದೊಡ್ಡದು. ಇದರ ಬೆನ್ನಿಗೇ 2020ರಲ್ಲಿ ಬಂದ ಕೊರೋನ ಲಕ್ಷಾಂತರ ಜನರನ್ನು ಬಲಿತೆಗೆದುಕೊಂಡಿತು. ಮೃತದೇಹಗಳನ್ನು ಹೂಳುವುದಕ್ಕೂ ಸ್ಥಳವಿಲ್ಲ ಎನ್ನುವಂತಹ ಸ್ಥಿತಿ ನಿರ್ಮಾಣವಾಯಿತು. ಗಂಗಾನದಿಯ ತಟದಲ್ಲಿ ಅನಾಥ ಶವಗಳು ಸಾಲು ಸಾಲಾಗಿ ಪತ್ತೆಯಾದವು. ನಾಯಿ-ನರಿಗಳು ಅವುಗಳನ್ನು ಎಳೆದು ತಿನ್ನುತ್ತಿರುವುದು ಮಾಧ್ಯಮಗಳಿಂದ ಬೆಳಕಿಗೆ ಬಂತು. ಮನುಷ್ಯರೇ ಇಷ್ಟೊಂದು ಪ್ರಮಾಣದಲ್ಲಿ ರಣ ಹದ್ದುಗಳಿಗೆ ಆಹಾರವನ್ನು ಒದಗಿಸಿಕೊಡುತ್ತಿದ್ದರೂ, ರಣ ಹದ್ದುಗಳ ಸಂಖ್ಯೆ ಹೆಚ್ಚಾಗಿಲ್ಲ ಎನ್ನುವುದು ವಿಶೇಷವೇ ಸರಿ. ಕ್ರೌರ್ಯದ ವಿಷಯದಲ್ಲಿ ಮನುಷ್ಯನೊಂದಿಗೆ ಸ್ಪರ್ಧಿಸಲು ರಣಹದ್ದುಗಳೂ ಸಿದ್ಧವಿಲ್ಲ ಎನ್ನುವುದು ಇದರಿಂದ ಬಹಿರಂಗವಾಗುತ್ತದೆ. ಸಾಧಾರಣವಾಗಿ ರಣಹದ್ದುಗಳ ಬಳಿಕ ಮನುಷ್ಯರು ಅತ್ಯಂತ ನಿಕೃಷ್ಟವಾಗಿ ಕಾಣುತ್ತಾ ಬಂದಿರುವುದು ಕಾಗೆಗಳನ್ನು. ಆದರೆ ಕಾಗೆಗಳು ಪರಿಸರದ ಸಮತೋಲನದಲ್ಲಿ ಪ್ರಧಾನ ಪಾತ್ರವಹಿಸುತ್ತದೆ ಎನ್ನುವುದನ್ನು ಪರಿಸರ ತಜ್ಞರು ನಿರೂಪಿಸುತ್ತಲೇ ಬಂದಿದ್ದಾರೆ. ಕಾಗೆಗಳನ್ನು ರೈತನ ಮಿತ್ರ ಎಂದು ಕರೆಯುತ್ತಾರೆ. ಮನುಷ್ಯ ಮಾಡಿದ ಹೊಲಸುಗಳನ್ನು ತಿಂದು ಶುಚಿಗೊಳಿಸುವುದು ಕಾಗೆಗಳು. ಆದರೆ ತನ್ನ ಬಣ್ಣದ ಕಾರಣಕ್ಕಾಗಿ ಮತ್ತು ತಾನು ಸೇವಿಸುವ ಆಹಾರದ ಕಾರಣಕ್ಕಾಗಿಯೇ ಕಾಗೆಯನ್ನು ಮನುಷ್ಯ ದೂರವಿಡುತ್ತಾ ಬಂದಿದ್ದಾನೆ. ನವಿಲು, ಗುಬ್ಬಚ್ಚಿಗಳ ಮೇಲಿರುವ ಕಾಳಜಿ ಕಾಗೆಗಳ ಮೇಲಿಲ್ಲ. ಸಾಧಾರಣವಾಗಿ ಎಲ್ಲಾ ಹಕ್ಕಿಗಳು ಪರಿಸರದ ಸಮತೋಲನಕ್ಕೆ ಒಂದಲ್ಲ ಒಂದು ರೀತಿಯ ಕೊಡುಗೆಗಳನ್ನು ನೀಡುತ್ತಲೇ ಬಂದಿವೆ. ಆಧುನಿಕ ತಂತ್ರಜ್ಞಾನಗಳು, ಮೊಬೈಲ್ ಟವರ್‌ಗಳ ಕಾರಣಗಳಿಂದಾಗಿ ಹಕ್ಕಿಗಳು ನೆಲೆ ಕಳೆದುಕೊಳ್ಳುತ್ತಿವೆ. ಕಾಗೆಗಳ ಸ್ಥಿತಿಯೂ ಇದಕ್ಕಿಂತ ಭಿನ್ನವಾಗಿಯೇನೂ ಇಲ್ಲ. ಕಾಗೆಗಳು ಸತ್ತ ಇಲಿ ಮತ್ತಿತರ ಪ್ರಾಣಿಗಳ ಕಳೇಬರಗಳನ್ನು ಶುಚಿಗೊಳಿಸಿ ಸಮಾಜದ ಆರೋಗ್ಯವನ್ನು ಕಾಪಾಡಿಕೊಂಡು ಬಂದಿವೆ. ಅದೇ ರೀತಿ, ಮನುಷ್ಯತ್ವ ಮರೆತು ಮನುಷ್ಯ ಇನ್ನೊಬ್ಬ ಮನುಷ್ಯನ ಮೃತದೇಹಕ್ಕೆ ಘನತೆಯ ಸಂಸ್ಕಾರವನ್ನು ಮಾಡಲು ಸಿದ್ಧನಿಲ್ಲದೇ ಇದ್ದಾಗ ರಣಹದ್ದುಗಳು ಅವುಗಳನ್ನು ಆಹಾರವಾಗಿಸಿಕೊಂಡು ಸಮಾಜದ ಆರೋಗ್ಯವನ್ನು ಕಾಪಾಡುತ್ತಾ ಬಂದಿವೆ. ಮನುಷ್ಯ ಮಾಡಿದ ಎಲ್ಲಾ ಹಿಂಸಾಕಾಂಡಗಳು ಅಂತಿಮವಾಗಿ ರಣಹದ್ದುಗಳಿಂದ ಶುಚಿಗೊಳಿಸಲ್ಪಟ್ಟಿವೆ. ಸಾಲು ಸಾಲು ಸಾಂಕ್ರಾಮಿಕ ರೋಗಗಳಿಂದ ಸಮಾಜವನ್ನು ಕಾಪಾಡುತ್ತಾ ಬಂದಿರುವುದು ರಣಹದ್ದುಗಳು. ಯಾವಾಗ ರಣಹದ್ದುಗಳ ಸಂಖ್ಯೆಯಲ್ಲಿ ಇಳಿಮುಖವಾಯಿತೋ ಸಾಂಕ್ರಾಮಿಕ ರೋಗಗಳು ಹೆಚ್ಚು ಹೆಚ್ಚು ಹರಡತೊಡಗಿದವು. ಸಾವಿನ ಪ್ರಮಾಣ ಹೆಚ್ಚಲು ಇದುವೇ ಕಾರಣವಾಗಿದೆ. ರಣಹದ್ದುಗಳ ಸಂಖ್ಯೆ ಇಳಿಕೆಯಾಗುತ್ತಿರುವಂತೆಯೇ ಸಮಾಜದಲ್ಲಿ ಮನುಷ್ಯರೇ ರಣಹದ್ದುಗಳ ಸ್ಥಾನ ತುಂಬಲು ಸ್ಪರ್ಧಿಸುತ್ತಿರುವುದು ವಿಪರ್ಯಾಸವಾಗಿದೆ. ಮನುಷ್ಯರನ್ನು ಮನುಷ್ಯರೇ ಕಿತ್ತುತಿನ್ನುವ ಸಮಾಜವೊಂದು ಸೃಷ್ಟಿಯಾಗುತ್ತಿದೆ. ಇಸ್ರೇಲ್ ಕಳೆದ ಕೆಲವು ತಿಂಗಳುಗಳಿಂದ ಫೆಲೆಸ್ತೀನ್‌ನಲ್ಲಿ ಮಕ್ಕಳು, ಮಹಿಳೆಯರು ಬಿಡದೇ ನಡೆಸುತ್ತಿರುವ ಮಾರಣ ಹೋಮಕ್ಕೆ ರಣಹದ್ದುಗಳೇ ನಾಚಿ ಕಣ್ಮರೆಯಾಗುತ್ತಿರಬೇಕು.





• ಹಿಂದಿನ ಸಂಚಿಕೆಯಿಂದ

ಅವನು ಮತ್ತು ಅವನ ವಂಶದಲ್ಲಿ ಹುಟ್ಟುವವರೆಲ್ಲರೂ ಮಾನವಶ್ರೇಷ್ಠರೆನಿಸುವರು' ಎಂದನು. ವೇಣನೆಂಬ ಒಬ್ಬ ರಾಜನಿದ್ದನು. ಅವನ ಬಲಬಾಹುವಿನಿಂದ, ಎರಡನೆಯ ಇಂದ್ರನೋ ಎಂಬಂತೆ ಶೋಭಿಸುತ್ತಿದ್ದ ಒಬ್ಬನು, ಹುಟ್ಟುವಾಗಲೇ ಯುದ್ಧಕವಚದೊಡನೆ ಸಮಸ್ತ ಆಯುಧಗಳೊಂದಿಗೆ ಸಜ್ಜಿತನಾಗಿ, ವೇದವಿದನೂ ಸಮಸ್ತ ಕಲೆಗಳಲ್ಲಿ ಪರಿಣಿತನೂ ಆಗಿ ಹುಟ್ಟಿದ್ದನು. ಅವನನ್ನು ಋಷಿಗಳು ರಾಜನನ್ನಾಗಿಮಾಡಿದರು. ಶುಕ್ರನು ಅವನಿಗೆ ಪುರೋಹಿತನಾಗಿದ್ದನು. ಅವನು ವಿಷ್ಣುವಿಗೆ ಎಂಟನೆಯ ಮಗನೆಂಬ ನಂಬಿಕೆ ಜನಜನಿತವಾಗಿದ್ದಿತು. ಪೃಥುವೆಂಬ ಹೆಸರುಳ್ಳ ಅವನು ಭೂಮಿಯನ್ನು ಮಟ್ಟವಾಗಿಸಿ ವಾಸಯೋಗ್ಯವನ್ನಾಗಿ ಮಾಡಿದನು. ವಿಷ್ಣುವೇ ಮೊದಲಾದ ದೇವತೆಗಳು ಅವನಿಗೆ ರಾಜನೆಂದು ಮೂರ್ಧಾಭಿಷೇಕ ಮಾಡಿದರು. ಭೂಮಿಯು ನಂದಿನಿಯ ರೂಪದಲ್ಲಿ ಬಂದು ಅವನಿಗೆ ರತ್ನಾಭರಣಗಳನ್ನು ಕಾಣಿಕೆಯಾಗಿ ಕೊಟ್ಟಿತು. ಪೃಥುವು ಆ ನಂದಿನಿಯ ಹಾಲನ್ನು ಕರೆದು, ಅವಳಿಂದ ಎಲ್ಲರಿಗೂ ಆಹಾರವಾಗುವಂತಹ ಏಳು ಬೆಳೆಗಳನ್ನು ಪಡೆದನು. ಅವನ ದೆಸೆಯಿಂದಲೇ ಮಾನವನು ಧರ್ಮಕ್ಕೆ ಪ್ರಾಶಸ್ತ್ಯವನ್ನು ಕೊಡಲಾರಂಭಿಸಿದರು. ಅವನು ಜನಗಳ ಪ್ರೀತಿಗೆ ಪಾತ್ರನಾದ್ದರಿಂದ ಅವನಿಗೆ 'ರಾಜನ್' ಎಂದು ಹೆಸರಾಯಿತು. ಜನಗಳ ನೋವನ್ನು ನಿವಾರಿಸುವವನಾದ್ದರಿಂದ ಅವನನ್ನು 'ಕ್ಷತ್ರಿಯ' ನೆಂದು ಕರೆದರು. ಅವನ ಆಳ್ವಿಕೆಯನ್ನು ಔನ್ನತ್ಯಕ್ಕೇರಿಸಿದ್ದರಿಂದ ಭೂಮಿಗೆ 'ಪೃಥ್ವೀ' ಎಂದು ಹೆಸರಾಯಿತು. ವಿಷ್ಣುವು ಅವನ ಶರೀರವನ್ನು ಪ್ರವೇಶಿಸಿದನು. ಶುದ್ಧಾತ್ಮನಾದ ಒಬ್ಬ ಮನುಷ್ಯನು, ತನ್ನ ಪುಣ್ಯವು ತೀರಿದ ಮೇಲೆ, ಸ್ವರ್ಗದಿಂದ ಭೂಮಿಗಿಳಿದು ಬಂದು ರಾಜನಾಗಿ ಜನ್ಮ ತಾಳುವನು. ಅವನು ವಿಷ್ಣುವಿನ ಅಂಶದೊಂದಿಗೆ ಹುಟ್ಟಿದವನು. ದೇವತೆಗಳೇ ಅವನನ್ನು ಸಂಸ್ಥಾಪಿಸಿರುವುದರಿಂದ, ಅವನು ಬುದ್ಧಿಯ ಮೂಲ ದೇವತೆಗಳಲ್ಲಿರುವುದರಿಂದ, ಅವನು ಉಳಿದವರಿಗಿಂತ ಶ್ರೇಷ್ಠನು. ಅದರಿಂದಾಗಿಯೇ ಲೋಕವು ಅವನ ಆಜ್ಞಾರಾಧಕವಾಗಿರುವುದು; ಅವನಿಗೆ ಯಾರೂ ಆಜ್ಞೆಮಾಡಲಾಗದು. ಈ ಕಾರಣದಿಂದಲೇ, ಅವನು ಎಲ್ಲರಂತಿದ್ದರೂ, ಬಹುಜನರು ಅವನ ಮಾತಿಗೆ ವಿಧೇಯರಾಗಿರುವರು.

ಯುಧಿಷ್ಠಿರ: ಪ್ರಜೆಗಳ ಮುಖ್ಯ ಕರ್ತವ್ಯಗಳೇನು?

ಭೀಷ್ಮ: ಮೊದಲನೆಯ ಕರ್ತವ್ಯವೆಂದರೆ ರಾಜನನ್ನು ಆರಿಸಿ ಅವನಿಗೆ ಮೂರ್ಧಾಭಿಷೇಕ ಮಾಡುವುದು. ಕೋಶಕ್ಕಾಗಿ ಅವರು ತಮ್ಮಲ್ಲಿರುವ ಸ್ವರ್ಣವೇ ಮೊದಲಾದ ಲೋಹಗಳ ಮತ್ತು ಪಶುಸಂಪತ್ತಿನ ಐದನೆಯ ಒಂದು ಭಾಗವನ್ನು ಕೊಡಬೇಕು. ಅಲ್ಲದೆ ಧಾನ್ಯಸಂಪತ್ತಿನ ಹತ್ತರಲ್ಲಿ ಒಂದು ಭಾಗವನ್ನು ಕೊಡಬೇಕು. ಅವರು ತಮ್ಮಲ್ಲಿಯೇ ಒಬ್ಬ ಶಕ್ತನೂ ಆಯುಧ ಪರಿಣತಿಯುಳ್ಳವನೂ ಆದವನನ್ನು ಆರಿಸಿ, ಸೈನ್ಯದ ಸುಸ್ಥಿತಿಗಾಗಿ ರಾಜನ ಸಹಾಯಕ್ಕೆಂದು ನಿಯಮಿಸಬೇಕು.

ಮುಂದುವರಿಯುವುದು...



ಸಾಮಾಜಿಕ ಕಳಕಳಿ

ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ


# ಹೆಣ್ಣಿನ ಜೀವನದಲ್ಲಿ ಪ್ರೀತಿಯ ಪಾತ್ರ

ಗಣಿಯಂತೆ ಪ್ರೀತಿಯದು ಹೇಳಲಿಕೆ ಆಗದದು
ಮಣಿಯುತಲಿ ಸಾಗುತಿರೆ ಜೀವನದಲಿ
ಕಣಿವೆಯದೆ ರೀತಿಯಲಿ ಕಾಣುವುದು ಬದುಕದುವೆ
ತಣಿಯುತಲಿ ನೀನಿರಲು ಲಕ್ಷ್ಮಿ ದೇವಿ.....

**ಜೀವನದಲ್ಲಿ ಪ್ರೀತಿಯ ಪಾತ್ರ ಬಹಳಷ್ಟು ಮಹತ್ವ**

ಗಣಿಯನ್ನು ಗಮನಿಸಿದರೆ ಆಳವಾಗಿರುವಂತಹ ಗಣಿಯಲ್ಲಿ ಹಲವಾರು ರೀತಿಯ ಬೆಲೆಬಾಳುವಂತಹ ಖನಿಜ ವಸ್ತುಗಳು ಸಿಗುತ್ತವೆ. ಅದೇ ರೀತಿ ಪ್ರೀತಿಯೂ ಸಹ ಬಹಳವಾಗಿ ಗಮನಿಸುತ್ತಾ ಹೋದರೆ ತಾಳ್ಮೆಯಿಂದ ಕಾಯುತ್ತಾ ಶಾಂತಿಯಿಂದ ನೆನೆದರೆ ಪ್ರೀತಿಯು ಮಣಿಯುತ್ತದೆ. ಜೀವನದಲ್ಲಿ ಆ ಪ್ರೀತಿಯೊಂದಿಗೆ ಬದುಕನ್ನು ಸಾಗಿಸಬೇಕಾಗುತ್ತದೆ. ಕಣಿವೆಯ ರೀತಿಯಲ್ಲಿ ಕಾಣಿಸದೆ ಬದುಕು. ಆ ಪ್ರೀತಿ ಕಣಿವೆಯಲ್ಲಿ ಸಿಕ್ಕಾಗ ಮನುಜನ ಬದುಕು ತಣಿಯುತ್ತದೆ. ಹಾಗೆ ಹೆಣ್ಣಿನ ಜೀವನದಲ್ಲಿ ಪ್ರೀತಿಯ ಪಾತ್ರ ಬಹಳಷ್ಟು ಮಹತ್ವವನ್ನು ಒಳಗೊಂಡಂತಹ ಘಟ್ಟವಾಗಿದೆ.

ಹೆಣ್ಣಾಗಿ ಹುಟ್ಟಿದ ಮೇಲೆ ಬಹಳಷ್ಟು ಕಷ್ಟಗಳನ್ನು ಅನುಭವಿಸಬೇಕಾದದ್ದು. ಕಷ್ಟ ಸುಖಗಳನ್ನು ಸರಿಸಮಾನವಾಗಿ ನಡೆಸಿಕೊಂಡು ಹೋಗುವಂತಹ ಗುಣವನ್ನು ಹೆಣ್ಣು ಹೊಂದಿರುತ್ತಾಳೆ. ಬಹಳಷ್ಟು ಜವಾಬ್ದಾರಿಯನ್ನು ಹೊತ್ತು ತನ್ನದೇ ಆದಂತಹ ವಿಭಿನ್ನ ರೀತಿಯ ಪಾತ್ರಗಳಲ್ಲಿ ವಿಭಿನ್ನ ಹೆಸರಿನಲ್ಲಿ ಕಾರ್ಯವನ್ನು ನಿರ್ವಹಿಸುವಂತಹ ಹೆಣ್ಣು. ಸಹನಾ ಮೂರ್ತಿ ಆಗಿರುತ್ತಾಳೆ. ಆಕೆಗೆ ಬದುಕಿನಲ್ಲಿ ಬೇಕಾಗಿರುವುದು ಬೆನ್ನು ತಟ್ಟುವಂತಹ ಪ್ರೀತಿಯ ಎರಡು ಮಾತುಗಳು. ಆ ಪ್ರೀತಿಯ ಮಾತುಗಳಿಂದ ಪ್ರಪಂಚದಲ್ಲಿ ಎಂತಹ ಕಾರ್ಯವನ್ನು ಯಶಸ್ವಿಯಾಗಿ ನಿಭಾಯಿಸುವ ಶಕ್ತಿಯನ್ನು ಪಡೆಯುತ್ತಾಳೆ. ಎಷ್ಟು ಹೆಣ್ಣು ಮಕ್ಕಳಿಗೆ ಆ ಪ್ರೀತಿಯ ಕೊರತೆ ಇರುತ್ತದೆ. ಪ್ರಾಮಾಣಿಕತೆಯಿಂದ ತನ್ನ ಜೀವನದಲ್ಲಿ ತ್ಯಾಗದ ಮೂರ್ತಿಯಂತೆ ಯಾವುದಕ್ಕೂ ಆಸೆಯನ್ನು ಪಡೆದಂತೆ ಕಾರ್ಯವನ್ನು ಮಾಡುತ್ತಾ ಅದರಲ್ಲಿ ಯಶಸ್ವಿಯಾಗಲು ಹಪಹಪಿಸುತ್ತಾಳೆ. ಎಷ್ಟೇ ಒಳ್ಳೆಯ ಉತ್ತಮ ಕೆಲಸಗಳನ್ನು ಮಾಡಿದರು ಸಹ ಆಕೆಗೆ ಸಿಗುವುದು ಪ್ರೀತಿಯ ಬದಲು ಇನ್ನೂ ಉತ್ತಮವಾಗಿ ಮಾಡಿದ್ದರೆ ಚೆನ್ನಾಗಿತ್ತು ಎಂಬುದು. ಎಲ್ಲೋ ನೂರರಲ್ಲಿ ಎರಡು ಭಾಗ ಮಾತ್ರ ಬಹಳ ಸಂತೋಷವಾಗಿ ಜೀವನವನ್ನು ನಡೆಸುವ ಹೆಣ್ಣು ಮಕ್ಕಳಿದ್ದಾರೆ.



ತಂದೆ -ತಾಯಿ,ಅಣ್ಣ-ತಮ್ಮಂದಿರುವ ಅಕ್ಕ -ತಂಗಿಯರಲ್ಲಿ ಪ್ರೀತಿಯನ್ನು ಬಯಸುವಂತಹ ಹೆಣ್ಣು. ಪ್ರತಿಯೊಂದು ಸಂಬಂಧದಲ್ಲೂ ಪ್ರೀತಿಯನ್ನು ಬಹಳ ಅಪೇಕ್ಷೆಯನ್ನು ಪಡುತ್ತಾಳೆ. ಅದರಲ್ಲೂ ಆಕೆಯು ವಿಶೇಷವಾಗಿ ಬದುಕಿನಲ್ಲಿ ಪ್ರೀತಿಯನ್ನು ಬಯಸುವುದು ಗಂಡನ ಪ್ರೀತಿ. ಮನೆಯಲ್ಲಿ ಎಷ್ಟೇ ಕಷ್ಟಗಳು ಬಂದರೂ ಎಲ್ಲವನ್ನು ಎದುರಿಸುತ್ತಾ ನಡೆಯುವ ಆಕೆಯು ಗಂಡನ ಪ್ರೀತಿಗಾಗಿ ಹಪಹಪಿಸುತ್ತಿರುತ್ತಾಳೆ. ಯಾವುದೇ ರೀತಿಯ ಭೇದಭಾವ ತೋರದಂತೆ ಪ್ರೀತಿ ಬಯಸುತ್ತಾಳೆ. ಪ್ರೀತಿಯನ್ನು ಯಾರಿಗೂ ಹಂಚಿಕೆಯನ್ನು ಮಾಡದಂತೆ ಪೂರ್ಣ ಪ್ರಮಾಣದ ಪ್ರೀತಿಯನ್ನು ಬಯಸುತ್ತಾಳೆ. ಆ ಪ್ರೀತಿ ಗಂಡ ಹೆಂಡತಿಯ ಪ್ರೀತಿಯಲ್ಲಿ ಮಾತ್ರ ಪೂರ್ಣ ಪ್ರಮಾಣದಲ್ಲಿ ಬಯಸುತ್ತಾಳೆ. ಸೋದರ ಸೋದರಿಯರಿಗೆ ತೋರಿಸುವಂತಹ ಪ್ರೀತಿಯಲ್ಲಿ ಯಾವುದೇ ರೀತಿಯ ಭೇದಭಾವ ತೋರದಂತೆ ನೀಡಿ ಎಂದು ಹೇಳುವ ವಿಶಾಲ ಮನೋಭಾವವನ್ನು ಹೊಂದಿರುವವಳು. ಪ್ರತಿಯೊಂದರಲ್ಲೂ ಅಂತರವನ್ನು ಕಾಯ್ದುಕೊಳ್ಳಿ ಎಂದು ಹೇಳುವವಳು. ಪ್ರೀತಿಯಲ್ಲಿ ಮಾತ್ರ ಪೂರ್ಣ ಅಪ್ಪುಗೆಯನ್ನು ಬೇಡುವವಗಳು. ತನ್ನ ಗಂಡ ಹೆಂಡತಿ ಎಂಬ ಪವಿತ್ರ ಪ್ರೇಮದ ಮಧ್ಯೆ ಬೇರೆಯವರ ಕರಿನೆರಳು ಬೀಳದಂತೆ ಆಕೆ ಬಹಳ ಗಮನವನ್ನು ವಹಿಸುತ್ತಾಳೆ. ಒಂದು ವೇಳೆ ಸಂಸಾರದಲ್ಲಿ ಬಿರುಕೆನಾದರೂ ಮೂಡಿತೆಂದರೆ ಮುಗಿಯಿತು.

ತನ್ನ ಪ್ರಾಣವನ್ನೇ ಬಲಿಕೊಡುವಂತಹ ಹಂತಕ್ಕೆ ಹೋಗುವಂತಹ ಮಹಿಳೆಯರಿದ್ದಾರೆ. ಆದರೂ ಸಹ ಬಹಳ ಧೈರ್ಯದಿಂದಲೇ ಅದನ್ನು ಬಗೆಹರಿಸಿ ತನ್ನ ಪ್ರೀತಿಯನು ಮತ್ತೆ ಪಡೆಯಲು ಅವಕಾಶವನ್ನು ನೀಡುವಂತಹ ವಿಶಾಲ ಮನೋಭಾವವನ್ನು ಆಕೆ ಹೊಂದಿರುತ್ತಾಳೆ. ಏನೇ ಆಗಲಿ ನಮ್ಮ ಹೆಣ್ಣುಮಕ್ಕಳ ಪ್ರೀತಿಯನ್ನು ಬಯಸುವ ವಿವಿಧ ಬಗೆಯ ಪ್ರೀತಿಯಲ್ಲಿ ತಂದೆ ತಾಯಿಯ ಪ್ರೀತಿಯ ವಿಶಿಷ್ಟವಾದದ್ದು, ವಿಭಿನ್ನವಾದದ್ದು, ಸ್ವತಂತ್ರವಾದದ್ದು, ಅಕ್ಕರೆಯ ಮಡಲಿನಲ್ಲಿ ಬೆಳೆದಂತಹ ಮಗಳಿಗೆ ತಂದೆ ತಾಯಿಯು ಸಹ ನೀಡುವ ಪ್ರೀತಿಗೆ ಬೆಲೆಯನ್ನು ನೀಡಲು ಸಾಧ್ಯವೇ ಇಲ್ಲ.

ಬದುಕು ಬಹಳ ಕಷ್ಟ ನಷ್ಟಗಳ ಸುಖದ ಸಾಗರದಲ್ಲಿ ಮಿಂದು ಹೇಳಬೇಕೆಂಬುದನ್ನು ಕಲಿಸುವವರು ಹಿರಿಯರು. ಅಂತಹ ಹಿರಿಯರ ಪ್ರೀತಿಯನ್ನು ವಿಭಿನ್ನ ರೀತಿಯ ವಿಶಿಷ್ಟವಾದಂತ ಕಲಿಯುವ ಅಂಶಗಳನ್ನು ನಾವು ನೋಡಬಹುದಾಗಿದೆ. ಪ್ರತಿಯೊಂದು ವಿಚಾರದಲ್ಲೂ ಬುದ್ಧಿವಾದಗಳನ್ನು ಹೇಳುತ್ತಾ ಪ್ರೀತಿಯನ್ನು ವ್ಯಕ್ತಪಡಿಸುವ ಹಿರಿಯರ ಆಶೀರ್ವಾದವು ಮುಖ್ಯವಾಗಿದೆ. ಆಕೆಯು ಅಕ್ಕ ತಂಗಿಯರ ಪ್ರೀತಿಯು ಜೇನಿನ ಸಿಹಿಯನ್ನು ಒಳಗೊಂಡಂತಿರುತ್ತದೆ.

ಪ್ರತಿಯೊಂದು ಧನಾತ್ಮಕತೆಯನ್ನು ಒಳಗೊಂಡಂತೆ ಬಯಸುವಂತಹ ಪವಿತ್ರವಾದಂತಹ ಮನಸ್ಸನ್ನು ಒಳಗೊಂಡಂತಹ ಹೆಣ್ಣಿಗೆ ನಮ್ಮ ಜೀವನದಲ್ಲಿ ನೀಡುವುದೇನು? ಅನುಮಾನ, ಅವಮಾನ, ಕಳಂಕ, ಹೀಗೆ ಅವರ ತ್ಯಾಗಕ್ಕೆ ಬೆಲೆಯನ್ನು ಸರಿಯಾಗಿ ನೀಡದಿರುವಂತಹ ಪರಿಸ್ಥಿತಿಗಳು ಪ್ರಸ್ತುತ ದಿನ ಮಾನಗಳಲ್ಲಿ ಇಂದಿಗೂ ನಡೆಯುತ್ತಿರುವುದನ್ನು ನಾವು ಕಾಣಬಹುದಾಗಿದೆ.

ಹೆಣ್ಣಿನ ಬದುಕಿನಲ್ಲಿ ಪ್ರೀತಿಯು ಬಹಳ ಅರ್ಥಪೂರ್ಣವಾದ ಮತ್ತು ಮಹತ್ವದ ಅಂಶವನ್ನು ಒಳಗೊಂಡಿದೆ ಎಂಬುದನ್ನು ಪ್ರತಿಯೊಬ್ಬರು ಅರಿತುಕೊಂಡು ಆಕೆಗೆ ಪ್ರೀತಿಯಲ್ಲಿ ಯಾವುದೇ ರೀತಿಯ ಭೇದಭಾವ ಮಾಡದೆ ಪೂರ್ಣ ಪ್ರಮಾಣದಲ್ಲಿ ಅಕ್ಕರೆಯ ಪ್ರೀತಿಯನ್ನು ನೀಡುವುದು ಮುಖ್ಯವಾಗುತ್ತದೆ ಎಂದು ಹೇಳುತ್ತ ಈ ಲೇಖನಕ್ಕೆ ವಿರಾಮವನ್ನು ಹೇಳುತ್ತಿದ್ದೇನೆ. ಜೈ ಹಿಂದ್ ಜೈ ಭಾರತ್ ಮಾತೆ.

## ಸರ್ಕಾರಿ ಶಾಲೆ ಜಾಗ ರಕ್ಷಿಸಿ: ಸಚಿವ ಮಧು ಬಂಗಾರಪ್ಪಗೆ ಎಎಪಿ ಮನವಿ

• ಉದಯವಾಹಿನಿ, ಬೆಂಗಳೂರು

ಕೆಆರ್ ಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಭಟ್ಟರಹಳ್ಳಿ ಸರ್ವೆ ನಂ.19ರಲ್ಲಿ ಸರ್ಕಾರಿ ಶಾಲೆಗೆ ಸೇರಿದ 6 ಎಕರೆ 17 ಗುಂಟೆ ಜಮೀನು ಒತ್ತುವರಿಯಾಗಿದ್ದು, ಸರ್ಕಾರ ಅದನ್ನು ರಕ್ಷಣೆ ಮಾಡಬೇಕು ಎಂದು ಆಮ್ ಆದ್ಮಿ ಪಾರ್ಟಿ ಮುಖಂಡರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಮನವಿ ಮಾಡಿಕೊಂಡಿದೆ.

ಶಿಕ್ಷಣ ಸಚಿವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಎಎಪಿ ರಾಜ್ಯ ಸಂಘಟನಾ ಕಾರ್ಯದರ್ಶಿ ಮೋಹನ್ ದಾಸರಿ ಅವರು, ಕಳೆದ 6 ತಿಂಗಳಿನಿಂದ ಒತ್ತುವರಿ ವಿರುದ್ಧ ಹೋರಾಟ ಮಾಡುತ್ತಿದ್ದೇವೆ, ಸಚಿವ ಭೈರತಿ ಬಸವರಾಜ್ ರವರ ಪಟಾಲಮ್ ಒತ್ತುವರಿ ಮಾಡಿಕೊಂಡು ಲೇಔಟ್ ನಿರ್ಮಾಣ ಮಾಡಲು ಮುಂದಾಗಿದ್ದಾರೆ. ಖುದ್ದಾಗಿ ನಾವೇ ತೆರಳಿ ಸ್ಥಳ ಪರಿಶೀಲನೆ ಮಾಡಿದ್ದೇವೆ, ಸ್ಥಳೀಯರನ್ನು ಮಾತನಾಡಿಸಿದಾಗ ಬೆಂಗಳೂರು-ಕೋಲಾರ ಹೆದ್ದಾರಿ ಪಕ್ಕದಲ್ಲೇ ಇರುವ ನೂರಾರು ಕೋಟಿ ಬೆಲೆ ಬಾಳುವ ಶಾಲೆಗೆ ಸೇರಿದ ಜಾಗವನ್ನು ಒತ್ತುವರಿ ಮಾಡಿರುವುದು ಪತ್ತೆಯಾಗಿದೆ,


ಉದಯವಾಹಿನಿ ಚಿತ್ರ

2020ರವರೆಗೂ ಪಹಣಿಯಲ್ಲಿ ಪ್ರಾಥಮಿಕ ಶಾಲೆಗೆ ಸೇರಿದ್ದು ಎಂದು ತೋರಿಸುತ್ತಿದೆ, 50 ವರ್ಷಗಳ ಹಿಂದೆ ಶಾಲೆಗಾಗಿ ಈ ಭೂಮಿಯನ್ನು ದಾನ ಮಾಡಲಾಗಿದೆ ಎಂದು ಹೇಳಿದರು.

ಆಮ್ ಆದ್ಮಿ ಪಾರ್ಟಿ ಬೆಂಗಳೂರು ನಗರಾಧ್ಯಕ್ಷ ಡಾ. ಸತೀಶ್ ಮಾತನಾಡಿ, ಬೆಂಗಳೂರಿನಲ್ಲಿ ಭೂಮಿಗೆ ಚಿನ್ನದ ಬೆಲೆ ಇರುವುದರಿಂದ, ಭೂಗಳ್ಳರ ಹಾವಳಿ ಮಿತಿ ಮೀರಿದೆ. ಬೆಂಗಳೂರು ನಗರ ಜಿಲ್ಲಾಡಳಿತ ಈ ಬಗ್ಗೆ ಗಮನ ಹರಿಸಬೇಕು, ಕಂದಾಯ ಇಲಾಖೆ, ತಹಶೀಲ್ದಾರ್ ಸರ್ಕಾರಿ ಜಾಗಗಳ ರಕ್ಷಣೆ ಮಾಡಬೇಕು ಎಂದರು.

50 ವರ್ಷಗಳ ಹಿಂದೆ ಶಾಲೆಗಾಗಿ ದಾನ ಮಾಡಿದ ಜಮೀನಿಗೆ ಈಗ ನಕಲಿ ದಾಖಲೆ ಸೃಷ್ಟಿಸಿ ಜಾಗ ಕಬಳಿಸುವ ಸಂಚು ಮಾಡಿದ್ದಾರೆ. ಸಚಿವರು ನಮ್ಮ ಮನವಿಗೆ ಸ್ಪಂದಿಸಿದ್ದಾರೆ. ಅಕ್ರಮವನ್ನು ಬಯಲುಮಾಡಲು ಹೊರಟ ಆಮ್ ಆದ್ಮಿ ಪಾರ್ಟಿ ಮುಖಂಡ ದಿಲೀಪ್ ಅವರಿಗೆ ಜೀವ ಬೆದರಿಕೆ ಹಾಕುವುದು, ಸುಳ್ಳು ಕೇಸ್ ಹಾಕಿದ್ದಾರೆ. ಇದಕ್ಕೆಲ್ಲಾ ನಾವು ಹೆದರುವುದಿಲ್ಲ, ಅನ್ಯಾಯದ ವಿರುದ್ಧ ಆಮ್ ಆದ್ಮಿ ಪಾರ್ಟಿ ಹೋರಾಟ ನಡೆಯಲಿದೆ ಎಂದರು.

**ಶಾಲೆಗಾಗಿ ಕೊಟ್ಟಿರುವ ಭೂಮಿಯನ್ನು ಭೂಗಳ್ಳರು ನಕಲಿ ದಾಖಲೆ ಸೃಷ್ಟಿಸಿ ಲೇಔಟ್ ಮಾಡಲು ಹೊರಟಿದ್ದಾರೆ. ಸಚಿವ ಮಧು ಬಂಗಾರಪ್ಪ ಅವರಿಗೆ ಸರ್ಕಾರಿ ಆಸ್ತಿ ರಕ್ಷಣೆ ಮಾಡುವಂತೆ ಮನವಿ ಮಾಡಿದ್ದೇವೆ, ಅವರು ಕೂಡಲೇ ಅಡ್ವೋಕೇಟ್ ಜನರಲ್ ಅವರಿಗೆ ಕರೆ ಮಾಡಿ ಮಾತನಾಡಿದ್ದಾರೆ. ಭೂಗಳ್ಳರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವ ಭರವಸೆ ನೀಡಿದ್ದಾರೆ. ಸರ್ಕಾರಿ ಶಾಲೆಯ ಜಾಗ ವಾಪಸ್ ಪಡೆಯಬೇಕು, ಅಲ್ಲೊಂದು ಮಾದರಿ ಶಾಲೆ ನಿರ್ಮಾಣ ಆಗುವವರೆಗೂ ನಮ್ಮ ಆಮ್ ಆದ್ಮಿ ಪಕ್ಷ ಹೋರಾಟ ಮುಂದುವರೆಸುತ್ತದೆ ಎಂದು ತಿಳಿಸಿದರು.**

## ಸ್ಕ್ರ್ಯಾಪ್ ರವಿ ಹತ್ಯೆ ಪ್ರಕರಣ: ಆರೋಪಿ ಕಾಲಿಗೆ ಗುಂಡೇಟು, ಬಂಧನ

• ಉದಯವಾಹಿನಿ, ಬೆಂಗಳೂರು

ಆನೇಕಲ್ ಪುರಸಭಾ ಸದಸ್ಯ ಸ್ಕ್ರ್ಯಾಪ್ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆನೇಕಲ್ ಪೊಲೀಸರು 30 ವರ್ಷದ ರೌಡಿ ಶೀಟರ್ ಒಬ್ಬನ ಕಾಲಿಗೆ ಗುಂಡಿನ ಹಾರಿಸಿ ಬಂಧನಕ್ಕೊಳಪಡಿಸಿದ್ದಾರೆ.

ಜು.24 ರಂದು ಪುರಸಭಾ ಸದಸ್ಯ ಸ್ಕ್ರಾಪ್ ರವಿಯನ್ನು ಮಾರಕಾಸ್ತ್ರಗಳಿಂದ ಚುಚ್ಚಿ ಕೊಲೆಗೈದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳಾದ ಹರೀಶ್ ಅಲಿಯಾಸ್ ಹಂದಿ ಹರೀಶ್, ವಿನಯ್ ಅಲಿಯಾಸ್ ವಿನಿ ಎಂಬುವರು ಸ್ವಯಂ ಆಗಿ ನ್ಯಾಯಾಲಯಕ್ಕೆ ಶರಣಾಗಿದ್ದರು.ಆದರೆ ಪ್ರಮುಖ ಆರೋಪಿ ಕಾರ್ತಿಕ್ ತಲೆ ಮರೆಸಿಕೊಂಡಿದ್ದನು. ಈತನ ಪತ್ತೆಗಾಗಿ ಪೊಲೀಸರು ಒಂದು ವಾರದಿಂದ ಹುಡುಕಾಟ ನಡೆಸುತ್ತಿದ್ದರು. ಬೆಳಗಿನ ಜಾವ ಆರೋಪಿ ಕಾರ್ತಿಕ್ ಮೈಸೂರಮ್ಮನ ದೊಡ್ಡಿಯಲ್ಲಿ ಅವಿತು ಕುಳಿತಿದ್ದ ಎಂಬ ಖಚಿತ ಮಾಹಿತಿ ಮೇರೆಗೆ ಆರೋಪಿ ಬಂಧನಕ್ಕೆ ಪೊಲೀಸರು ತೆರಳಿದ್ದರು. ಸ್ಥಳಕ್ಕೆ ಹೋಗುತ್ತಿದ್ದಂತೆ ಪೊಲೀಸರನ್ನು ಗಮನಿಸಿದ ಆರೋಪಿ, ಸಿಬ್ಬಂದಿ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆಗೆ ಯತ್ನಿಸಿದ್ದಾರೆ. ಈ ವೇಳೆ ಇನ್ಸ್‌ಪೆಕ್ಟರ್ ತಿಪ್ಪೇಸ್ವಾಮಿಯವರು ಎರಡು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ ಶರಣಾಗುವಂತೆ ಎಚ್ಚರಿಸಿದ್ದಾರೆ. ಪೊಲೀಸರ ಮಾತನ್ನು ಲೆಕ್ಕಿಸದೆ ಆರೋಪಿ ಮತ್ತೆ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ್ದು, ಈ ವೇಳೆ ಆರೋಪಿ ಕಾಲಿಗೆ ಗುಂಡು ಹಾರಿಸಿದ್ದಾರೆ. ಈ ವೇಳೆ ಕುಸಿದುಬಿದ್ದ ಆರೋಪಿಯನ್ನು ಸುತ್ತುವರಿದು ವಶಕ್ಕೆ ಪಡೆದ ಪೊಲೀಸರು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಕಾರ್ಯಾಚರಣೆ ವೇಳೆ ಗಾಯಗೊಂಡಿರುವ ಪೊಲೀಸ್ ಸಿಬ್ಬಂದಿ ಸುರೇಶ್ ಕೂಡ ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಥಳಕ್ಕೆ ಎಸ್ಪಿ ಸಿ.ಕೆ. ಬಾಬಾ, ಡಿವೈಎಸ್ಪಿ ಮೋಹನ್ ಬೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ವಾಹನ ಸವಾರರೇ ಗಮನಿಸಿ : ಇಂದಿನಿಂದ ಹೆದ್ದಾರಿಗಳಲ್ಲಿ 130 ಕಿ.ಮೀ. ವೇಗ ಮೀರಿದರೆ ಕೇಸ್ ಗ್ಯಾರಂಟಿ

• ಉದಯವಾಹಿನಿ, ಬೆಂಗಳೂರು

ವಾಹನ ಚಾಲಕರೇ ಎಚ್ಚರ ರೋಡ್ ಚೆನ್ನಾಗಿದೆ ಎಂದು ವೇಗವಾಗಿ ವಾಹನ ಚಲಾಯಿಸಿದರೆ ಪ್ರಕರಣ ದಾಖಲಾಗುತ್ತೆ. ಮೈಸೂರು, ಬೆಂಗಳೂರು, ಎಕ್ಸ್‌ಪ್ರೆಸ್ ವೇನಲ್ಲಿ ಹೆಚ್ಚಾಗಿ ಅಪಘಾತ ಪ್ರಕರಣಗಳು ಸಂಭವಿಸಿ ಅನೇಕ ಸಾವು-ನೋವುಗಳು ಸಂಭವಿಸಿದ್ದವು. ಎಚ್ಚೆತ್ತ ಹೆದ್ದಾರಿ ಪ್ರಾಧಿಕಾರ ಹಾಗೂ ಸಂಚಾರಿ ಪೊಲೀಸರು ರಸ್ತೆಯಲ್ಲಿ ಎಐ ಕ್ಯಾಮೆರಾ ಅಳವಡಿಸಿದ್ದರಿಂದ ಗಣನೀಯವಾಗಿ ಅಪಘಾತಗಳು ಇಳಿಮುಖವಾಗಿವೆ.

ಕಳೆದ ಕೆಲದಿನಗಳ ಹಿಂದೆ ಅಷ್ಟೇ ನೈಸ್ ರಸ್ತೆಯಲ್ಲಿ ಕಾರೊಂದು ಅತಿ ವೇಗವಾಗಿ ಚಲಾಯಿಸಿ ಅಪಘಾತವಾಗಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದರು.

ಹೀಗಾಗಿ ವೇಗಕ್ಕೆ ಕಡಿವಾಣ ಹಾಕಲು ಇಂದಿನಿಂದ ರಾಜ್ಯಾದ್ಯಂತ ಹೈವೆಗಳಲ್ಲಿ ಗಂಟೆಗೆ 130 ಕಿಲೋ ಮೀಟರ್ ವೇಗಕ್ಕಿಂತ ಹೆಚ್ಚು ವೇಗದಲ್ಲಿ ವಾಹನ ಚಲಾಯಿಸಿದರೆ ಮಾಲೀಕರ ಮೇಲೆ ಪ್ರಕರಣ ದಾಖಲಾಗಲಿದೆ.

ಜೊತೆಗೆ ಎರಡು ಸಾವಿರ ದಂಡ ಮತ್ತು ಗರಿಷ್ಠ ಆರು ತಿಂಗಳು ಜೈಲು ವಿಧಿಸಲಾಗುವುದು. ಜೊತೆಗೆ ಚಾಲನ ಪರವಾನಗಿಯನ್ನು ಕೂಡ ರದ್ದು ಪಡಿಸಲು ಪ್ರಾದೇಶಿಕ ಸಾರಿಗೆ ಕೇಂದ್ರಕ್ಕೆ ಪೊಲೀಸರು ಪತ್ರ ಬರೆಯಲಿದ್ದಾರೆ. ಇಲ್ಲಿಯವರೆಗೂ ನಿಗದಿ ಪಡಿಸಿದ ವೇಗಕ್ಕಿಂತ ಹೆಚ್ಚಿನ ವೇಗದಲ್ಲಿ ವಾಹನ ಚಲಾಯಿಸಿದರೆ ಕೇವಲ ದಂಡ ವಿಧಿಸಲಾಗುತ್ತಿತ್ತು.



ಉದಯವಾಹಿನಿ ಚಿತ್ರ

ಆದರೆ ಇಂದಿನಿಂದ ಹಾಗಾಗುವುದಿಲ್ಲ. ದಂಡದ ಜೊತೆಗೆ ಪ್ರಕರಣವನ್ನು ಸಹ ದಾಖಲಿಸಲಾಗುವುದು ಎಂದು ರಾಜ್ಯ ರಸ್ತೆ ಸುರಕ್ಷತಾ ವಿಭಾಗದ ಎಡಿಜಿಪಿ ಅಲೋಕ್ ಕುಮಾರ್ ಅವರು ಸಾಮಾಜಿಕ ಜಾಲತಾಣ-ಎಕ್ಸ್‌ನಲ್ಲಿ ತಿಳಿಸಿದ್ದಾರೆ.

## ಕೆಎಸ್‌ಎಫ್‌ಸಿ ಆಡಳಿತ ನಿರ್ದೇಶಕರಾಗಿ ಜಿ.ರಘು ಆಚಾರ್ ಆಯ್ಕೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕರಾಗಿ ಜಿ.ರಘು ಆಚಾರ್ ಅವಿರೋಧವಾಗಿ ಚುನಾಯಿತರಾಗಿದ್ದಾರೆ.

ಜಿ.ರಘು ಆಚಾರ್ ಅವರ ನಿರ್ದೇಶಕರ ಅವಧಿಯು ಮೂರು ವರ್ಷಗಳ ಅವಧಿಗೆ ಅಂದರೆ, ಜುಲೈ 18 ರಿಂದ 2027ರ ಜುಲೈ 17ರವರೆಗೆ ಇರುತ್ತದೆ ಎಂದು ಕೆಎಸ್‌ಎಫ್‌ಸಿಯ ವ್ಯವಸ್ಥಾಪಕ ನಿರ್ದೇಶಕ ಡಾ.ರೇಜು.ಎಂ.ಟಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಹಣಕಾಸು ಸಂಸ್ಥೆಗಳ ಕಾಯಿದೆ 1951 (ತಿದ್ದುಪಡಿ ಕಾಯಿದೆ 2000)ರ ಅಧಿನಿಯಮ 10 (ಇ) ಅಡಿಯಲ್ಲಿ ಸಂಸ್ಥೆಯ ಸಾಮಾನ್ಯ ನಿಯಮಾವಳಿ-2002ರ 63ನೇ ನಿಬಂಧನೆಯ ಅನ್ವಯ ರಘು ಆಚಾರ್ ಅವಿರೋಧವಾಗಿ ಚನಾಯಿತರಾಗಿದ್ದಾರೆಂದು ಅವರು ಹೇಳಿದ್ದಾರೆ.

## ಅಂಗಾಂಗ ದಾನ: ಕರ್ನಾಟಕಕ್ಕೆ ದೇಶದಲ್ಲೇ 2ನೇ ಸ್ಥಾನ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಅಂಗಾಂಗ ದಾನ ಮಾಡುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ಅಂಗಾಂಗ ದಾನದಲ್ಲಿ ದೇಶದಲ್ಲಿಯೇ ಕರ್ನಾಟಕ ಎರಡನೇ ಸ್ಥಾನದಲ್ಲಿದೆ. 2023ರಲ್ಲಿ ಅಂಗಾಂಗ ದಾನದಲ್ಲಿ ಕರ್ನಾಟಕ ಎರಡನೇ ಅತ್ಯುತ್ತಮ ರಾಜ್ಯ ಎಂಬ ಹೆಗ್ಗಳಿಕೆ ಪಡೆದಿದ್ದು ಕೇಂದ್ರ ಸರ್ಕಾರ ಈ ಪ್ರಶಸ್ತಿಯನ್ನು ಘೋಷಿಸಿತ್ತು. ರಾಜ್ಯದಲ್ಲಿ 178 ಜನ ಅಂಗಾಂಗ ದಾನ ಮಾಡಿದ್ದಾರೆ. ಅಂಗಾಂಗ ದಾನ ಕಾರ್ಯಕ್ರಮದಲ್ಲಿ ಕರ್ನಾಟಕ ಗಮನಾರ್ಹ ಸಾಧನೆ ಮಾಡಿದೆ. ಭಾರತದ ಎಲ್ಲಾ ಜಿಲ್ಲೆಗಳಲ್ಲಿ ಬಳ್ಳಾರಿ ಜಿಲ್ಲೆ ಅತಿ ಹೆಚ್ಚು ಅಂಗಾಂಗ ದಾನಕ್ಕೆ ವಾಗ್ದಾನ ಮಾಡಿರುವ ಜಿಲ್ಲೆಯಾಗಿದೆ.


ಉದಯವಾಹಿನಿ ಚಿತ್ರ

# ಕೆಇಎ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಆಧುನಿಕ ತಂತ್ರಜ್ಞಾನ ಬಳಕೆ

■ ಪ್ರಾಧಿಕಾರವು ವಿವಿಧ ಕೋರ್ಸ್‌ಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯ ಜೊತೆ ವಿವಿಧ ಇಲಾಖೆಗಳು ಕೋರಿಕೆ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವಿವಿಧ ಕೋರ್ಸ್‌ಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯ ಜೊತೆ ವಿವಿಧ ಇಲಾಖೆಗಳು ಕೋರಿಕೆ ಸಲ್ಲಿಸುವ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕೂಡ ನಡೆಸುತ್ತಿದೆ. ಈ ಪರೀಕ್ಷೆಗಳು ಅತ್ಯಂತ ಪಾರದರ್ಶಕತೆಯಿಂದ ನಡೆಸುವುದು ಪ್ರಾಧಿಕಾರದ ಆದ್ಯ ಕರ್ತವ್ಯವಾಗಿದ್ದು ಈ ಹಿನ್ನೆಲೆಯಲ್ಲಿ ಪ್ರಾಧಿಕಾರ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ (ವೆಬ್ ಕಾಸ್ಟಿಂಗ್) Web Casting ಮೂಲಕ ಆಧುನಿಕ ತಂತ್ರಜ್ಞಾನಗಳೊಂದಿಗೆ AI ಸಿಸಿ ಕ್ಯಾಮೆರಾಗಳನ್ನು ಬಳಕೆ ಮಾಡಲು ನಡೆದ ಆಡಳಿತ ಮಂಡಳಿ ಸಭೆಯಲ್ಲಿ ನಿರ್ಧರಿಸಲಾಯಿತು. ಇದಕ್ಕಾಗಿ 10 ಕೋಟಿ ಮೌಲ್ಯದ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲು ಕ್ರಮ ಕೈಗೊಳ್ಳಲು ನಿರ್ಧರಿಸಲಾಯಿತು.

ಈ ಕುರಿತಂತೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ಹಂಚಿಕೊಂಡಂತ ಉನ್ನತ ಶಿಕ್ಷಣ ಸಚಿವರಾದ ಡಾ. ಎಂಸಿ ಸುಧಾಕರ್ ಅವರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಎಲ್ಲಾ ಪರೀಕ್ಷೆಗಳಲ್ಲಿ ಎಐ ತಂತ್ರಜ್ಞಾನದ ಮೂಲಕ ಅಭ್ಯರ್ಥಿಗಳ ಹಸ್ತ ಮುದ್ರೆ, ಸಂಗ್ರಹ ಹಾಗೂ ಮುಖ ಚಹರೆಯನ್ನು ಗುರುತಿಸುವ ತಂತ್ರಜ್ಞಾನವನ್ನು ಬಳಸಲು ಕೂಡ ಪ್ರಾಧಿಕಾರದ ಸಭೆಯು ಒಪ್ಪಿಗೆ ನೀಡಿತು. ಇದರಿಂದ ಅಭ್ಯರ್ಥಿಗೆ ಹೊರತಾಗಿ ಮತ್ತೊಬ್ಬ ಅಭ್ಯರ್ಥಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗಿ ಬರೆಯುವುದನ್ನು ತಪ್ಪಿಸಲು ಅನುಕೂಲವಾಗಲಿದೆ. ಈ ಸಂಬಂಧಪಟ್ಟಂತೆ 10 ಕೋಟಿ ರೂ ಮೊತ್ತದ ಟೆಂಡರ್ ಆಹ್ವಾನಿಸಲು ಅನುಮೋದನೆ ನೀಡಲಾಯಿತು ಎಂದರು.

ಪದವಿ ಹಾಗೂ ಸ್ನಾತಕೋತ್ತರ ಪದವಿ ಆಧಾರಿತ ಯಾವುದೇ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ 20 ಸಾವಿರಕ್ಕಿಂತ ಕಡಿಮೆ ಅಭ್ಯರ್ಥಿಗಳು ಇದ್ದಲ್ಲಿ ಕಂಪ್ಯೂಟರ್ ಆಧಾರಿತ ಪರೀಕ್ಷೆ ನಡೆಸುವ ನಿರ್ಧಾರಕ್ಕೂ ಸಭೆ ಒಪ್ಪಿಗೆ ನೀಡಿತು ಎಂದು ತಿಳಿಸಿದರು.

ಮುಂದಿನ ಎಲ್ಲಾ ಪರೀಕ್ಷೆಗಳು ಈ ರೀತಿಯ ಅತ್ಯಾಧುನಿಕ ತಂತ್ರಜ್ಞಾನವನ್ನು ಪರೀಕ್ಷಾ ಕೇಂದ್ರಗಳಲ್ಲಿ ಅಳವಡಿಸುವ ಮೂಲಕ ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಿರ್ಧರಿಸಿದೆ ಎಂದರು.



ಉದಯವಾಹಿನಿ ಚಿತ್ರ

**10 ಕೋಟಿ ಮೌಲ್ಯದ ಟೆಂಡರ್ ಪ್ರಕ್ರಿಯೆ**

**ಸಿಇಟಿ ಪ್ರವೇಶ ಪರೀಕ್ಷೆ**

**ಆಗಸ್ಟ್.14 ರಿಂದ ನೀಟ್ ಪ್ರವೇಶ ಪರೀಕ್ಷೆ ಆರಂಭವಾಗಲಿದ್ದು, ತದನಂತರ ರಾಜ್ಯದಲ್ಲಿ ವೈದ್ಯಕೀಯ ಮತ್ತು ತಾಂತ್ರಿಕ ಶಿಕ್ಷಣಕ್ಕೆ ಪ್ರವೇಶ ಪರೀಕ್ಷೆ ಆರಂಭಿಸಲು ನಿರ್ಧರಿಸಲಾಯಿತು.**

**ಇಂದು ನಡೆದ 31ನೇ ಆಡಳಿತ ಮಂಡಳಿ ಸಭೆಯಲ್ಲಿ ಸಹ ಅಧ್ಯಕ್ಷರು ಹಾಗೂ ವೈದ್ಯಕೀಯ ಶಿಕ್ಷಣ ಸಚಿವರಾದ ಶರಣಪ್ರಕಾಶ ಪಾಟೀಲ್, ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕರಾದ ಪ್ರಸನ್ನ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶ್ರೀಕರ್ ವೈದಿಕ ಶಿಕ್ಷಣ ಕಾರ್ಯದರ್ಶಿ ಮೋಹಿನ್ ತಾಂತ್ರಿಕ ಶಿಕ್ಷಣ ಮತ್ತು ಕಾಲೇಜು ಶಿಕ್ಷಣ ಇಲಾಖೆ ಆಯುಕ್ತ ಜಗದೀಶ್ ಇತರ ಅಧಿಕಾರಿಗಳ ಪಾಲ್ಗೊಂಡಿದ್ದರು.**

# ಕಮಲಾ ಹ್ಯಾರಿಸ್ ಭಾರತೀಯರೋ? ಕಪ್ಪು ವರ್ಣೀಯರೋ?

## ಹಿಂದಿನಿಂದಲೂ ಭಾರತೀಯ ಸಂಸ್ಕೃತಿ ಬಿಂಬಿಸುತ್ತಿದ್ದ ಕಮಲಾ ಹ್ಯಾರಿಸ್, ಟ್ರಂಪ್ ಹೇಳಿಕೆಗೆ ಹ್ಯಾರಿಸ್ ಆಕ್ರೋಶ



ಟ್ರಂಪ್ ವಿರುದ್ಧ ಜನಾಂಗೀಯ ನಿಂದನೆ ಆರೋಪ

**ಅಮೆರಿಕ:** ಕಮಲಾ ಹ್ಯಾರಿಸ್ ಅವರು ಕಪ್ಪು ವರ್ಣೀಯರೋ ಅಥವಾ ಭಾರತೀಯ ಮೂಲದವರೋ? ಇದು ಡೊನಾಲ್ಡ್ ಟ್ರಂಪ್ ಪ್ರಶ್ನೆ. ಕೆಲವು ವರ್ಷಗಳ ಹಿಂದೆ ನನಗೆ ಆಕೆ ಕಪ್ಪು ಮಹಿಳೆ ಎಂದು ಗೊತ್ತಿರಲಿಲ್ಲ. ಆದರೆ ಇದೀಗ ಆಕೆ ತಮ್ಮನ್ನು ತಾವು ಕಪ್ಪು ಮಹಿಳೆ ಎಂದು ಗುರ್ತಿಸಿಕೊಳ್ಳಲು ಮುಂದಾಗಿದ್ದಾರೆ ಎಂದು ಹೇಳಿರುವ ಡೊನಾಲ್ಡ್ ಟ್ರಂಪ್, ಆಕೆಯನ್ನು ತಾ ವು ಏಷ್ಯನ್ - ಅಮೆರಿಕನ್ ಎಂದು ಭಾವಿಸಿದ್ದಾಗಿ ತಿಳಿಸಿದರು. ಶಿಕಾಗೋ ನಗರದಲ್ಲಿ ಕಪ್ಪುವ ರ್ಣೀಯ ಪತ್ರಕರ್ತರ ಒಕ್ಕೂಟ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅಮೆರಿಕ ಅ ಧ್ಯಕ್ಷೀಯ ಚುನಾವಣೆಯ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್, ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿ, ಅಮೆರಿಕ ಉಪಾಧ್ಯಕ್ಷೆ ಆಗಿ ರುವ ಕಮಲಾ ಹ್ಯಾರಿಸ್ ಕುರಿತಾಗಿ ಆಡಿರುವ ಮಾತುಗಳು, ವರ್ಣಭೇದ ಧೋರಣೆಯಿಂದ ಕೂಡಿವೆ ಹಾಗೂ ಜನಾಂಗೀಯ ನಿಂದನಾತ್ಮಕವಾಗಿವೆ ಎಂದು ಆಕ್ರೋಶ ವ್ಯಕ್ತವಾಗಿದೆ. ನಾವೆಲ್ಲರೂ ಒಗ್ಗಟ್ಟಾಗಿ ದೇಶವನ್ನು ಮುಂದಕ್ಕೆ ಕೊಂಡೊಯ್ಯಲು ಶ್ರಮಿಸುತ್ತಿದ್ದೇವೆ. ಆದರೆ, ಇಂಥವರು ದೇಶವನ್ನು ಹಿಂದಕ್ಕೆ ಎಳೆಯುತ್ತಿದ್ದಾರೆ. ಅವರ ಅಜೆಂಡಾಗಳನ್ನೇ ಈವು ಗಮನಿಸಿ. ಅದರಲ್ಲೂ ಪ್ರಾಜೆಕ್ಟ್ 2025 ಎಂಬ 900 ಪುಟಗಳ ಈ ಅಜೆಂಡಾ ಅತಿರೇಕವಾದದಿಂದ ಕೂಡಿದೆ ಎಂದು ಕಮಲಾ ಹ್ಯಾರಿಸ್ ಚಾಟಿ ಬೀಸಿದ್ದಾರೆ. ಅಮೆರಿಕ ಜನರಿಗೆ ಟ್ರಂಪ್ ಗಿಂತಲೂ ಉತ್ತಮರು ಬೇಕಿದ್ದಾರೆ.

ಟ್ರಂಪ್ ಅವಧಿಯ ನಾಲ್ಕು ವರ್ಷ, ಈಗಿನ 4 ವರ್ಷಗಳನ್ನು ನೀವೇ ನೆನಪಿಸಿಕೊಂಡು ಊಹಿಸಿಕೊಳ್ಳಿ ಎಂದು ಕಮಲಾ ಹ್ಯಾರಿಸ್ ಚಾಟಿ ಬೀಸಿದ್ದಾರೆ. ಅಮೆರಿಕ ಜನರಿಗೆ ಸತ್ಯ ಹೇಳುವವರು ಬೇಕಿದ್ದಾರೆ. ಯಾವುದೇ ಸಿಟ್ಟು, ಕಿರಿಕಿರಿ ಇಲ್ಲದೆ ಅಸಲಿಯತ್ತನ್ನು ಜನರ ಮುಂದೆ ಇಡುವವರು ಬೇಕಿದ್ದಾರೆ. ನಮ್ಮಲ್ಲಿರುವ ಭಿನ್ನತೆಗಳು ನಮ್ಮನ್ನು ವಿಭಜನೆ ಮಾಡಬಾರದು ಅನ್ನೋದನ್ನ ಅರ್ಥ ಮಾಡಿಕೊಳ್ಳುವ ವ್ಯಕ್ತಿ ಬೇಕಿದೆ. ವೈವಿಧ್ಯತೆಯೇ ನಮ್ಮ ಶಕ್ತಿ ಅನ್ನೋದನ್ನ ಅರ್ಥ ಮಾಡಿಕೊಳ್ಳುವವರು ಬೇಕಿದೆ ಎಂದು ಕಮಲಾ ಹ್ಯಾರಿಸ್ ಹೇಳಿದ್ದಾರೆ. ತಮ್ಮ ರಾಜಕೀಯ ವಿರೋಧಿಗಳ ಕುರಿತಾಗಿ ಜನಾಂಗೀಯ ನಿಂದನಾತ್ಮಕ ಹೇಳಿಕೆಗಳನ್ನ ನೀಡುವ ಟ್ರಂಪ್ ಅವರಿಗೆ ಕಪ್ಪು ವರ್ಣೀಯರು ಏಕೆ ಮತ ನೀಡಬೇಕು ಎಂದು ಕಪ್ಪು ವರ್ಣೀಯ ಪತ್ರಕರ್ತರ ಒಕ್ಕೂಟ ಪ್ರಶ್ನಿಸಿದ ವೇಳೆ ಟ್ರಂಪ್ ಅವರು ಕಮಲಾ ಹ್ಯಾರಿಸ್ ಅವರ ಹಿನ್ನಲೆಯನ್ನು ಕೆದಕಿದ್ದರು.

ಕಮಲಾ ಹ್ಯಾರಿಸ್ ಅವರು ಮೊದಲಿನಿಂದಲೂ ಭಾರತೀಯ ಸಂಸ್ಕೃತಿ, ಪರಂಪರೆ ಬಿಂಬಿಸುತ್ತಿದ್ದರು. ಆದರೆ, ಕೆಲವು ವರ್ಷಗಳ ಹಿಂದಷ್ಟೇ ತಾವು ಕಪ್ಪು ವರ್ಣೀಯರು ಎಂಬಂತೆ ಬಿಂಬಿಸಿಕೊಳ್ಳುತ್ತಿದ್ದಾರೆ. ಹೀಗಾಗಿ ಆಕೆ ಕಪ್ಪು ವರ್ಣೀಯರೋ? ಭಾರತೀಯ ಮೂಲದವರೋ ಅನ್ನೋದು ನನ್ನ ಪ್ರಶ್ನೆ ಎಂದು ಟ್ರಂಪ್ ಕೇಳಿದ್ದರು.

### ಟ್ರಂಪ್‌ಗೆ ಕಮಲಾ ಹ್ಯಾರಿಸ್ ತಿರುಗೇಟು!

**ಕಮಲಾ ಹ್ಯಾರಿಸ್ ಭಾರತೀಯ ಮೂಲದವರೋ? ಕಪ್ಪು ವರ್ಣೀಯರೋ ಅನ್ನೋದೇ ನನಗೆ ಗೊತ್ತಾಗುತ್ತಿಲ್ಲ ಎಂಬ ಟ್ರಂಪ್ ಹೇಳಿಕೆಗೆ ತಿರುಗೇಟು ನೀಡಿರುವ ಕಮಲಾ ಹ್ಯಾರಿಸ್, ಇದು ಮತ್ತದೇ ಹಳೆಯ ರಾಗ ಎಂದು ಕಿಡಿ ಕಾರಿದ್ದಾರೆ. ವಿಭಜನಾತ್ಮಕ ಹಾಗೂ ಅವಹೇಳನಕಾರಿ ಮಾತುಗಳನ್ನಾಡುವ ಈ ವ್ಯಕ್ತಿಗಿಂತಲೂ ಉತ್ತಮರನ್ನು ಅಮೆರಿಕ ದೇಶದ ಪ್ರಜೆಗಳು ಬಯಸುತ್ತಿದ್ದಾರೆ ಎಂದು ಕಮಲಾ ಹ್ಯಾರಿಸ್ ಹೇಳಿದರು.**

**2024ರ ಅಮೆರಿಕ ಅಧ್ಯಕ್ಷೀಯ ಚುನಾವಣಾ ಅಖಾಡದಲ್ಲಿ ರಾಜಕಾರಣಿಗಳು ನೀಡುತ್ತಿರುವ ಹೇಳಿಕೆಗಳು, ಭಾರತದ ಚುನಾವಣೆಗಳನ್ನೇ ಮೀರಿಸುವಂತಿದೆ ಕಮಲಾ ಹ್ಯಾರಿಸ್‌ಗೆ ಮಕ್ಕಳೇ ಆಗಿಲ್ಲ ಅನ್ನೋ ತೀರಾ ವೈಯಕ್ತಿಕ ವಿಚಾರ ಕೆದಕಿದ್ದ ರಿಪಬ್ಲಿಕನ್ ಪಕ್ಷದ ನಾಯಕರು ಇದೀಗ ಆಕೆ ಭಾರತೀಯ ಮೂಲದವರೋ? ಆಫ್ರಿಕಾ ಮೂಲದವರೋ ಎಂದು ಪ್ರಶ್ನೆ ಮಾಡುವ ಮೂಲಕ ಜನಾಂಗೀಯ ನಿಂದನಾತ್ಮಕ ಹಾಗೂ ವರ್ಗಭೇದ ಧೋರಣೆಯ ಮಾತುಗಳನ್ನ ಆಡಿ ಚುನಾವಣಾ ಅಖಾಡದಲ್ಲಿ ಕಿಚ್ಚು ಹೊತ್ತಿಸಿದ್ದಾರೆ.**

## ಲೆಬನಾನ್‌ನಲ್ಲಿರುವ ಭಾರತೀಯರಿಗೆ ಎಚ್ಚರಿಕೆ ನೀಡಿದ ರಾಯಭಾರ ಕಚೇರಿ



**ಬೈರುತ್:** ಲೆಬನಾನ್‌ಗೆ ಅನಿವಾರ್ಯವಲ್ಲದ ಪ್ರಯಾಣ ಬೆಳೆಸದಂತೆ ಭಾರತೀಯ ರಾಯಭಾರ ಕಚೇರಿ ಎಚ್ಚರಿಕೆ ನೀಡಿದೆ.ಈ ಪ್ರದೇಶದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ, ಲೆಬನಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಲೆಬನಾನ್‌ಗೆ ಎಲ್ಲಾ ಅನಿವಾರ್ಯವಲ್ಲದ ಪ್ರಯಾಣವನ್ನು ತಪ್ಪಿಸುವಂತೆ ಭಾರತೀಯರಿಗೆ ಸಲಹೆ ನೀಡಿದೆ. ಹಾಗೂ ಅಲ್ಲಿರುವ ಭಾರತೀಯರು ರಾಯಭಾರ ಕಚೇರಿಯೊಂದಿಗೆ ಸಂಪರ್ಕದಲ್ಲಿರಲು ಅವರಿಗೆ ಸಲಹೆ ನೀಡಲಾಗಿದೆ.

ಲೆಬನಾನ್‌ನಲ್ಲಿರುವ ಭಾರ ತೀಯ ರಾಯಭಾರ ಕಚೇರಿಯು ಎಕ್ಸ್‌ನಲ್ಲಿ ಹೀಗೆ ಹೇಳಿದೆ, ಈ ಪ್ರದೇಶದಲ್ಲಿನ ಇತ್ತೀಚಿನ ಉಲ್ಬಣಗಳ ದಷ್ಟಿಯಿಂದ, ಲೆಬನಾನ್ಗೆ ಎಲ್ಲಾ ಅನಿ ವಾರ್ಯವಲ್ಲದ ಪ್ರಯಾಣವನ್ನು ತಪ್ಪಿಸಲು ಭಾ ರತೀಯ ಪ್ರಜೆಗಳಿಗೆ ಸೂಚಿಸಲಾಗಿದೆ. ಲೆಬ ನಾನ್‌ನಲ್ಲಿರುವ ಎಲ್ಲಾ ಭಾರತೀಯ ಪ್ರಜೆಗಳು ಎ ಚ್ಚರಿಕೆ ವಹಿಸಲು, ತಮ ಚಲನವಲನಗಳನ್ನು ನಿರ್ಬಂಧಿಸಲು ಸೂಚಿಸಲಾಗಿದೆ. ಬೈರುತ್‌ನಲ್ಲಿರುವ ಭಾರತದ ರಾಯಭಾರ ಕಚೇರಿ ಸೂಚಿಸಿದೆ, ತುರ್ತು ದೂರವಾಣಿ ಸಂಖ್ಯೆ 96176860128 ಮೂಲಕ ಸಂಪರ್ಕದಲ್ಲಿರಲು ಕೋರಿದೆ.

ಶುಕ್ರ ಜಿಹಾದ್ ಕೌನ್ಸಿಲ್, ಹೆಜ್ಬೊಲ್ಲಾದ ಉನ್ನತ ಮಿಲಿಟರಿ ಸಂಸ್ಥೆಯಲ್ಲಿ ಕುಳಿತುಕೊಂಡರು ಮತ್ತು ಅದರ ಕಾರ್ಯತಂತ್ರದ ವಿಭಾಗದ ಮುಖ್ಯಸ್ಥರಾಗಿ ಪರಿಗಣಿಸಲ್ಪಟ್ಟಿದ್ದರು. ಅಕ್ಟೋಬರ್ 8 ರಿಂದ ಇಸ್ರೇಲ್ ರಾಜ್ಯದ ಮೇಲೆ ಹಿಜ್ಬುಲ್ಲಾದ ದಾಳಿಯನ್ನು ನಿರ್ದೇಶಿಸಿದ್ದಾರೆ, ಉತ್ತರ ಇಸ್ರೇಲ್‌ನ ಮಜ್ದಲ್ ಶಾಮ್ಸನಲ್ಲಿ 12 ಮಕ್ಕಳ ಹತ್ಯೆಗೆ ಕಾರಣವಾದ ಕಮಾಂಡರ್ ಆಗಿದ್ದರು, ಜೊತೆಗೆ ಹಲವಾರು ಇಸ್ರೇಲಿಗಳು, ವಿದೇಶಿ ಪ್ರಜೆಗಳನ್ನು ಕೊಂದರು.

ಅವರು ನಿಖರವಾದ ನಿರ್ದೇಶಿತ ಕ್ಷಿಪಣಿಗಳು, ಕ್ರೂಸ್ ಕ್ಷಿಪಣಿಗಳು, ದೀರ್ಘ-ಶ್ರೇಣಿಯ ರಾಕೆಟ್‌ಗಳು, ಗಳನ್ನು ಒಳಗೊಂಡಂತೆ ಹೆಚ್ಚಿನ ಅತ್ಯಾಧುನಿಕ ಶಸ್ತ್ರಾಸ್ತ್ರಗಳಿಗೆ ಜವಾಬ್ದಾರರಾಗಿದ್ದರು.

**ಗೋಲನ್ ಹೈಟ್ಸ್‌ನಲ್ಲಿ ರಾಕೆಟ್ ದಾಳಿಯ ನಂ ತರ ಉದ್ವಿಗ್ನತೆ ಮತ್ತಷ್ಟು ಉಲ್ಬಣಗೊಂಡಿದೆ, ಹೆ ಜ್ಬುಲ್ಲಾದಿಂದ ಗುಂಡು ಹಾರಿಸಲಾಯಿತು ಎಂದು ಹೇಳಲಾದ 12 ಮಕ್ಕಳನ್ನು ಕೊಂದಿದೆ. ಗೋಲನ್ ಹೈಟ್ಸನಲ್ಲಿ ನಡೆದ ದಾಳಿಗೆ ಪ್ರತಿಕ್ರಿಯೆಯಾಗಿ, ಇಸ್ರೇಲ್ ರಕ್ಷಣಾ ಪಡೆಗಳು (ಐಡಿಎಫ್) ಮಂಗಳ ವಾರ (ಸ್ಥಳೀಯ ಕಾಲಮಾನ) ದಕ್ಷಿಣ ಲೆಬನಾನ್‌ನಲ್ಲಿ ಇಸ್ರೇಲಿ ದಾಳಿಯಲ್ಲಿ ಉನ್ನತ ಹಿಜ್ಬುಲ್ಲಾ ಕಮಾಂಡರ್ ಫುವಾಡ್ ಶುಕ್ರ ಕೊಲ್ಲಲ್ಪಟ್ಟರು ಎಂದು ಹೇಳಿದರು. ಅತ್ಯಂತ ಹಿರಿಯ ಹಿಜ್ಬುಲ್ಲಾ ಮಿಲಿಟರಿ ಕಮಾಂಡರ್ ಫುವಾದ್ ಶುಕ್ರ ಇಸ್ರೇಲಿ ದಾಳಿಯಲ್ಲಿ ಕೊಲ್ಲಲ್ಪಟ್ಟರು ಎಂದು ಹೇಳಿಕೆಯಲ್ಲಿ ತಿಳಿಸಿದೆ.**

## ಹೊಸ ಸಂಸತ್ ಭವನಕ್ಕೆ ನುಗ್ಗಿದ ನೀರು, ಸಾಮಾಜಿಕ ಜಾಲತಾಣದಲ್ಲಿ ಸಂಚಲನ ಸೃಷ್ಟಿಸಿದ ವಿಡಿಯೋ

**ನವದೆಹಲಿ:** ಹೊಸದಾಗಿ ನಿರ್ಮಿಸಲಾದ ಸಂಸತ್ ಭವನದಲ್ಲಿ ಮಳೆ ನೀರು ನಿಂತಿರುವ ದೃಶ್ಯವೊಂದು ಸಾಮಾಜಿಕ ಜಾಲತಾಣದಲ್ಲಿ ಸಂಚಲನ ಸೃಷ್ಟಿ ಮಾಡಿದೆ. ಸಂಸತ್ ಭವನ ಹಳೆಯದಲ್ಲ, ನಿರ್ಮಾಣ ಮಾಡಿ ಸುಮಾರು ವರ್ಷಗಳು ಕಳೆದಿಲ್ಲ. ಹೀಗಿದ್ದರೂ ಇತ್ತೀಚೆಗಷ್ಟೇ ನಿರ್ಮಾಣಗೊಂಡ ಭವನದಲ್ಲಿ ಮಳೆ ನೀರು ತುಂಬಿರುವುದು ಕಂಡು ಬಂದಿದೆ. ಈ ದೃಶ್ಯವನ್ನು ತ ಮಿಳುನಾಡಿನ ವಿರುದುನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಸಂಸದ ಮಾಣಿಕ್ಕಂ ಠಾಗೋರ್ ಬಿ ಅವರು ತಮ ಎ ಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. 1200 ಕೋಟಿ ಖರ್ಚು ಮಾಡಿ ನಿರ್ಮಿಸಿರುವ ನೂತನ ಸಂಸತ್ ಭವನದಲ್ಲಿ ನೀ ರು ಜಿನುಗುತ್ತಿದ್ದು, ಅದನ್ನು ಸಂಗ್ರಹಿಸಲು ಬಕೆಟ್ ಅನ್ನು ಇಡಲಾಗಿದೆ ಎಂದು ಅವರು ಕಿಡಿಕಾರಿದ್ದಾರೆ.

ಮೋದಿ ಸರ್ಕಾರದಲ್ಲಿ ಹೊರಗೆ ಪೇಪರ್ ಸೋರುತ್ತಿದೆ, ಒಳಗೆ ಮಳೆ ನೀರು ಸೋರುತ್ತಿದೆ ಎಂದು ಅವರು ಬಿಜೆಪಿ ವಿರುದ್ಧ ಆಕೋಶಗೊಂಡು ಬರೆದಿದ್ದಾರೆ. ಹೊಸ ಸಂಸತ್ತಿನ ಮೇಲ್ಛಾವಣಿಯಿಂದ ಜಿನುಗುವ ಮಳೆ ನೀರು ದೃಶ್ಯ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗಿದೆ. ಅಧಿಕಾರಿಗಳ ಹಣದಾಸೆಗೆ ಕಳಪೆ ಕಾಮಗಾರಿಯಿಂದ ನೂತನ ಸಂಸತ್ ಭವನ ಸೋರಿಕೆಯಾಗುತ್ತಿದೆ. ಇದು ನಿಜಕ್ಕೂ ವಿಪರ್ಯಾಸ. ಸಂಸತ್ ಭವನದ ಕತೆ ಹೀಗಾದರೆ ಜನಸಾಮಾನ್ಯರ ಗತಿ ಏನು ಎಂದು ಜನ ಸಾಮಾಜಿಕ ಜಾಲತಾಣದಲ್ಲಿ ಪ್ರಶ್ನೆ ಮಾಡುತ್ತಿದ್ದಾರೆ.

ಈ ನೀರಿನ ಸೋರಿಕೆಯು ಹೊಸ ಕಟ್ಟಡದಲ್ಲಿನ ಮುಂದಿನ ಸಮಸ್ಯೆಗಳನ್ನು ಎತ್ತಿ ತೋರಿಸುತ್ತಿದೆ. ನಿರ್ಮಾಣ ಪೂರ್ಣಗೊಂಡ ಕೇವಲ ಒಂದು ವರ್ಷದ ನಂತರ ಸಂಸತ್ ಭವನ ಮಳೆ ನೀರಿನಿಂದ ತುಂಬಿ ಹೋಗಿದೆ. ಇದರಿಂದಾಗಿ ಲೋಕಸಭೆಯಲ್ಲಿ ಮುಂದೂಡಿಕೆ ನಿರ್ಣಯ ಮಂಡಿಸಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಮೋದಿ ಸರ್ಕಾರ 1200 ಕೋಟಿ ವೆಚ್ಚದಲ್ಲಿ ನಿರ್ಮಿಸಿದ ಹೊಸ ಸಂಸತ್ ಕಟ್ಟಡದಲ್ಲಿ ಭಾರಿ ನೀರು ತುಂಬಿಕೊಂಡಿದೆ. ಕಾರಿನಲ್ಲಿ ಬಂದ ಜನಪ್ರತಿನಿಧಿಗಳು ಛತ್ರಿ ಹಿಡಿದು ಒಳಗಡೆ ಪ್ರವೇಶ ಮಾಡುತ್ತಿರುವ ದೃಶ್ಯ ಸೆರೆಯಾಗಿದೆ. ಅಲ್ಲದೆ ಮಳೆ ನೀರಿನಲ್ಲಿ ನಡೆದುಕೊಂಡು ಹೋಗುವ ಸ್ಥಿತಿ ನೂತನ ಸಂಸತ್ ಭವನದ ಮುಂದೆ ಕಂಡು ಬಂದಿದೆ. ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ಕಿಡಿ ಕಾರಿದೆ.

## ಪೂಜಾ ಖೇಡ್ಕರ್‌ಗೆ ನಿರೀಕ್ಷಣಾ ಜಾಮೀನು ನಿರಾಕರಿಸಿದ ದೆಹಲಿ ನ್ಯಾಯಾಲಯ

**ನವದೆಹಲಿ:** ಸುಳ್ಳು ಮಾಹಿತಿ ನೀಡಿ ಒಬಿಸಿ ಮತ್ತು ಅಂಗವಿಕಲ ವ್ಯಕ್ತಿ ಕೋಟಾ ಪ್ರಯೋಜನಗಳನ್ನು ಪಡೆದ ಆರೋಪ ಎದುರಿಸುತ್ತಿರುವ ಐಎಎಸ್ ಪ್ರೊಬೇಷನರಿ ಮಾಜಿ ಅಧಿಕಾರಿ ಪೂಜಾ ಖೇಡ್ಕರ್ ಅವರಿಗೆ ದೆಹಲಿ ನ್ಯಾಯಾಲಯ ಗುರುವಾರ ನಿರೀಕ್ಷಣಾ ಜಾಮೀನು ನಿರಾಕರಿಸಿದೆ. ಯುಪಿಎಸ್‌ಸಿ ಅಲ್ಲಿರುವ ಯಾರಾದರೂ ಖೇಡ್ಕರ್‌ಗೆ ಸಹಾಯ ಮಾಡಿದ್ದಾರೆಯೇ? ಎಂಬುದರ ಬಗ್ಗೆ ದೆಹಲಿ ಪೊಲೀಸರು ತನಿಖೆ ಮಾಡಬೇಕು ಎಂದು ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ದೇವೆಂದರ್ ಕುಮಾರ್ ಜಂಗಾಲ ಅವರು ಆದೇಶಿಸಿದ್ದಾರೆ.


ಒಬಿಸಿ ಮತ್ತು ಪಿಡಬ್ಲ್ಯೂಡಿ ಕೋಟಾಗಳ ಅಡಿಯಲ್ಲಿ ಅರ್ಹತೆ ಇಲ್ಲದೆ ಇನ್ಯಾರಾದರೂ ಪ್ರಯೋಜನ ಪಡೆದಿದ್ದರೆ, ಆ ಕುರಿತು ತನಿಖೆ ನಡೆಸುವಂತೆಯೂ ದೆಹಲಿ ಪೊಲೀಸರಿಗೆ ನಿರ್ದೇಶನ ನೀಡಿದ್ದಾರೆ. ಸುಳ್ಳು ಮಾಹಿತಿ ನೀಡಿದ ಆರೋಪದ ಮೇಲೆ ಕೇಂದ್ರ ಲೋಕಸೇವಾ ಆಯೋಗ (ಯುಪಿಎಸ್‌ಸಿ) ಪೂಜಾ ಖೇಡ್ಕರ್ ಅವರ ನೇಮಕಾತಿ ಆದೇಶವನ್ನು ರದ್ದುಗೊಳಿಸಿದೆ. ಅದರ ಜೊತೆಗೆ ಭವಿಷ್ಯದ ಎಲ್ಲಾ ಪರೀಕ್ಷೆಗಳು ಮತ್ತು ಆಯ್ಕೆಗಳಿಂದ ಅವರನ್ನು ಡಿಬಾರ್ ಮಾಡಿದೆ.

ಹಿರಿಯ ಅಧಿಕಾರಿಯೊಬ್ಬರ ವಿರುದ್ಧ ಲೈಂಗಿಕ ಶೋಷಣೆಯ ದೂರು ಸಲ್ಲಿಸಿದ್ದಕ್ಕಾಗಿ ನನ್ನನ್ನು ಗುರಿಯಾಗಿಸಲಾಗಿದೆ. ನನ್ನನ್ನು ಬಂಧಿಸುವ ಬೆದರಿಕೆ ಇದೆ. ಹೀಗಾಗಿ ನಿರೀಕ್ಷಣಾ ಜಾಮೀನು ಮಂಜೂರು ಮಾಡಬೇಕು ಎಂದು ಪೂಜಾ ಖೇಡ್ಕರ್ ಅವರು ಸಲ್ಲಿಸಿರುವ ಜಾಮೀನು ಅರ್ಜಿ ಕುರಿತ ಆದೇಶವನ್ನು ಗುರುವಾರ ಪ್ರಕಟಿಸುವುದಾಗಿ ದೆಹಲಿ ನ್ಯಾಯಾಲಯ ಆದೇಶಿಸಿತ್ತು.

ಜಾಮೀನು ಅರ್ಜಿಗೆ ತೀವ್ರ ಆಕ್ಷೇಪಣೆ ವ್ಯಕ್ತಪಡಿಸಿದ್ದ ಪ್ರಾಷಿಕ್ಯೂಷನ್, ಪೂಜಾ ಖೇಡ್ಕರ್ ಒಂದು ಪ್ರಬಲ ವ್ಯವಸ್ಥೆಗೆ ವಂಚನೆ ಮಾಡಿದ್ದಾರೆ. ಹಾಗಾಗಿ ಅವರನ್ನು ಬಂಧಿಸಿ ವಿಚಾರಣೆ ನಡೆಸುವುದು ಸೂಕ್ತವಾಗಿದೆ ಎಂದು ವಾದಿಸಿದ್ದರು. ಅರ್ಜಿದಾರರ ಹಿನ್ನೆಲೆ ಬಲಿಷ್ಠವಾದ್ದು ಅವರಿಗೆ ಜಾಮೀನು ನೀಡಿದರೆ ಈ ಪ್ರಕರಣದ ಸಾಕ್ಷ್ಯಗಳನ್ನು ನಾಶಪಡಿಸಬಹುದು ಎಂದು ಹೇಳಿದ್ದರು.

ಪ್ರತಿವಾದ ಆಲಿಸಿದ ಹೆಚ್ಚುವರಿ ಸೆಷನ್ ನ್ಯಾಯಾಧೀಶ ದೇವೇಂದರ್ ಕುಮಾರ್ ಜಂಗಾಲ ಅವರು, ಆದೇಶವನ್ನು ಬುಧವಾರ ಕಾಯ್ದಿರಿಸಿದ್ದರು.

## ಪರಸ್ಪರ ಕೈ ಹಿಡಿದುಕೊಂಡೇ ಪ್ರಾಣ ಬಿಟ್ಟ ತಾಯಿ-ಮಗ



**ನವದೆಹಲಿ:** ಪರಸ್ಪರ ಕೈ ಹಿಡಿದುಕೊಂಡೇ ತಾಯಿ ಮಗ ಸಾವನ್ನಪ್ಪಿರುವ ಹೃದಯ ವಿದ್ರಾವಕ ಘಟನೆ ದೆಹಲಿಯಲ್ಲಿ ನಡೆದಿದೆ.

ರಾಷ್ಟ್ರ ರಾಜಧಾನಿಯಲ್ಲಿ ಸುರಿದ ಮಳೆಯ ಸಮ ಯದಲ್ಲಿ 23 ವರ್ಷದ ಮಹಿಳೆ ಮತ್ತು ಅವರ ಮೂರು ವರ್ಷದ ಮಗ ಚರಂಡಿಯಲ್ಲಿ ಬಿದ್ದು ಸಾವನ್ನಪ್ಪಿದ್ದಾರೆ. ತನುಜಾ ಬಿಷ್ಟ್ ತನ್ನ ಮೂರು ವರ್ಷದ ಪ್ರಿಯಾಂಶ್‌ನೊಂದಿಗೆ ಗಾಜಿಪುರದ ಮಾರುಕಟ್ಟೆಗೆ ಹೋಗಿ ಮನೆಗೆ ಹಿಂತಿರುಗುತ್ತಿದ್ದಾಗ ಮಳೆಯಿಂದಾಗಿ ರಸ್ತೆ ಜಲಾವತವಾಗಿದ್ದು, ತನುಜಾ ತನ್ನ ಮಗನೊಂದಿಗೆ ತೆರೆದ ಚರಂಡಿಗೆ ಬಿದ್ದು ಕೊಚ್ಚಿಕೊಂಡು ಹೋದರು. ಗಂಟೆಗಳ ನಂತರ, ಎರಡು ಶವಗಳನ್ನು ಸುಮಾರು 500 ಮೀ ದೂರದಲ್ಲಿ ಪಡೆಯಲಾಯಿತು, ಆ ಸಂದರ್ಭದಲ್ಲಿ ತಾಯಿ ಇನ್ನೂ ತನ್ನ ಮಗನ ಕೈಯನ್ನು ಹಿಡಿದಿಕೊಂಡೇ ಜೀವಬಿಟ್ಟಿರುವುದು ಕಂಡುಬಂದಿದೆ.

ರಕ್ಷಣಾ ಕಾರ್ಯಾಚರಣೆ ಚುರುಕಾಗಿದ್ದರೆ ತಾಯಿ, ಮಗನನ್ನು ರಕ್ಷಿಸಬಹುದಿತ್ತು ಎಂದು ಮಹಿಳೆಯ ಕುಟುಂಬಸ್ಥರು ಹೇಳಿದ್ದಾರೆ. ನೋಡಾದ ಖಾಸಗಿ ಸಂಸ್ಥೆಯೊಂದರಲ್ಲಿ ಕೆಲಸ ಮಾಡುತ್ತಿರುವ ಆಕೆಯ ಪತಿ ಗೋವಿಂದ್ ಸಿಂಗ್ ಅವರು ಕೆಲಸದಲ್ಲಿದ್ದಾಗ ದುರಂತ ಸಂಭವಿಸಿದೆ.

ರಕ್ಷಣಾ ಕಾರ್ಯಾಚರಣೆ ಚುರುಕಾಗಿದ್ದರೆ ನನ್ನ ಪತ್ನಿ, ಮಗನನ್ನು ರಕ್ಷಿಸಬಹುದಿತ್ತು, ಪ್ರತಿ ವರ್ಷ ಇಂತಹ ಘಟನೆಗಳು ನಡೆಯುತ್ತಿದ್ದರೂ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತನುಜಾ ಅವರ ಚಿಕ್ಕಪ್ಪ ಹರೀಶ್ ರಾವತ್ ಅವರು ಚರಂಡಿ ತುಂಬಿ ಹರಿಯುತ್ತಿದ್ದು, ಸಮಯಕ್ಕೆ ಸರಿ ಯಾಗಿ ಅದನ್ನು ಗುರುತಿಸಲು ಸಾಧ್ಯವಾಗಲಿಲ್ಲ. ಸಾವಿನಲ್ಲೂ ತನುಜಾ ತನ್ನ ಮಗನ ಕೈಬಿಡಲಿಲ್ಲ ಎಂದು ರಾವತ್ ಹೇಳಿದ್ದಾರೆ.

ಶವ ಪತ್ತೆಯಾ ದಾಗಲೂ ಆಕೆ ಆತನನ್ನು ಹಿಡಿದುಕೊಂಡಿದ್ದಳು ಎಂದು ಅವರು ಹೇಳಿದ್ದಾರೆ.

**ನಮಗೆ ರಾತ್ರಿ 7.30 ರ ಸುಮಾರಿಗೆ ಮಾಹಿತಿ ಸಿಕ್ಕಿತು. ನಾವು 100 ಅನ್ನು ಡಯಲ್ ಮಾಡಿದೆವು, ಪೊಲೀಸರು ರಕ್ಷಣಾ ತಂಡದೊಂದಿಗೆ ಬಂದರು. ಆದರೆ ಅವರ ಬಳಿ ಸರಿಯಾದ ಉಪಕರಣಗಳು ಇರಲಿಲ್ಲ. ಅವರು ಪ್ರಯತ್ನಿಸುತ್ತಲೇ ಇದ್ದರು, ಆದರೆ ಅದು ಕೆಲಸ ಮಾಡ ಲಿಲ್ಲ. ಎರಡು ಗಂಟೆಗಳ ನಂ ತರ ಶವಗಳನ್ನು ಹೊರತೆಗೆಯಲಾಯಿತು ಎಂದಿದ್ದಾರೆ.**

ರಾಷ್ಟ್ರ ರಾಜಧಾನಿಯಲ್ಲಿ ನಾಗರಿಕ ನಿರ್ಲಕ್ಷ್ಯದ ಬಗ್ಗೆ ಭಾರೀ ಆಕ್ರೋಶದ ನಡುವೆ ಚರಂಡಿ ದುರಂತ ಸಂಭವಿಸಿದೆ. ಪ್ರತಿ ಮಳೆಯು ದೆಹಲಿಯನ್ನು ಉಸಿ ರುಗಟ್ಟಿಸುತ್ತದೆ, ಮುಚ್ಚಿದ ಚರಂಡಿಗಳು ಮತ್ತು ಅಕ್ರಮ ನಿರ್ಮಾಣಕ್ಕೆ ಧನ್ಯವಾದಗಳು.

ವಾರದ ಹಿಂದೆ ರಾಜಿಂದರ್ ನಗರದಲ್ಲಿ ನೆಲಮಾಳಿಗೆಯಲ್ಲಿ ನೀರು ನುಗ್ಗಿ ಮೂವರು ಐಎಎಸ್ ಆಕಾಂಕ್ಷಿಗಳು ಮತಪಟ್ಟಿದ್ದರು.

## ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆ



**ನವದೆಹಲಿ:** ಗುರುವಂದಲೇ ಜಾರಿಗೆ ಬರುವಂತೆ ತೈಲ ಮಾರುಕಟ್ಟೆ ಕಂಪನಿಗಳು 19 ಕೆಜಿ ತೂಕದ ವಾಣಿಜ್ಯ ಎಲ್ಪಿಜಿ ಗ್ಯಾಸ್ ಸಿಲಿಂಡರ್ ಬೆಲೆಯನ್ನು 6.5 ರೂ.-8.5 ರೂ. ಹೆಚ್ಚಿಸಿವೆ. ಇದರೊಂದಿಗೆ ವಾಣಿಜ್ಯ ಎಲ್ಪಿಜಿ ಗ್ಯಾಸ್ ಸಿಲಿಂಡರ್ ಬೆಲೆ ಬೆಂಗಳೂರಿನಲ್ಲಿ 1,732.5 ರೂ.ಗೆ ತಲುಪಿದೆ. ಇನ್ನು ದೆಹಲಿಯಲ್ಲಿ ಪರಿಷ್ಕೃತ ದರ 1652.50 ಆಗಿದೆ. ಹಿಂದೆ 1,646 ರೂ. ರೂ. ಆಗಿತ್ತು. ಮುಂಬೈಯಲ್ಲಿಯೂ ಏರಿಕೆಯಾಗಿದ್ದು ಹೊಸ ಬೆಲೆಯನ್ನು 1,605 ರೂ.ಗೆ ನಿಗದಿಪಡಿಸಲಾಗಿದೆ. ಕೋಲ್ಕತ್ತಾದಲ್ಲಿ ದರ ಪರಿಷ್ಕರಣೆಯ ಬಳಿಕ 1,764.50 ರೂ. ಇದೆ.

ಇಂಡಿಯನ್ ಆಯಿಲ್ ಕಾರ್ಪೊರೇಷನ್, ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್, ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್, ಪ್ರತಿ ತಿಂಗಳ 1ನೇ ತಾರೀಕಿನಂದು ಅಡುಗೆ ಅನಿಲ ಬೆಲೆಗಳನ್ನು ಪರಿಷ್ಕರಿಸುತ್ತವೆ.

ಈ ರೀತಿಯ ಏರಿಳಿತಗಳು ಸಾಮಾನ್ಯವಾಗಿ ಇಂಧನ ವೆಚ್ಚಗಳು, ಮಾರುಕಟ್ಟೆ ಡೈನಾಮಿಕ್ಸ್ ಬದಲಾವಣೆಗಳಿಂದ ಪ್ರಭಾವಿತವಾಗಿರುತ್ತವೆ. ತೈಲ ಮಾರುಕಟ್ಟೆ ಕಂಪನಿ ಗಳು ಕೊನೆಯ ಬಾರಿ ಮಾರ್ಚ್ 1ರಂದು ವಾ ಣಿಜ್ಯ ದ್ರವೀಕೃತ ಪೆಟ್ರೋಲಿಯಂ ಅನಿಲ ಸಿಲಿಂಡರ್‌ಗಳ ದರಗಳನ್ನು ಹೆಚ್ಚಿಸಿದ್ದವು. ಆ ಸಮಯದಲ್ಲಿ, ಒಎಂಸಿಗಳು ವಾಣಿಜ್ಯ ದ್ರವೀಕೃತ ಪೆಟ್ರೋಲಿಯಂ ಗ್ಯಾಸ್ ಗ್ಯಾಸ್ ಸಿಲಿಂಡರ್ ಬೆಲೆಗಳಲ್ಲಿ 19 ಕೆಜಿ ವಾಣಿಜ್ಯ ಎಲ್ಪಿಜಿ ಗ್ಯಾಸ್ ಸಿಲಿಂಡರ್‌ಗಳ ಬೆಲೆಗಳನ್ನು 25 ರೂ. ಹೆಚ್ಚಿಸಿದ್ದವು.

**ಗೃಹಬಳಕೆಯ ಸಿಲಿಂಡರ್ ಬೆಲೆ ಯಥಾಸ್ಥಿತಿ :**

ಈ ಮಧ್ಯೆ, ಗೃಹಬಳಕೆಯ ಎಲ್ಪಿಜಿ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಇಳಿಕೆ ಅಥವಾ ಏರಿಕೆ ಆಗಿಲ್ಲ. ಬೆಂಗಳೂರಿನಲ್ಲಿ ಗೃಹಬಳಕೆಯ ಸಿಲಿಂಡರ್ ಬೆಲೆ 805.50 ರೂ. ಇದೆ. ಇನ್ನು ದೆಹಲಿಯಲ್ಲಿ 803 ರೂ., ಕೋಲ್ಕತ್ತಾದಲ್ಲಿ 829 ರೂ., ಮುಂಬೈನಲ್ಲಿ 802.50 ರೂ., ಚೆನ್ನೈನಲ್ಲಿ 818.50 ರೂ. ಇದೆ. ವಿಶೇಷವೆಂದರೆ ಕಳೆದ ವರ್ಷ ಜೂನ್‌ನಲ್ಲಿ ದೆಹಲಿಯಲ್ಲಿ ಗೃಹಬಳಕೆಯ ಎಲ್ಪಿಜಿ ಸಿಲಿಂಡರ್ ಬೆಲೆ 1,103 ರೂ. ಇತ್ತು. ಆಗಸ್ಟ್‌ನಲ್ಲಿ ತೈಲ ಕಂಪನಿಗಳು 200 ರೂ.ಗಳ ಕಡಿತವನ್ನು ಘೋಷಿಸಿ 903 ರೂ.ಗೆ ಇಳಿಸಿದವು. ಬಳಿಕ 2024ರ ಮಾರ್ಚ್‌ನಲ್ಲಿ ಬೆಲೆಯನ್ನು ಮತ್ತೂ 100 ರೂ. ಕಡಿತಗೊಳಿಸಲಾಯಿತು.

### ಸತತ ಇಳಿಕೆಯ ಬಳಿಕ ಏರಿಕೆ

**ಕಳೆದ ಕೆಲವು ತಿಂಗಳಿಂದ ವಾಣಿಜ್ಯ ಎಲ್ಪಿಜಿ ಸಿಲಿಂಡರ್ ಬೆಲೆಯನ್ನು ಕಡಿತಗೊಳಿಸಲಾಗಿತ್ತು. ಆದರೆ ಈ ಬಾರಿ ಬೆಲೆ ಏರಿಕೆಯ ಶಾಕ್ ತಗುಲಿದೆ. ಜುಲೈಯಲ್ಲಿ 30 ರೂ. ಕಡಿತಗೊಂಡಿದ್ದರೆ, ಜೂನ್ 1ರಂದು ವಾಣಿಜ್ಯ ಎಲ್ಪಿಜಿ ಗ್ಯಾಸ್ ಸಿಲಿಂಡರ್ ಬೆಲೆ 69.50 ರೂ. ಕಡಿಮೆ ಆಗಿತ್ತು. ಮೇ 1ರಂದು ದರ ಪರಿಷ್ಕರಿಸಿ 19 ರೂ. ಇಳಿಕೆ ಮಾಡಲಾಗಿತ್ತು. ಏಪ್ರಿಲ್‌ನಲ್ಲಿಯೂ 19 ಕೆಜಿಯ ಸಿಲಿಂಡರ್ ಬೆಲೆಯನ್ನು 30.50 ರೂ. ಇಳಿಸಲಾಗಿತ್ತು.**

## ಸಂಸತ್ ಭವನದೊಳಗೆ ನೀರು ಸೋರಿಕೆ ಸಮಸ್ಯೆ ಪರಿಹರಿಸಲಾಗಿದೆ ಎಂದ ಸಚಿವಾಲಯ




**ನವದೆಹಲಿ:** ಹೊಸದಾಗಿ ನಿರ್ಮಿತವಾದ ಸಂಸತ್ ಭವನದ ಒಳಗೆ ನೀರು ಸೋರುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದಂತೆ ಲೊಕಸಭೆ ಸಚಿವಾಲಯ ಪ್ರತಿಕ್ರಿಯಿಸಿ 'ಸಮಸ್ಯೆ ಪರಿಹರಿಸಲಾಗಿದೆ' ಎಂದಿದೆ.'ಬುಧವಾರ ದೆಹಲಿ ನಗರದಲ್ಲಿ ಭಾರಿ ಮಳೆ ಸುರಿದ ಕಾರಣ ಕಟ್ಟಡದ ಲಾಬಿಯ ಮೇಲೆ ಇರುವ ಗುಮ್ಮಟಗಳಲ್ಲಿ ಗಾಜು ಅಳವಡಿಸುವಾಗ ಬಳಸಲಾದ ಅಂಟುಕದಲಿ ಸಣ್ಣ ಸೋರಿಕೆ ಉಂಟಾಗಿದೆ. ಅಗತ್ಯ ಕ್ರಮಗಳ ಮೂಲಕ ಸರಿಪಡಿಸಲಾಗಿದೆ. ಬಳಿಕ ಯಾವುದೇ ರೀತಿಯಲ್ಲಿ ನೀರಿನ ಸೋರಿಕೆ ಕಾಣಿಸಿಕೊಂಡಿಲ್ಲ. ಸಂಸತ್ ಭವನದ ಮಕರ ದ್ವಾರದ ಎದುರು ಸೋರಿಕೆ ಕಾಣಿಸಿಕೊಂಡಿತ್ತು. ತಕ್ಷಣ ಸರಿಪಡಿಸಿ, ಸ್ಥಳವನ್ನು ಸ್ವಚ್ಛಗೊಳಿಸಲಾಗಿದೆ' ಎಂದು ಲೋಕಸಭಾ ಸಚಿವಾಲಯ ಸ್ಪಷ್ಟನೆ ನೀಡಿದೆ.

ನೈಸರ್ಗಿಕ ಬೆಳಕು ಇರಬೇಕೆಂದು ಹಸಿರು ಸಂಸತ್ತಿನ ಪರಿಕಲ್ಪನೆಯನ್ನು ಗಮನದಲ್ಲಿಟ್ಟುಕೊಂಡು ಹೊಸ ಕಟ್ಟಡದ ಹಲವಾರು ಭಾಗಗಳಲ್ಲಿ ಗಾಜಿನ ಗುಮ್ಮಟಗಳನ್ನು ಅಳವಡಿಸಲಾಗಿದೆ ಎಂದು ಸಚಿವಾಲಯ ಹೇಳಿದೆ.

ಸಂಸತ್ ಭವನದಲ್ಲಿ ಸೋರಿಕೆಯ ಕುರಿತು ವಿಡಿಯೋ ಹಂಚಿಕೊಂಡ ವಿಪಕ್ಷ ನಾಯಕರು ಹೊಸ ಕಟ್ಟಡದಲ್ಲಿ ಹವಾಮಾನ ಸ್ಥಿತಿಸ್ಥಾಪಕತ್ವದ ಬಗ್ಗೆ ಪ್ರಶ್ನಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ವಿಡಿಯೋ ಹಂಚಿ ಕೊಂಡ ಮಾಣಿಕಂ ಟ್ಯಾಗೋರ್, ಹೊರಗಡೆ ಪ್ರಶ್ನೆಪತ್ರಿಕೆ ಸೋರಿಕೆ, ಒಳಗಡೆ ನೀರು ಸೋರಿಕೆ ಎಂದು ಬಿಜೆಪಿಯ ಕಾಲೆಳೆದಿದ್ದಾರೆ.ಇನ್ನೊಂದೆಡೆ ಅಖಿಲೇಶ್ ಯಾದವ್ ಕೂಡ ವಿಡಿಯೊ ಶೇರ್ ಮಾಡಿದ್ದು, 'ಹೊಸ ಸಂಸತ್‌ಗಿಂತ ಹಳೆಯ ಸಂಸತ್ ಭವನವೇ ಉತ್ತಮವಾಗಿತ್ತು. ಅಲ್ಲಿ ಹಳೆಯ ಸಂಸದರು ಕೂಡ ಬಂದು ಭೇಟಿಯಾಗಬಹುದಿತ್ತು. ಬಿಲಿಯನ್ ಗಟ್ಟಲೆ ಖರ್ಚು ಮಾಡಿ ಕಟ್ಟಿದ ಸಂಸತ್‌ನಲ್ಲಿ ಈ ನೀರು ಸೋರುವಿಕೆ ಕಾರ್ಯಕ್ರಮ ನಿಲ್ಲುವವರೆಗೆ ನಾವ್ಯಾಕೆ ಹಳೆಯ ಸಂಸತ್‌ಗೆ ಸ್ಥಳಾಂತರಗೊಳ್ಳಬಾರದು?' ಎಂದು ವ್ಯಂಗ್ಯವಾಡಿದ್ದಾರೆ.

## ಹಮಾಸ್ ಸೇನಾ ಮುಖ್ಯಸ್ಥ ಮೊಹಮ್ಮದ್ ಡೀಫ್ ಏರ್‌ಸ್ಟ್ರೈಕ್‌ಗೆ ಬಲಿ

### ಇದೀಗ ಮೊಹಮ್ಮದ್ ಡೀಫ್ ಸಾವನ್ನು ಖಚಿತಪಡಿಸಿದ ಇಸ್ರೇಲ್ ಭದ್ರತಾ ಪಡೆಗಳು, ಇಸ್ರೇಲ್ ದಾಳಿಯ ಮಾಸ್ಟರ್‌ಮೈಂಡ್ ಹತ್ಯೆ



**ಇಸ್ರೇಲ್:** 2023ರ ಅಕ್ಟೋಬರ್ 7 ರಂದು ಇಸ್ರೇಲ್ ಮೇಲೆ ಭೀಕರ ದಾಳಿ ನಡೆಸಿದ ಹಮಾಸ್ ಸೇನಾ ಪಡೆಯ ಮುಖ್ಯಸ್ಥನನ್ನು ಇಸ್ರೇಲ್ ಕೊನೆಗೂ ಹೊಡೆದುರುಳಿಸಿದೆ. ಇಸ್ರೇಲ್ ಮೇಲೆ ನಡೆದ ದಾಳಿಯ ರೂವಾರಿಯಾಗಿದ್ದ ಮೊಹಮ್ಮದ್ ಡೀಫ್, ಸಮಗ್ರ ತಂತ್ರಗಾರಿಕೆ ರೂಪಿಸಿ ಉಗ್ರರನ್ನು ಇಸ್ರೇಲ್ ಒಳಗೆ ನುಗ್ಗಲು ಪ್ರಚೋದಿಸಿದ್ದ. ಈತನ ಹುಡುಕಾಟದಲ್ಲಿದ್ದ ಇಸ್ರೇಲ್ ಸೇನೆ, ಜುಲೈ 13 ರಂದು ಏರ್ ಸ್ಟ್ರೈಕ್ ನಡೆಸಿತ್ತು. ಅಂದು ನಡೆದ ಏರ್ ಸ್ಟ್ರೈಕ್‌ನಲ್ಲಿ ಮೊಹಮ್ಮದ್ ಡೀಫ್ ಮೃತಪಟ್ಟಿರೋದು ಖಚಿತವಾಗಿದೆ ಎಂದು ಇಸ್ರೇಲ್ ಭದ್ರತಾ ಪಡೆ ಇದೀಗ ಪ್ರಕಟಣೆ ಹೊರಡಿಸಿದೆ.

ಪ್ಯಾಲಸ್ತೀನ್ ಭಾಗವಾದ ಗಾಜಾಪಟ್ಟಿಯ ಖಾನ್ ಯೂನಿಸ್ ನಗರದಲ್ಲಿ ಹಮಾಸ್ ಸೇನಾ ಮುಖ್ಯಸ್ಥ ಮೊಹಮ್ಮದ್ ಡೀಫ್ ಸಂಚರಿಸುತ್ತಿದ್ದಾನೆ ಎಂಬ ಬೇಹುಗಾರಿಕಾ ಖಚಿತ ಮಾಹಿತಿ ಪಡೆದ ಇಸ್ರೇಲ್ ಡಿಫೆನ್ಸ್ ಫೋರ್ಸಸ್, ಜುಲೈ 13 ರಂದು ಆತನ ಮೇಲೆ ಯುದ್ಧ ವಿಮಾನದ ಮೂಲಕ ದಾಳಿ ನಡೆಸಿತ್ತು. ಯುದ್ಧ ವಿಮಾನಗಳು ಆತನ ವಾಹನದ ಮೇಲೆ ಕ್ಷಿಪಣಿ ಉಡಾಯಿಸಿದ್ದವು. ಅಂದು ನಡೆದ ದಾಳಿಯಲ್ಲಿ ಮೃತಪಟ್ಟ ವ್ಯಕ್ತಿ ಮೊಹಮ್ಮದ್ ಡೀಫ್ ಎಂದೇ ಭಾವಿಸಲಾಗಿತ್ತು. ಇದೀಗ ಆತನ ಕಳೇಬರದ ಅವಶೇಷಗಳ ವೈಜ್ಞಾನಿಕ ಪರೀಕ್ಷೆ ಮೂಲಕ ಮೃತಪಟ್ಟ ವ್ಯಕ್ತಿ ಮೊಹಮ್ಮದ್ ಡೀಫ್ ಅನ್ನೋದು ದೃಢಪಟ್ಟಿದೆ. ಈ ಮೂಲಕ ಹಮಾಸ್ ಉಗ್ರರಿಗೆ ಭಾರೀ ಹಿನ್ನಡೆ ಉಂಟಾಗಿದೆ. ಇಸ್ರೇಲ್ - ಹಮಾಸ್ ಯುದ್ಧ ಈಗಾಗಲೇ 300 ದಿನ ಪೂರ್ಣಗೊಳಿಸಿದೆ. 2023ರ ಅಕ್ಟೋಬರ್ 7 ರಂದು ನೆಲ, ಜಲ, ವಾಯು ಮಾರ್ಗವಾಗಿ ಹಮಾಸ್ ಉಗ್ರರು ಇಸ್ರೇಲ್ ನೆಲಕ್ಕೆ ದಾಂಗುಡಿ ಇಟ್ಟಿದ್ದರು. ಜನ ಸಾಮಾನ್ಯರು, ಮಕ್ಕಳು, ಮಹಿಳೆಯರು ಎನ್ನದೇ ಸಾವಿರಾರು ಜನರ ಮೇಲೆ ಗುಂಡಿನ ದಾಳಿ ನಡೆಸಿದ್ದರು. ನವಜಾತ ಶಿಶುಗಳನ್ನ ಬೆಂಕಿ ಇಟ್ಟು ಕೊಂದಿದ್ದರು. ಬಳಿಕ ನೂರಾರು ಜನರನ್ನು ಒತ್ತೆಯಾಳನ್ನಾಗಿ ಮಾಡಿಕೊಂಡು ಗಾಜಾಪಟ್ಟಿಗೆ ಕರೆದೊಯ್ದಿದ್ದರು. ಉಗ್ರರ ದಾಳಿಗೆ ನಡುಗಿ ಹೋದ ಇಸ್ರೇಲ್, ಕೆಲವೇ ಗಂಟೆಗಳಲ್ಲಿ ಸುಧಾರಿಸಿಕೊಂಡು ಪ್ರತಿ ದಾಳಿ ನಡೆಸಿತು. ಈ ದಾಳಿ ಯುದ್ಧದ ಸ್ವರೂಪ ಪಡೆಯಿತು. ಇದೀಗ ಈ ಯುದ್ಧ ನಿಲ್ಲುವ ಲಕ್ಷಣಗಳೇ ಕಾಣುತ್ತಿಲ್ಲ. ಉಗ್ರರನ್ನ ಹುಡುಕಿ ಹುಡುಕಿ ಕೊಲ್ಲುತ್ತಿರುವ ಇಸ್ರೇಲ್ ಸೇನಾ ಪಡೆ, ಹಮಾಸ್ ಸೈನ್ಯದ ಮುಖ್ಯಸ್ಥ ಮೊಹಮ್ಮದ್ ಡೀಫ್ ಮೇಲೆ ಆರಂಭದಿಂದಲೂ ಕಣ್ಣಿಟ್ಟಿತ್ತು. ಹಾಗೆ ನೋಡಿದರೆ ಕಳೆದ ಒಂದು ದಶಕದಿಂದಲೇ ಆತನ ಹುಡುಕಾಟ ನಡೆಸುತ್ತಿತ್ತು. ಇಸ್ರೇಲ್ ಮೇಲೆ ಹತ್ತಾರು ವರ್ಷಗಳ ಹಿಂದೆಯೇ ನಡೆದ ಆತ್ಮಾಹುತಿ ಬಾಂಬ್ ದಾಳಿಗಳಿಗೂ ಮೊಹಮ್ಮದ್ ಡೀಫ್ ಕಾರಣನಾಗಿದ್ದ.

ಮೊಹಮ್ಮದ್ ಡೀಫ್ ಕಳೆದ 30 ವರ್ಷಗಳಿಂದ ಹಮಾಸ್ ಉಗ್ರ ಸಂಘಟನೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ. ಹಂತ ಹಂತವಾಗಿ ಮುಖ್ಯಸ್ಥ ಹುದ್ದೆಗೆ ಭಡ್ತಿ ಪಡೆದಿದ್ದ. ಗಾಜಾಪಟ್ಟಿಯಲ್ಲಿ ಸುರಂಗ ನಿರ್ಮಾಣ, ಬಾಂಬ್ ತಯಾರಿಕೆ ಸೇರಿದಂತೆ ಹಲವು ಮಹತ್ವದ ಜವಾಬ್ದಾರಿಗಳನ್ನು ಈತ ನಿಭಾಯಿಸಿದ್ದ.

### ಹುಡುಕಿ ಹುಳುವನ್ನು ಕೊಲ್ಲುವ ರೀತಿ ಕೊಂದು ಹಾಕಿದೆ ಇಸ್ರೇಲ್

ಹಮಾಸ್ ಉಗ್ರರಿಗೆ ಭಾರೀ ಹಿನ್ನಡೆ

**2023ರ ಅಕ್ಟೋಬರ್ 7 ರಂದು ಹಮಾಸ್ ಉಗ್ರರು ಎಸಗಿದ ಕ್ರೌರ್ಯಕ್ಕೆ ಇಡೀ ವಿಶ್ವವೇ ನಡುಗಿ ಹೋಗಿತ್ತು. ಇಸ್ರೇಲ್ ದೇಶವಂತೂ ಕೆಲವು ಗಂಟೆಗಳ ವರೆಗೂ ಸ್ತಬ್ಧವಾಗಿತ್ತು ಅಷ್ಟು ರಾಕ್ಷಸಿ ಪ್ರವೃತ್ತಿ ತೋರಿದ ಉಗ್ರರ ಕೃತ್ಯಕ್ಕೆ ಮಾಸ್ಟರ್ ಮೈಂಡ್ ಆಗಿದ್ದವನು ಮೊಹಮ್ಮದ್ ಡೀಫ್. ಇದೀಗ ಈತನನ್ನು ಹುಡುಕಿ ಹುಳುವನ್ನು ಕೊಲ್ಲುವ ರೀತಿ ಕೊಂದು ಹಾಕಿದೆ ಇಸ್ರೇಲ್ ಜುಲೈ 13 ರಂದೇ ಏರ್ ಸ್ಟ್ರೈಕ್‌ಗೆ ಬಲಿಯಾಗಿದ್ದ ಮೊಹಮ್ಮದ್ ಡೀಫ್‌ನ ಸಾವನ್ನು ಇದೀಗ ಖಚಿತಪಡಿಸಲಾಗಿದೆ.**

## ಮಿನಿ ನ್ಯೂಸ್

### ಶಿಮ್ಲಾ ಜಿಲ್ಲೆಯಲ್ಲಿ ಮೇಘಸ್ಫೋಟ, 30ಕ್ಕೂ ಹೆಚ್ಚು ಮಂದಿ ನಾಪತ್ತೆ

**ಶಿಮ್ಲಾ:** ರಾಜ್ಯದ ರಾಂಪುರ ಉಪ ವಿಭಾಗದ ಝಖಾರಿ ಪ್ರದೇಶದಲ್ಲಿ ಗುರುವಾರ ಮುಂಜಾನೆ ಮೇಘಸ್ಫೋಟದ ನಂತರ 30 ಕ್ಕೂ ಹೆಚ್ಚು ಜನರು ನಾಪತ್ತೆಯಾಗಿದ್ದಾರೆ. ರಸ್ತೆಗಳು ಕೊಚ್ಚಿಹೋಗಿವೆ ಮತ್ತು ಈ ಪ್ರದೇಶದಲ್ಲಿ ಜಲವಿದ್ಯುತ್ ಯೋಜನೆಗೂ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ಅನುಪಮ್ ಕಶ್ಯಪ್ ತಿಳಿಸಿದ್ದಾರೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಇಂಡೋ ಟಿಬೆಟಿಯನ್ ಬಾರ್ಡರ್ ಪೊಲೀಸರು, ಗೃಹರಕ್ಷಕ ದಳದ ತಂಡಗಳು ರಕ್ಷಣಾ ಕಾರ್ಯಾಚರಣೆ ಆರಂಭಿಸಿವೆ. ನಾಪತ್ತೆಯಾದವರ ಪತ್ತೆಗೆ ಡ್ರೋನ್‌ಗಳನ್ನು ಸಹ ಬಳಸಲಾಗುತ್ತಿದೆ ಎಂದು ಅವರು ಹೇಳಿದರು. ಜನವಸತಿ ಪ್ರದೇಶದ ಹಲವು ಮನೆಗಳ ದಿಡೀರ್ ಪ್ರವಾಹದಿಂದ ಕೊಚ್ಚಿ ಹೋಗಿದೆ.

### ದೇಶದ ಎಲ್ಲಾ ರೈಲು ಮಾರ್ಗಗಳಲ್ಲೂ 'ಕವಚ' ರಕ್ಷೆ: ಅಶ್ವಿನಿ ವೈಷ್ಣವ್

**ನವದೆಹಲಿ:** ರೈಲುಗಳ ಅಪಘಾತ ತಪ್ಪಿಸಲು ಅಭಿವೃದ್ಧಿಪಡಿಸಿರುವ ಸ್ವಯಂಚಾಲಿತ ಸುರಕ್ಷತಾ ವ್ಯವಸ್ಥೆಯಾದ ಕವಚವನ್ನು ದೇಶದ ಎಲ್ಲಾ ರೈಲು ಮಾರ್ಗಗಳಲ್ಲೂ ಅಳವಡಿಸಲು ಸರ್ಕಾರ ಕ್ರಮವಹಿಸಲಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಲೋಕಸಭೆಯಲ್ಲಿ ಗುರುವಾರ ರೈಲ್ವೆ ಇಲಾಖೆಗೆ 7.89 ಲಕ್ಷ ಕೋಟಿ ಮೊತ್ತದ ಅನುದಾನಕ್ಕೆ ಅನುಮೋದನೆ ನೀಡಿದ ಬಳಿಕ ಮಾತನಾಡಿದ ಅವರು, ದೇಶದಲ್ಲಿ 58 ವರ್ಷಗಳ ಕಾಲ ಆಡಳಿತ ನಡೆಸಿದ ಕಾಂಗ್ರೆಸ್ ಒಂದು ಕಿ.ಮೀ.ಗೂ ಸ್ವಯಂ ಚಾಲಿತ ಸುರಕ್ಷತಾ ವ್ಯವಸ್ಥೆ ಅಳವಡಿಸಲಿಲ್ಲ ಎಂದು ದೂರಿದರು. ಪ್ರಯಾಣಿಕರ ಅನುಕೂಲಕ್ಕಾಗಿ ಯಾವುದೇ ಕ್ರಮ ಕೈಗೊಳ್ಳಲಿಲ್ಲ. ರೈಲ್ವೆಯಲ್ಲಿ ಹಲವು ಪ್ರಯೋಗ ಕೈಗೊಂಡರೂ ಯಾವುದೇ ಫಲಪ್ರದವಾಗಲಿಲ್ಲ' ಎಂದರು.

ಎನ್‌ಡಿಎ ಅಧಿಕಾರಕ್ಕೆ ಬಂದ ಬಳಿಕ ಮಾನವರಹಿತ ರೈಲ್ವೆ ಲೆವೆಲ್ ಕ್ರಾಸಿಂಗ್ ವ್ಯವಸ್ಥೆಯನ್ನು ಬದಲಾಯಿಸಲಾಗಿದೆ. ರೈಲ್ವೆ ನಿಲ್ದಾಣಗಳ ನಡುವೆ ಎಲೆಕ್ಟ್ರಾನಿಕ್ ಇಂಟರ್ ಲಿಂಕಿಂಗ್ ವ್ಯವಸ್ಥೆ ಅಳವಡಿಸಲಾಗಿದೆ. ಇದು ರೈಲುಗಳ ಸುಗಮ ಸಂಚಾರಕ್ಕೆ ಸಹಕಾರಿಯಾಗಿದೆ ಎಂದು ತಿಳಿಸಿದರು. ಆದರೆ, ಕವಚ ವ್ಯವಸ್ಥೆ ಅಳವಡಿಕೆ ಸಂಬಂಧ ಸಚಿವರು ಕಾಲಮಿತಿಯ ಬಗ್ಗೆ ಯಾವುದೇ ಮಾಹಿತಿ ನೀಡಲಿಲ್ಲ.

### ರಸ್ತೆ ಅಪಘಾತ ಸಂತ್ರಸ್ತರಿಗೆ ನಗದು ರಹಿತ ಚಿಕಿತ್ಸೆ: ನಿತಿನ್ ಗಡ್ಕರಿ

**ನವದೆಹಲಿ:** ರಸ್ತೆ ಅಪಘಾತಗಳಲ್ಲಿ ಗಾಯಗೊಂಡವರಿಗೆ ನಗದು ರಹಿತ ಚಿಕಿತ್ಸೆ ನೀಡಲು ಸರ್ಕಾರವು ಯೋಜನೆ ರೂಪಿಸಿದ್ದು, ಈಗಾಗಲೇ ಚಂಡೀಗಢ, ಅಸ್ಸಾಂನಲ್ಲಿ ಇದನ್ನು ಪ್ರಾಯೋಗಿಕವಾಗಿ ಜಾರಿ ಗೊಳಿಸಲಾಗಿದೆ ಎಂದು ಕೇಂದ್ರ ರಸ್ತೆ ಸಾರಿಗೆ, ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ. ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ-ಜನಾರೋಗ್ಯ ಯೋಜನೆಯಡಿ ಸೇರ್ಪಡೆಯಾಗಿರುವ ಆಸ್ಪತ್ರೆಗಳಲ್ಲಿ ಗಾಯಾಳುಗಳನ್ನು ಚಿಕಿತ್ಸೆಗೆ ದಾಖಲಿಸಲಾಗುತ್ತದೆ. ಅವಘಡ ಸಂಭವಿಸಿದ ದಿನದಿಂದ ಏಳು ದಿನ ಗಳವರೆಗೆ ಗರಿಷ್ಠ 1.5 ಲಕ್ಷದವರೆಗೆ ಚಿಕಿತ್ಸೆ ನೀಡಲಾಗುತ್ತದೆ ಎಂದು ಅವರು, ಲೋಕಸಭೆಗೆ ನೀಡಿರುವ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಭಾರತೀಯ ಆರೋಗ್ಯ ಪ್ರಾಧಿಕಾರದ ಸಹಭಾಗಿತ್ವದಡಿ ವಾಹನ ಅ ಪಘಾತದಿಂದ ಗಾಯಗೊಂಡವರಿಗೆ ಈ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದ್ದಾರೆ. ಮೋಟರ್ ವಾಹನಗಳ ಕಾಯ್ದೆ 1988ರ ಅಡಿ ರಚಿಸಿರುವ ಮೋಟರ್ ವಾಹನ ಅಪಘಾತ ನಿಧಿಯಡಿ ಚಿಕಿತ್ಸಾ ವೆಚ್ಚ ಭರಿಸಲಾಗುತ್ತದೆ ಎಂದು ಹೇಳಿದ್ದಾರೆ.

### ವಯನಾಡು ಭೂಕುಸಿತ ರಾಷ್ಟ್ರೀಯ ವಿಪತ್ತು ಎಂದ ರಾಹುಲ್ ಗಾಂಧಿ

**ವಯನಾಡು:** ವಯನಾಡುವಿನಲ್ಲಿ ಸಂಭವಿಸಿದ ಭಾರಿ ಭೂಕುಸಿತವನ್ನು ರಾಷ್ಟ್ರೀಯ ವಿಪತ್ತು ಎಂದು ಕರೆದಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ದುರಂತದಲ್ಲಿ ಕುಟುಂಬದ ಸದಸ್ಯರು, ಮನೆಗಳನ್ನು ಕಳೆದುಕೊಂಡಿರುವ ಜನರನ್ನು ಕಂಡು ದುಃಖ ವಾಯಿತು ಎಂದು ಹೇಳಿದರು. ಇಲ್ಲಿನ ಆಸ್ಪತ್ರೆ, ಪರಿಹಾರ ಶಿಬಿ ರಗಳಿಗೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರಾಹುಲ್, ಇದು ವಯನಾಡು, ಕೇರಳ, ರಾಷ್ಟ್ರದಲ್ಲೇ ಭೀಕರ ದುರಂತವಾಗಿದೆ ಎಂದು ಹೇಳಿದರು. ನನ್ನ ಪ್ರಕಾರ ಇದೊಂದು ರಾಷ್ಟ್ರೀಯ ವಿಪತ್ತು. ಆದರೆ ಕೇಂದ್ರ ಸರ್ಕಾರ ಏ ನು ಹೇಳುತ್ತದೋ ನೋಡಬೇಕಿದೆ' ಎಂದರು.

ಇಲ್ಲಿನ ಪರಿಸ್ಥಿತಿಯ ಬಗ್ಗೆ ತಿಳಿದುಕೊಳ್ಳಲು ನಾವು ಇಲ್ಲಿಗೆ ಬಂದಿದ್ದೇವೆ. ಮನೆ, ಕುಟುಂಬದವರನ್ನು ಕಳೆದುಕೊಂಡು ದುಃಖಿಸುತ್ತಿರುವ ಜನರನ್ನು ಕಂಡು ಬಹಳ ನೋವಾಗಿದೆ. ಇಂತಹ ಸಂದರ್ಭದಲ್ಲಿ ಅವರೊಂದಿಗೆ ಮಾತನಾಡುವುದಕ್ಕೂ ತುಂಬಾ ಕಷ್ಟವಾಗುತ್ತಿದೆ ಎಂದು ಹೇಳಿದರು. ಇದು ನನ್ನ ಜೀವನದಲ್ಲೇ ಅತ್ಯಂತ ಕಷ್ಟಕರ ದಿನವಾಗಿದೆ. ಆದರೂ ಸಂತ್ರಸ್ತರಿಗೆ ಸಿಗಬೇಕಾಗಿರುವುದನ್ನು ಕೊಡಿಸುವತ್ತ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು. ಇದೇ ವೇಳೆ ಮಾತನಾಡಿದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ, ಸಂತ್ರಸ್ತರಿಗೆ ಸಹಾಯ ಮಾಡಲು, ಅವರಿಗೆ ಬೇಕಾದ ಬೆಂಬಲ, ಸಾಂತ್ವಾನವನ್ನು ನೀಡಲು ನಾವು ಇಲ್ಲಿಗೆ ಬಂದಿದ್ದೇವೆ ಎಂದರು.

### ಸಂತ್ರಸ್ತರ ನೆರವಿಗೆ ವಯನಾಡಿಗೆ ಟಿಎಂಸಿಯ ಇಬ್ಬರು ಸಂಸದರು

**ಕೋಲ್ಕತ್ತ:** ಕೇರಳದ ವಯನಾಡಿನಲ್ಲಿ ಸಂಭವಿಸಿರುವ ಭೂಕುಸಿತಕ್ಕೆ ಸಂತಾಪ ಸೂಚಿಸಿರುವ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಇದೊಂದು ಭೀಕರ ದುರಂತ ಎಂದು ಹೇಳಿದ್ದಾರೆ. ಅಲ್ಲದೆ, ಮೃತರ ಕುಟುಂಬಗಳಿಗೆ ನೆರವಾಗಲು, ರಕ್ಷಣಾ ಕಾರ್ಯಕ್ಕೆ ಬೆಂಬಲ ನೀಡಲು ತೃಣಮೂಲ ಕಾಂಗ್ರೆಸ್‌ನ ಇಬ್ಬರು ಸಂಸದರನ್ನು ವಯನಾಡಿಗೆ ಕಳುಹಿಸುವುದಾಗಿ ಹೇಳಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಬರೆದುಕೊಂಡಿರುವ ಮಮತಾ, ಮಾನವೀಯತೆ ದೃಷ್ಟಿಯಿಂದ ನೆರವಿಗಾಗಿ ಸಾಕೇತ್ ಗೋಖಲೆ, ಸುಶ್ಮಿತಾ ದೇವ್ ಅವರು ಕೇರಳಕ್ಕೆ ಪ್ರಯಾಣ ಬೆಳೆಸಲಿದ್ದಾರೆ. ಅವರು ಅಲ್ಲಿಯೇ ಎರಡು ದಿನ ಉಳಿದುಕೊಳ್ಳಲಿದ್ದಾರೆ. ಈ ವೇಳೆ ಸಂತ್ರಸ್ತ ಕುಟುಂಬಗಳಿಗೆ ಸಹಾಯ ಮಾಡಲಿದ್ದಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

### ಸಿಡಿಲು ಬಡಿದು ಐವರು ಸಾವು

**ಪಟ್ನಾ:** ಬಿಹಾರದಲ್ಲಿ ಕಳೆದ 24 ಗಂಟೆಗಳಲ್ಲಿ ಸಿಡಿಲು ಬಡಿದು ಐವರು ಮೃತಪಟ್ಟಿದ್ದಾರೆ ಎಂದು ಅಧಿಕೃತ ಪ್ರಕಟಣೆ ಗುರುವಾರ ತಿಳಿಸಿದೆ. ಜೆಹಾನಾಬಾದ್ ಜಿಲ್ಲೆಯಲ್ಲಿ ಮೂವರು, ರೋಹ್ತಾಸ್ ಜಿಲ್ಲೆಯಲ್ಲಿ ಇಬ್ಬರು ಸಾವಿಗೀಡಾಗಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಸಂತಾಪ ವ್ಯಕ್ತಪಡಿಸಿದ್ದು, ಮೃತರ ಕುಟುಂಬಕ್ಕೆ ತಲಾ 4 ಲಕ್ಷ ಪರಿಹಾರ ಘೋಷಿಸಿದ್ದಾರೆ. ವಿಪತ್ತು ನಿರ್ವಹಣಾ ಇಲಾಖೆ ನೀಡಿರುವ ಸಲಹೆಗಳನ್ನು ಪಾಲಿಸುವಂತೆಯೂ ಅವರು ರಾಜ್ಯದ ಜನತೆಗೆ ಮನವಿ ಮಾಡಿದ್ದಾರೆ.

# ಬೆಡ್‌ರೂಮ್ ಫೋಟೋ ಹಂಚಿಕೊಂಡ ನಮ್ರತಾ ಗೌಡ

'ಬಿಗ್ ಬಾಸ್' ಖ್ಯಾತಿಯ ನಮ್ರತಾ ಗೌಡ ಇದೀಗ ಬೆಡ್‌ರೂಮ್ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಸಖತ್ ಹಾಟ್ ಆಗಿ ಕಾಣಿಸಿಕೊಂಡಿರುವ ನಮ್ರತಾ ಫೋಟೋಗೆ ನೆಟ್ಟಿಗರಿಂದ ಬಗೆ ಬಗೆಯ ಕಾಮೆಂಟ್‌ಗಳು ಬಂದಿದೆ. ಸದಾ ಒಂದಲ್ಲಾ ಒಂದು ಫೋಟೋಗಳ ಮೂಲಕ ನಮ್ರತಾ ಸದ್ದು ಮಾಡುತ್ತಲೇ ಇರುತ್ತಾರೆ. ಮತ್ತೆ ನಯಾ ಫೋಟೋಶೂಟ್ ಮಾಡಿಸಿ ಗಂಡ್ ಹೈಕ್ಳ ಹಾರ್ಟ್‌ನಲ್ಲಿ ಚಿಟ್ಟೆ ಬಿಟ್ಟಿದ್ದಾರೆ. ರೆಡ್ ಕಲರ್ ಲಾಂಗ್ ಡ್ರೆಸ್‌ನಲ್ಲಿ ನಟಿ ಸಖತ್ ಹಾಟ್ ಆಗಿ ಕಾಣಿಸಿಕೊಂಡಿದ್ದು, ಬೆಡ್ ಮೇಲೆ ಮಲಗಿ ಸೆಕ್ಸಿ ಆಗಿ ಪೋಸ್ ಕೊಟ್ಟಿದ್ದಾರೆ. ವಿವಿಧ ಭಂಗಿಯಲ್ಲಿ ನಟಿ ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ.

ನಮ್ರತಾ ನಯಾ ಫೋಟೋ ನೋಡ್ತಿದ್ದಂತೆ ಪಡ್ಡೆಹುಡುಗರಿಂದ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬಂದಿದೆ. ಬ್ಯೂಟಿಫುಲ್, ಸೆಕ್ಸಿ, ಬೋಲ್ಡ್ ಹೀಗೆ ಕಾಮೆಂಟ್ ಮಾಡುವ ಮೂಲಕ ಮೆಚ್ಚುಗೆ ಸೂಚಿಸಿದ್ದಾರೆ. ಇನ್ನೂ ನಿಮಗೆ ಬಾಯ್‌ಫ್ರೆಂಡ್ ಇದ್ದಾರಾ ಎಂದು ಕೇಳಿದ್ದಾರೆ. 'ಬಿಗ್ ಬಾಸ್ ಕನ್ನಡ ಸೀಸನ್ 10'ರಲ್ಲಿ ಸಂಚಲನ ಮೂಡಿಸಿದ ನಮ್ರತಾ ಗೌಡ ಅವರ ಹೆಸರು ಸ್ನೇಹಿತ್ ಗೌಡ ಮತ್ತು ಕಾರ್ತಿಕ್ ಮಹೇಶ್ ಜೊತೆ ಕೇಳಿ ಬಂದಿತ್ತು. ಆದರೆ ಕೆಲ ಮನಸ್ತಾಪಗಳಿಂದ ಸ್ನೇಹಿತ್ ಜೊತೆಗಿನ ಸ್ನೇಹಕ್ಕೆ ನಟಿ ಅಂತ್ಯ ಹಾಡಿದ್ದರು. ಅಂದಹಾಗೆ, ಪುಟ್ಟಗೌರಿ ಮದುವೆ, ನಾಗಿಣಿ 2 ಸೀರಿಯಲ್ ನಮ್ರತಾಗೆ ಜನಪ್ರಿಯತೆ ನೀಡಿತ್ತು. ಅದರಲ್ಲೂ 'ನಾಗಿಣಿ 2' ಅವರ ವೃತ್ತಿರಂಗದಲ್ಲಿ ಬಿಗ್ ಬ್ರೇಕ್ ಕೊಟ್ಟಿದೆ. ಬಾಲನಟಿಯಾಗಿ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. 20ಕ್ಕೂ ಹೆಚ್ಚು ವರ್ಷಗಳಿಂದ ನಟನೆಯಲ್ಲಿ ನಮ್ರತಾ ಆಕ್ಟೀವ್ ಆಗಿದ್ದಾರೆ. ಇದೀಗ ಪೂರ್ಣ ಪ್ರಮಾಣದ ನಾಯಕಿಯಾಗಿ ಸಿನಿಮಾದಲ್ಲಿ ಮಿಂಚಲು ನಮ್ರತಾ ಸಿದ್ಧತೆ ನಡೆಸುತ್ತಿದ್ದಾರೆ.



ಸಿನಿ ವಾಹಿನಿ

# ಭವಿಷ್ಯದಲ್ಲಿ ಕಾಸ್ಮೆಟಿಕ್ ಸರ್ಜರಿ ಮಾಡಿಸುತ್ತೇನೆ

**ನಾನು ಕಾಸ್ಮೆಟಿಕ್ ಸರ್ಜರಿ ಮಾಡುವವರನ್ನು ದೂಷಿಸುವುದಿಲ್ಲ. ಇದರಿಂದ ನಮ್ಮ ಆತ್ಮವಿಶ್ವಾಸ ಹೆಚ್ಚುತ್ತದೆ.**



ಚಿತ್ರರಂಗದಲ್ಲಿ ನಟ-ನಟಿಯರು ಸುಂದರವಾಗಿ ಕಾಣಲು ಕಾಸ್ಮೆಟಿಕ್ ಸರ್ಜರಿ ಮೊರೆ ಹೋಗುತ್ತಾರೆ. ಇದೀಗ ಕಾಸ್ಮೆಟಿಕ್ ಸರ್ಜರಿ ಮಾಡಿಸೋದು ತಪ್ಪಲ್ಲ ಎಂದು ಬಾಲಿವುಡ್ ನಟಿ ರಾಧಿಕಾ ಮದನ್ ನೀಡಿರುವ ಹೇಳಿಕೆ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಕಲಾವಿದರು ಸಹಜ ಸೌಂದರ್ಯಕ್ಕೆ ಒತ್ತು ಕೊಡಲ್ಲ. ಕಾಸ್ಮೆಟಿಕ್ ಸರ್ಜರಿ ಮೊರೆ ಹೋಗುತ್ತಾರೆ ಎಂಬ ವಿಚಾರ ಆಗಾಗ ಕೇಳಿ ಬರುತ್ತಲೇ ಇರುತ್ತದೆ. ಈ ಕುರಿತು ಸಂದರ್ಶನವೊಂದರಲ್ಲಿ ನಟಿ ರಾಧಿಕಾ ಮಾತನಾಡಿ, ನಾನು ಕಾಸ್ಮೆಟಿಕ್ ಸರ್ಜರಿ ಮಾಡುವವರನ್ನು ದೂಷಿಸುವುದಿಲ್ಲ. ಇದರಿಂದ ನಮ್ಮ ಆತ್ಮವಿಶ್ವಾಸ ಹೆಚ್ಚುತ್ತದೆ. ನಾನು ಈ ಬಗ್ಗೆ ಮುಂದಿನ ದಿನಗಳಲ್ಲಿ ಯೋಚಿಸುತ್ತೇನೆ. ಮುಂದೆ ಎದುರಾಗುವ ಸಂದರ್ಭದ ಮೇಲೆ ನಿರ್ಧಾರ ತೆಗೆದುಕೊಳ್ಳುತ್ತೇನೆ ಎಂದು ಮಾತನಾಡಿದ್ದಾರೆ.

ನನ್ನ ದೃಷ್ಟಿಯಲ್ಲಿ ಕಾಸ್ಮೆಟಿಕ್ ಸರ್ಜರಿ ಮಾಡಿಸೋದು ತಪ್ಪಲ್ಲ ಎಂದು ರಾಧಿಕಾ ಮದನ್ ಮಾತನಾಡಿದ್ದಾರೆ. ಅವರ ಹೇಳಿಕೆ ಈಗ ಸೋಷಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ. ನೆಟ್ಟಿಗರ ಪರ ಮತ್ತು ವಿರೋಧದ ಚರ್ಚೆ ಶುರುವಾಗಿದೆ. ಅಂದಹಾಗೆ, ಅಕ್ಷಯ್ ಕುಮಾರ್ ಜೊತೆ 'ಸರ್ಫಿರಾ' ಎಂಬ ಸಿನಿಮಾದಲ್ಲಿ ನಾಯಕಿಯಾಗಿ ರಾಧಿಕಾ ಮದನ್ ನಟಿಸಿದ್ದರು. ಅವರ ನಟನೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

# ಕಣ್ಣಪ್ಪ ಚಿತ್ರದಲ್ಲಿ ಮಧುಬಾಲ



ಪಾತ್ರವರ್ಗದ ವಿಚಾರವಾಗಿಯೇ ಸಾಕಷ್ಟು ಸದ್ದು ಮಾಡುತ್ತಿದೆ ಟಾಲಿವುಡ್‌ನ 'ಕಣ್ಣಪ್ಪ' ಸಿನಿಮಾ. ಈಗಾಗಲೇ ಸರಣಿ ಸ್ಟಾರ್ ಕಲಾವಿದರನ್ನೇ ಒಳಗೊಂಡಿರುವ ಕಣ್ಣಪ್ಪ ಸಿನಿಮಾ ಸದ್ಯ ಶೂಟಿಂಗ್ ಜೊತೆಗೆ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನೂ ಮುಂದುವರಿಸಿದೆ. ಜೊತೆಗೆ ಈಗಾಗಲೇ ಬಿಡುಗಡೆ ಆಗಿರುವ ಟೀಸರ್ ಸಹ ನೋಡುಗರ ಹುಬ್ಬೇರಿಸಿದೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ ನಿರ್ಮಾಣವಾಗುತ್ತಿರುವ ಈ ಸಿನಿಮಾದಲ್ಲಿ ವಿಷ್ಣು ಮಂಚು ಕಣ್ಣಪ್ಪನಾಗಿ ತಮ್ಮ ಖದರ್ ತೋರಿಸಲಿದ್ದಾರೆ. ಇದೀಗ ಇದೇ ಸಿನಿಮಾದಲ್ಲಿ ನಟಿಸುತ್ತಿರುವ ನಟಿ ಮಧುಬಾಲ ಅವರ ಲುಕ್ ಅನಾವರಣ ಮಾಡಲಾಗಿದೆ. ನಟಿ ಮಧುಬಾಲಾ ಕಣ್ಣಪ್ಪ ಸಿನಿಮಾದಲ್ಲಿ ನಟಿಸಿದ್ದಾರೆ ಎಂಬುದು ಈ ಹಿಂದೆಯೇ ಗೊತ್ತಿದ್ದ ವಿಚಾರ. ಆದರೆ, ಅವರ ಪಾತ್ರ ಹೇಗಿರಲಿದೆ ಎಂಬ ಬಗ್ಗೆ ಈ ವರೆಗೂ ಚಿತ್ರತಂಡ ಸುಳಿವು ಬಿಟ್ಟುಕೊಟ್ಟಿರಲಿಲ್ಲ. ಇದೀಗ ಮಧುಬಾಲ ಅವರ ಪಾತ್ರ ಪರಿಚಯದ ಫಸ್ಟ್ ಲುಕ್ ರಿಲೀಸ್ ಆಗಿದೆ. ಕಣ್ಣಪ್ಪ ಚಿತ್ರದಲ್ಲಿ ಪನ್ನಗ ಹೆಸರಿನ ಖಡಕ್ ಪಾತ್ರದಲ್ಲಿ ಮಧುಬಾಲ ಮಿಂಚು ಹರಿಸಲಿದ್ದಾರೆ. ಕೈಯಲ್ಲಿ ಕತ್ತಿ ಹಿಡಿದು ಶತ್ರುಗಳ ಸಂಹಾರಕ್ಕೆ ನಿಂತಂತಿದೆ ಮಧುಬಾಲಾ ಅವರ ಫಸ್ಟ್ ಲುಕ್.

ಬೇಡ ಕುಲದ ನಾಯಕಿಯಾಗಿ ಮಧುಬಾಲಾ ಅವರ ಪಾತ್ರ ಕಣ್ಣಪ್ಪ ಚಿತ್ರದಲ್ಲಿ ಸಾಗಲಿದೆ. ತಮ್ಮ ಸಮುದಾಯದ ನಾಯಕಿ ಮಾತ್ರವಲ್ಲ, ಹೋರಾಟದಲ್ಲಿಯೂ ದಿಟ್ಟೆ, ಧೀರೆ. ಅಂದುಕೊಂಡಂತೆ ಮಧುಬಾಲ ಅವರ ಪಾತ್ರ ಮೂಡಿಬಂದಿದ್ದು, ನೋಡುಗರಿಗೆ ಇಷ್ಟವಾಗಲಿದೆ ಎಂಬುದು ಚಿತ್ರತಂಡ ಭರವಸೆಯ ಮಾತುಗಳು. ಇನ್ನು ಈಗಾಗಲೇ ಕಣ್ಣಪ್ಪ ಚಿತ್ರದ ಟೀಸರ್ ಜಾಗತಿಕ ಮಟ್ಟದಲ್ಲಿಯೂ ಕ್ರೇಜ್ ಸೃಷ್ಟಿಸಿದೆ. ಇತ್ತೀಚಿನ ಕಾನ್ ಸಿನಿಮೋತ್ಸವದಲ್ಲಿ ಈ ಚಿತ್ರದ ಟೀಸರ್ ಬಿಡುಗಡೆಯಾಗಿ, ಜಾಗತಿಕ ಪ್ರೇಕ್ಷಕರ ಗಮನ ಸೆಳೆದಿತ್ತು. ಕಣ್ಣಪ್ಪ ಸಿನಿಮಾ ಬರೀ ಇತಿಹಾಸವಲ್ಲ, ಇದು ಎರಡನೇ ಶತಮಾನದ ಚೋಳರ ಕಾಲದ ಕಥೆ ಎಂದು ಶಂಕರಾಚಾರ್ಯರು ಹೇಳಿದ್ದರು.

# 4ನೇ ಬಾರಿ ಮದುವೆಗೆ ವನಿತಾ ರೆಡಿ...



'ಬಿಗ್ ಬಾಸ್' ಖ್ಯಾತಿಯ ವನಿತಾ ವಿಜಯ್‌ಕುಮಾರ್ ಸಿನಿಮಾಗಿಂತ ವೈಯಕ್ತಿಕ ಜೀವನದ ವಿಷ್ಯವಾಗಿ ಹೆಚ್ಚು ಸುದ್ದಿಯಾಗುತ್ತಲೇ ಇರುತ್ತಾರೆ. ಈಗಾಗಲೇ 3 ಬಾರಿ ಮದುವೆಯಾಗಿ ದಾಂಪತ್ಯ ಜೀವನಕ್ಕೆ ಅಂತ್ಯ ಹಾಡಿರುವ ನಟಿ 4ನೇ ಬಾರಿ ಹಸೆಮಣೆ ಏರಲು ಸಜ್ಜಾಗಿದ್ದಾರೆ ಎಂಬ ಸುದ್ದಿ ಸೋಷಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ತಮಿಳು ನಟಿ ವನಿತಾ ವಿಜಯ್ ಕುಮಾರ್ ಅವರದ್ದು ಕಲಾವಿದರ ಕುಟುಂಬ. ಸಿನಿಮಾಗಳ ಮೂಲಕ ಖ್ಯಾತಿ ಪಡೆದಿರೋದಕ್ಕಿಂತ ವಿವಾದಗಳ ಮೂಲಕ ಸದ್ದು ಮಾಡಿದ್ದೇ ಜಾಸ್ತಿ. ಮತ್ತೆ ಈಗ 4ನೇ ಬಾರಿ ವೈವಾಹಿಕ ಬದುಕಿಗೆ ಕಾಲಿಡಲು ರೆಡಿಯಾಗಿದ್ದಾರೆ ಎನ್ನಲಾಗಿದೆ. ಹಾಗಾದ್ರೆ ವರ ಯಾರು ಎಂದು ಅಭಿಮಾನಿಗಳಲ್ಲಿ ಕುತೂಹಲ ಮೂಡಿದೆ. ಸೋಷಿಯಲ್ ಮೀಡಿಯಾದಲ್ಲಿ ಅಭಿಮಾನಿಗಳ ಪ್ರಶ್ನೆಗಳಿಗೆ ನಟಿ ರಿಯಾಕ್ಟ್ ಮಾಡಿದ್ದಾರೆ. ಮದುವೆ ಬಗ್ಗೆ ಅಭಿಮಾನಿಯೊಬ್ಬ ಕೇಳಲಾದ ಪ್ರಶ್ನೆಗೆ 'ಒಂದು ಅನಿರೀಕ್ಷಿತ ತಿರುವಿಗಾಗಿ ಕಾಯಿರಿ' ಎಂದು ವನಿತಾ ಉತ್ತರಿಸಿದ್ದಾರೆ. ಇದು ಮದುವೆ ಸುದ್ದಿಗೆ ಮತ್ತಷ್ಟು ಪುಷ್ಠಿ ನೀಡಿದೆ. ಹಾಗಾದ್ರೆ ನಟಿ ಸದ್ಯದಲ್ಲೇ ಗುಡ್ ನ್ಯೂಸ್ ಕೊಡುತ್ತಾರಾ ಕಾಯಬೇಕಿದೆ. ಅಂದಹಾಗೆ, ವನಿತಾ ಅವರು 2000ರಲ್ಲಿ ಆಕಾಶ್ ಎಂಬುವವರ ಜೊತೆಗೆ ದಾಂಪತ್ಯ ಬದುಕಿಗೆ ಕಾಲಿಟ್ಟರು. ಆದರೆ 2005ರಲ್ಲಿ ಡಿವೋರ್ಸ್ ಪಡೆದು ಆಕಾಶ್ ಅವರಿಂದ ದೂರವಾದರು. ನಂತರ 2007ರಲ್ಲಿ ಉದ್ಯಮಿ ರಂಜನ್ ಆನಂದ್ ಎಂಬುವವರ ಜೊತೆಗೆ ವನಿತಾ ಎರಡನೇ ಮದುವೆಯಾದರು. ಆದರೆ 2012ರಲ್ಲಿ ಅವರೊಂದಿಗೂ ಹೊಂದಾಣಿಕೆ ಕೊರತೆಯಿಂದ ದಾಂಪತ್ಯಕ್ಕೆ ಕೊನೆ ಹಾಡಿದರು. ಬಳಿಕ 2020ರಲ್ಲಿ ಫೋಟೋಗ್ರಾಫರ್ ಪೀಟರ್ ಪೌಲ್ ಜೊತೆಗಿನ ಮದುವೆ ಕೂಡ ಮುರಿದುಬಿತ್ತು.

# ಕಿರುತೆರೆಗೆ ಎಂಟ್ರಿ ಕೊಟ್ಟ ರಶ್ಮಿಕಾ

## ಶ್ರೀವಲ್ಲಿಗೆ ಫ್ಯಾನ್ಸ್‌ಗೆ ಗುಡ್‌ನ್ಯೂಸ್



ಕೊಡಗಿನ ಕುವರಿ ರಶ್ಮಿಕಾ ಮಂದಣ್ಣ ಅಭಿಮಾನಿಗಳಿಗೆ ಸಿಹಿಸುದ್ದಿ ಕೊಟ್ಟಿದ್ದಾರೆ. ಪ್ಯಾನ್ ಇಂಡಿಯಾ ಸ್ಟಾರ್ ನಟಿ ಈಗ ಕಿರುತೆರೆಗೆ ಎಂಟ್ರಿ ಕೊಟ್ಟಿದ್ದಾರೆ. ದೇಶದ ಎಲ್ಲಾ ಕಡೆ ಅಪಾರ ಅಭಿಮಾನಿಗಳ ಪ್ರೀತಿ ಪಡೆದಿರುವ ಶ್ರೀವಲ್ಲಿ ಈ ಸುದ್ದಿ ಮೂಲಕ ಸೂಪರ್ ಸರ್ಪ್ರೈಸ್ ಕೊಟ್ಟಿದ್ದಾರೆ.

ಪ್ಯಾನ್ ಇಂಡಿಯಾ ಚಿತ್ರಗಳ ಮೂಲಕ ಸ್ಟಾರ್ ನಟರಿಗೆ ನಾಯಕಿಯಾಗಿ ಗೆದ್ದಿರುವ ರಶ್ಮಿಕಾ ಈಗ ಟಿವಿ ಪರದೆಗೆ ಎಂಟ್ರಿ ಕೊಟ್ಟಿದ್ದಾರೆ. ಸೀರಿಯಲ್‌ಗಾ ಅಲ್ಲವೇ ಅಲ್ಲ. ತೆಲುಗಿನ 'ಇಂಡಿಯನ್ ಐಡಿಲ್ -3' ಶೋಗೆ ಅತಿಥಿಯಾಗಿ ಭಾಗ ವಹಿಸಿದ್ದಾರೆ.

ಸಿಂಗಿಂಗ್ ಶೋನಲ್ಲಿ ಅದ್ಧೂರಿಯಾಗಿ ರಶ್ಮಿಕಾರನ್ನು ಸ್ವಾಗತಿಸಿರುವ ಪ್ರೋಮೋವೊಂದನ್ನು ವಾಹಿನಿ ರಿಲೀಸ್ ಮಾಡಿದೆ.

ಇದೇ ಆಗಸ್ಟ್ 2 ಮತ್ತು 3ರಂದು ಸಂಜೆ 7 ಗಂಟೆ ಶೋ ಪ್ರಸಾರವಾಗಲಿದೆ. ಇನ್ನೂ ನಟಿಯ ಧ್ವನಿ ಚೆನ್ನಾಗಿದೆ. ಆದರೆ ಇಲ್ಲಿಯವರೆಗೂ ಅವರು ಎಲ್ಲೂ ಹಾಡಿಲ್ಲ. ಹಾಡಿನ ಶೋಗೆ ಬಂದ್ಮೇಲೆ ಅಭಿಮಾನಿಗಳಿಗೋಸ್ಕರ ನಟಿ ಹಾಡ್ತಾರಾ ಕಾದು ನೋಡಬೇಕಿದೆ.

ಅಂದಹಾಗೆ, ಪುಷ್ಪ 2, ಅನಿಮಲ್ 2, ರೈನ್ ಬೋ, ಛಾವಾ, ಕುಬೇರ, ಸಿಖಂದರ್, ದಿ ಗರ್ಲ್ ಫ್ರೆಂಡ್ ಸೇರಿದಂತೆ ಹಲವು ಸಿನಿಮಾಗಳು ರಶ್ಮಿಕಾ ಮಂದಣ್ಣ ಕೈಯಲ್ಲಿವೆ. ಪ್ರಸ್ತುತ 'ಪುಷ್ಪ 2' ಚಿತ್ರದ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ. ಈ ಸಿನಿಮಾಗಾಗಿ ಅಭಿಮಾನಿಗಳು ಕಾಯ್ತಿದ್ದಾರೆ. ಡಿ.6ರಂದು ರಿಲೀಸ್ ಆಗ್ತಿದೆ.

# ಸಂಜು ಸ್ಯಾಮ್ಸನ್‌ಗೆ ಚಾನ್ಸ್ ಸಿಗಬೇಕು




ಟೀಮ್ ಇಂಡಿಯಾದ ನತದೃಷ್ಟ ಆಟಗಾರ ಯಾರೆಂದರೆ ಕೇಳಿದರೆ ಥಟ್ಟನೆ ಬರುವ ಉತ್ತರ ಸಂಜು ಸ್ಯಾಮ್ಸನ್. ಏಕೆಂದರೆ 2015 ರಲ್ಲಿ ಟಿ20 ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದ ಸ್ಯಾಮ್ಸನ್‌ಗೆ ಸಿಕ್ಕಿದ್ದು ವಿರಳ ಅವಕಾಶ. ಆದರೆ ಹೀಗೆ ಸಿಕ್ಕ ಅವಕಾಶದಲ್ಲಿ ಸಾಧಿಸಿದ್ದಾದರೂ ಏನು ಎಂಬುದನ್ನು ಪ್ರಶ್ನಿಸಿಕೊಳ್ಳಲು ಇದು ಸ್ಯಾಮ್ಸನ್‌ಗೆ ಸಕಾಲ.

ಏಕೆಂದರೆ ಟಿ20 ವಿಶ್ವಕಪ್ ವೇಳೆ ಬೆಂಚ್ ಕಾದಿದ್ದ ಸಂಜು ಸ್ಯಾಮ್ಸನ್‌ಗೆ ಶ್ರೀಲಂಕಾ ವಿರುದ್ಧದ 2 ಪಂದ್ಯಗಳಲ್ಲಿ ಅವಕಾಶ ನೀಡಲಾಗಿದೆ.

ಈ ಅವಕಾಶದಲ್ಲಿ ಸ್ಯಾಮ್ಸನ್ ಸೊನ್ನೆಯೊಂದಿಗೆ ಹಿಂತಿರುಗಿದ್ದರು. ಲಂಕಾ ವಿರುದ್ಧದ 2ನೇ ಟಿ20 ಪಂದ್ಯದಲ್ಲಿ ಆರಂಭಿಕನಾಗಿ ಕಣಕ್ಕಿಳಿಯುವ ಅವಕಾಶ ಪಡೆದ ಸ್ಯಾಮ್ಸನ್ ಮೊದಲ ಎಸೆತದಲ್ಲಿ ಕ್ಲೀನ್ ಬೌಲ್ಡ್ ಆಗಿದ್ದರು. ಇನ್ನು ಮೂರನೇ ಟಿ20 ಪಂದ್ಯದಲ್ಲಿ ವಿಕೆಟ್ ಕೀಪರ್ ಬ್ಯಾಟರ್ ಆಗಿ ತಂಡದಲ್ಲಿ ಕಾಣಿಸಿಕೊಂಡ ಸ್ಯಾಮ್ಸನ್‌ಗೆ 3ನೇ ಓವರ್ ವೇಳೆಗ ಕ್ರೀಸ್‌ಗೆ ಆಗಮಿಸಿದ್ದರು. ಆದರೆ 4 ಎಸೆತಗಳನ್ನು ಎದುರಿಸಿದ ಅವರು ಕ್ಯಾಚ್ ನೀಡಿ ಶೂನ್ಯದೊಂದಿಗೆ ಹಿಂತಿರುಗಿದ್ದರು. ಇದರೊಂದಿಗೆ ಸಂಜು ಸ್ಯಾಮ್ಸನ್ ಅವರ ಟಿ20 ಕೆರಿಯರ್‌ನ ಸೊನ್ನೆಗಳ ಸಂಖ್ಯೆ ನಾಲ್ಕಕ್ಕೇರಿದೆ. ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶ ಎಂದರೆ, ಸಂಜು ಸ್ಯಾಮ್ಸನ್ ಕಳೆದ 26 ಟಿ20 ಇನಿಂಗ್ಸ್‌ಗಳಿಂದ ಎಷ್ಟು ರನ್ ಕಲೆಹಾಕಿದ್ದಾರೆ ಎಂಬುದು. ಏಕೆಂದರೆ ಟೀಮ್ ಇಂಡಿಯಾ ಪರ 26 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿರುವ ಸ್ಯಾಮ್ಸನ್ ಇದುವರೆಗೆ ಬಾರಿಸಿದ್ದು ಕೇವಲ 444 ರನ್‌ಗಳು ಮಾತ್ರ.

ಅಂದರೆ ಅವರ ಪ್ರತಿ ಪಂದ್ಯಗಳ ಸರಾಸರಿ ಸ್ಕೋರ್ ಕೇವಲ 19.3 ರನ್‌ಗಳು ಮಾತ್ರ. ಇನ್ನು 26 ಇನಿಂಗ್ಸ್‌ಗಳಲ್ಲಿ ಅವರ ಬ್ಯಾಟ್‌ನಿಂದ ಮೂಡಿಬಂದಿರುವುದು ಕೇವಲ 2 ಅರ್ಧಶತಕಗಳು ಎಂದರೆ ನಂಬಲೇಬೇಕು. ಅದು ಕೂಡ ಝಿಂಬಾಬ್ವೆ ಮತ್ತು ಐರ್ಲೆಂಡ್ ವಿರುದ್ಧ ಎಂಬುದು ಇಲ್ಲಿ ಉಲ್ಲೇಖಾರ್ಹ.

ಇನ್ನು ಆಸ್ಟ್ರೇಲಿಯಾ ವಿರುದ್ಧ ಆಡಿದ 3 ಇನಿಂಗ್ಸ್‌ಗಳಲ್ಲಿ ಕಲೆಹಾಕಿದ ಗರಿಷ್ಠ ಸ್ಕೋರ್ ಕೇವಲ 23 ರನ್. ನ್ಯೂಝಿಲೆಂಡ್ ವಿರುದ್ಧದ 2 ಪಂದ್ಯಗಳಲ್ಲಿ ಬಾರಿಸಿದ್ದು 8 ರನ್ ಮಾತ್ರ. ಶ್ರೀಲಂಕಾ ವಿರುದ್ಧ 6 ಇನಿಂಗ್ಸ್‌ಗಳಲ್ಲಿ ಬಾರಿಸಿದ ಗರಿಷ್ಠ ಸ್ಕೋರ್ 27 ರನ್. ವೆಸ್ಟ್ ಇಂಡೀಸ್ ವಿರುದ್ಧ ಕೂಡ 2 ಪಂದ್ಯಗಳನ್ನಾಡಿದ್ದು, ಈ ವೇಳೆ ಬಾರಿಸಿದ ಗರಿಷ್ಠ ಸ್ಕೋರ್ 12 ರನ್. ಅಂದರೆ ಬಲಿಷ್ಠ ತಂಡಗಳ ವಿರುದ್ಧ ಸ್ಯಾಮ್ಸನ್ ಅವರ ಸರಾಸರಿ 15 ಕ್ಕಿಂತ ಕಡಿಮೆ ಇರುವುದು ಸ್ಪಷ್ಟ. ಇನ್ನು ಕೊನೆಯ 6 ಇನಿಂಗ್ಸ್‌ಗಳಲ್ಲಿ ಮೂರು ಬಾರಿ ಶೂನ್ಯಕ್ಕೆ ಔಟಾಗಿದ್ದಾರೆ. ಇನ್ನೆರಡು ಪಂದ್ಯಗಳಲ್ಲಿ ಕ್ರಮವಾಗಿ 1 ಮತ್ತು 12 ರನ್‌ಗಳಿಸಿ ವಿಕೆಟ್ ಒಪ್ಪಿಸಿದ್ದರು. ಅಂದರೆ 2024 ರಲ್ಲಿ ಸಿಕ್ಕ 6 ಅವಕಾಶಗಳಲ್ಲಿ ಸ್ಯಾಮ್ಸನ್ ಕಲೆಹಾಕಿರುವುದು ಕೇವಲ 71 ರನ್‌ಗಳು ಮಾತ್ರ.

# ಮೊದಲ ಏಕದಿನಕ್ಕೆ ಯಾರು ವಿಕೆಟ್ ಕೀಪರ್



ಶ್ರೀಲಂಕಾ ವಿರುದ್ಧ ಮೂರು ಪಂದ್ಯಗಳ ಟಿ20 ಸರಣಿಯನ್ನು 3-0 ಅಂತರದಿಂದ ಗೆದ್ದುಕೊಂಡಿರುವ ಟೀಂ ಇಂಡಿಯಾ ಇದೀಗ ಅಷ್ಟೇ ಸಂಖ್ಯೆಯ ಏಕದಿನ ಸರಣಿಗೆ ಸಜ್ಜಾಗಿದೆ. ಉಭಯ ತಂಡಗಳ ನಡುವಿನ ಮೊದಲ ಏಕದಿನ ಪಂದ್ಯ ಕೊಲಂಬೊದಲ್ಲಿ ಇಂದು ನಡೆಯಲಿದೆ.

ಶ್ರೀಲಂಕಾ ವಿರುದ್ಧ ಮೂರು ಪಂದ್ಯಗಳ ಟಿ20 ಸರಣಿಯನ್ನು 3-0 ಅಂತರದಿಂದ ಗೆದ್ದುಕೊಂಡಿರುವ ಈ ಸರಣಿಯ ಇನ್ನೊಂದು ವಿಶೇಷವೆಂದರೆ.. ಟಿ20 ವಿಶ್ವಕಪ್ ಬಳಿಕ ಟಿ20 ಮಾದರಿಗೆ ವಿದಾಯ ಹೇಳಿದ್ದ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ, ಏಕದಿನ ಸರಣಿಯಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದಲ್ಲದೆ ಬಹಳ ದಿನಗಳ ನಂತರ ಕೆಎಲ್ ರಾಹುಲ್ ಹಾಗೂ ಶ್ರೇಯಸ್ ಅಯ್ಯರ್ ಕೂಡ ಏಕದಿನ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

ಮತ್ತೊಂದು ವಿಚಾರವೆಂದರೆ ವರ್ಷಗಳ ಬಳಿಕ ರಿಷಬ್ ಪಂತ್ ಏಕದಿನ ತಂಡದಲ್ಲಿ ಆಡಲಿದ್ದಾರೆ. ವಾಸ್ತವವಾಗಿ 2022 ರ ಡಿಸೆಂಬರ್‌ನಲ್ಲಿ ಕಾರು ಅಪಘಾತಕ್ಕೀಡಾಗಿದ್ದ ಪಂತ್, ಅಂದಿನಿಂದ ಭಾರತ ಏಕದಿನ ತಂಡದಲ್ಲಿ ಕಾಣಿಸಿಕೊಂಡಿಲ್ಲ. ಟಿ20 ವಿಶ್ವಕಪ್ ಮೂಲಕ ಭಾರತ ಟಿ20 ತಂಡದಲ್ಲಿ ಆಡಿದ್ದ ಪಂತ್, ಇದೀಗ ಶ್ರೀಲಂಕಾ ವಿರುದ್ಧದ ಏಕದಿನ ಸರಣಿಗೆ ತಂಡದಲ್ಲಿ ಆಯ್ಕೆಯಾಗಿದ್ದಾರೆ. ಇತ್ತ ಕನ್ನಡಿಗ ಕೆಎಲ್ ರಾಹುಲ್ ಕೂಡ ಏಕದಿನ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಅಂದರೆ ಏಕದಿನ ಸರಣಿಗೆ ವಿಕೆಟ್ ಕೀಪರ್‌ಗಳಾಗಿ ಭಾರತ ತಂಡದಲ್ಲಿ ರಿಷಬ್ ಪಂತ್ ಹಾಗೂ ಕೆಎಲ್ ರಾಹುಲ್ ಆಯ್ಕೆಯಾಗಿದ್ದಾರೆ. ಹೀಗಾಗಿ ಈ ಇಬ್ಬರಲ್ಲಿ ನಾಯಕ ರೋಹಿತ್ ಯಾರನ್ನು ಪ್ಲೇಯಿಂಗ್ 11 ನಲ್ಲಿ ಆಯ್ಕೆ ಮಾಡಿಕೊಳ್ಳುತ್ತಾರೆ ಎಂಬುದು ಕುತೂಹಲಕಾರಿ ಸಂಗತಿಯಾಗಿದೆ.

# ಏಕದಿನ ಸರಣಿಗೆ ಟೀಂ ಇಂಡಿಯಾ ತಯಾರಿ

ಕೊಹ್ಲಿ ಹಾಗೂ ರೋಹಿತ್ ಟಿ20 ವಿಶ್ವಕಪ್ ಗೆದ್ದ ಬಳಿಕ ತಂಡದಿಂದ ಹೊರಗುಳಿದಿದ್ದರು. ಆದರೆ ರಾಹುಲ್ ಹಾಗೂ ಶ್ರೇಯಸ್ ಅಯ್ಯರ್ ಇಂಜುರಿ ಸಮಸ್ಯೆಯಿಂದಾಗಿ ತಂಡದ ಭಾಗವಾಗಲು ಸಾಧ್ಯವಾಗಿರಲಿಲ್ಲ. ಹೀಗಾಗಿ ಬಹಳ ದಿನಗಳ ನಂತರ ತಂಡಕ್ಕೆ ಮರಳಿರುವ ಆಟಗಾರರು ಹೊಸ ಗುರು ಗೌತಮ್ ಗಂಭೀರ್ ಎದುರಾಗಿ ಬ್ಯಾಟಿಂಗ್ ಅಭ್ಯಾಸ ನಡೆಸಿದರು. ಅದರ ವಿಡಿಯೋವನ್ನು ಬಿಸಿಸಿಐ ತನ್ನ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದೆ.

ಶ್ರೀಲಂಕಾ ವಿರುದ್ಧದ ಮೂರು ಪಂದ್ಯಗಳ ಟಿ20 ಸರಣಿಯನ್ನು ಟೀಂ ಇಂಡಿಯಾ ಗೆದ್ದಿದೆ. ಸೂರ್ಯಕುಮಾರ್ ಯಾದವ್ ನಾಯಕತ್ವದಲ್ಲಿ ಭಾರತ ತಂಡ ಶ್ರೀಲಂಕಾವನ್ನು ಸೋಲಿಸಿ 3-0 ಅಂತರದಲ್ಲಿ ಸರಣಿ ವಶಪಡಿಸಿಕೊಂಡಿದೆ. ಇದೀಗ ಮೂರು ಪಂದ್ಯಗಳ ಏಕದಿನ ಸರಣಿಯ ಸರದಿಯಾಗಿದ್ದು, ಸರಣಿಯ ಮೊದಲ ಪಂದ್ಯ ಇಂದು ನಡೆಯಲಿದೆ. ಈ ಸರಣಿಯ ಮೂಲಕ ನಾಯಕ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಬಹು ದಿನಗಳ ರಜೆಯ ನಂತರ ತಂಡಕ್ಕೆ ಮರಳುತ್ತಿದ್ದಾರೆ. ಇವರಲ್ಲದೆ ಕೆಎಲ್ ರಾಹುಲ್ ಹಾಗೂ ಶ್ರೇಯಸ್ಸ್ ಅಯ್ಯರ್ ಕೂಡ ಏಕದಿನ ಸರಣಿಯಲ್ಲಿ ಕಣಕ್ಕಿಳಿಯಲ್ಲಿದ್ದಾರೆ.

ಕೊಹ್ಲಿ ಹಾಗೂ ರೋಹಿತ್ ಟಿ20 ವಿಶ್ವಕಪ್ ಗೆದ್ದ ಬಳಿಕ ತಂಡದಿಂದ ಹೊರಗುಳಿದಿದ್ದರು.

ಆದರೆ ರಾಹುಲ್ ಹಾಗೂ ಶ್ರೇಯಸ್ ಅಯ್ಯರ್ ಇಂಜುರಿ ಸಮಸ್ಯೆಯಿಂದಾಗಿ ತಂಡದ ಭಾಗವಾಗಲು ಸಾಧ್ಯವಾಗಿರಲಿಲ್ಲ. ಹೀಗಾಗಿ ಬಹಳ ದಿನಗಳ ನಂತರ ತಂಡಕ್ಕೆ ಮರಳಿರುವ ಆಟಗಾರರು ಹೊಸ ಗುರು ಗೌತಮ್ ಗಂಭೀರ್ ಎದುರಾಗಿ ಬ್ಯಾಟಿಂಗ್ ಅಭ್ಯಾಸ ನಡೆಸಿದರು. ಅದರ ವಿಡಿಯೋವನ್ನು ಬಿಸಿಸಿಐ ತನ್ನ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದೆ.





# ಆಟಗಾರರಿಗಾಗಿ ಬೇಡಿಕೆಯಿಟ್ಟ ಕಾವ್ಯ ಮಾರನ್



ಇಂಡಿಯನ್ ಪ್ರೀಮಿಯರ್ ಲೀಗ್ ಮೆಗಾ ಹರಾಜಿಗೂ ಮುನ್ನ ರಿಟೈನ್ ಆಟಗಾರರ ಸಂಖ್ಯೆಯನ್ನು ಹೆಚ್ಚಿಸಬೇಕೆಂದು ಸನ್‌ರೈಸರ್ಸ್ ಹೈದರಾಬಾದ್ ತಂಡದ ಮಾಲಕಿ ಕಾವ್ಯ ಮಾರನ್ ಬಿಸಿಸಿಗೆ ಮನವಿ ಸಲ್ಲಿಸಿದ್ದಾರೆ. ಮುಂಬೈನಲ್ಲಿ ನಡೆದ ಬಿಸಿಸಿಐ-ಐಪಿಎಲ್ ಮಾಲೀಕರ ಸಭೆಯಲ್ಲಿ ಎಸ್‌ಆರ್‌ಹೆಚ್ ಫ್ರಾಂಚೈಸಿಯು ಕೆಲ ಬೇಡಿಕೆಗಳನ್ನು ಮುಂದಿಟ್ಟಿದ್ದು, ಈ ಬೇಡಿಕೆಯಲ್ಲಿ ಮುಖ್ಯವಾಗಿ ರಿಟೈನ್ ಆಟಗಾರರ ಸಂಖ್ಯೆಯನ್ನು ಹೆಚ್ಚಿಸಬೇಕೆಂದು ತಿಳಿಸಲಾಗಿದೆ. ಅದರಂತೆ ಸನ್‌ರೈಸರ್ಸ್ ಹೈದರಾಬಾದ್ ಫ್ರಾಂಚೈಸಿಯು ಬಿಸಿಸಿಐಗೆ ಸಲ್ಲಿಸಿದ ಶಿಫಾರಸ್ಸು ಈ ಕೆಳಗಿನಂತಿದೆ

- **ಕನಿಷ್ಠ 7 ಆಟಗಾರರನ್ನು ಉಳಿಸಿಕೊಳ್ಳಲು ಅವಕಾಶ ನೀಡಬೇಕು.**
- **7 ಆಟಗಾರರಲ್ಲಿ ಯಾರನ್ನು ಬೇಕಿದ್ದರೂ ಆಯ್ಕೆ ಮಾಡಲು ಅವಕಾಶ ಇರಬೇಕು.**
- **ಭಾರತೀಯ, ವಿದೇಶಿ, ಅನ್‌ಕ್ಯಾಪ್ಡ್ ಆಟಗಾರರನ್ನು ರಿಟೈನ್ ಮಾಡಿಕೊಳ್ಳಲು ಮಿತಿ ಇರಿಸಬೇಡಿ.**
- **ರಿಟೈನ್ ಮಾಡಿಕೊಳ್ಳಲು ಮತ್ತು ಆರ್‌ಟಿಎಂ ಕಾರ್ಡ್ ಬಳಸಲು ಆಟಗಾರರೊಂದಿಗೆ ಚರ್ಚಿಸಲು ಅವಕಾಶ ನೀಡಬೇಕು.**
- **ಪ್ರತಿ 5 ವರ್ಷಗಳಿಗೊಮ್ಮೆ ಮೆಗಾ ಹರಾಜು ನಡೆಸಬೇಕು.**

ಸನ್‌ರೈಸರ್ಸ್ ಹೈದರಾಬಾದ್ ಫ್ರಾಂಚೈಸಿಯು ಈ ಬೇಡಿಕೆಗಳನ್ನು ಮುಂದಿಡಲು ಮುಖ್ಯ ಕಾರಣ ಕಳೆದ ಸೀಸನ್‌ನಲ್ಲಿ ಎಸ್‌ಆರ್‌ಹೆಚ್ ತಂಡವು ಫೈನಲ್‌ಗೆ ಪ್ರವೇಶಿಸಿರುವುದು. ಅಂದರೆ ಪ್ರಸ್ತುತ ಸನ್‌ರೈಸರ್ಸ್ ಹೈದರಾಬಾದ್ ತಂಡವು ಉತ್ತಮ ಬಳಗವನ್ನು ಹೊಂದಿದೆ. ಹೀಗಾಗಿ ಕನಿಷ್ಠ 7 ಆಟಗಾರರನ್ನು ಉಳಿಸಿಕೊಳ್ಳಲು ಅವಕಾಶ ನೀಡಬೇಕೆಂದು ಕಾವ್ಯ ಮಾರನ್ ಮನವಿ ಮಾಡಿದ್ದಾರೆ.

ಹೀಗೆ ರಿಟೈನ್ ಮಾಡಿಕೊಳ್ಳಲು ಸಂಖ್ಯೆಯನ್ನು ನಿಗದಿ ಮಾಡುವಂತಿಲ್ಲ ಎಂದು ಕೂಡ ತಿಳಿಸಲಾಗಿದೆ. ಇದಕ್ಕೆ ಕಾರಣ ಈ ಹಿಂದಿನ ಹರಾಜಿನ ರಿಟೈನ್ ಸಂದರ್ಭಗಳಲ್ಲಿ ಮೂವರು ಭಾರತೀಯರು ಹಾಗೂ ಒಬ್ಬ ವಿದೇಶಿ ಆಟಗಾರರನ್ನು ಉಳಿಸಿಕೊಳ್ಳಲು ಅವಕಾಶ ನೀಡಲಾಗುತ್ತಿತ್ತು. ಆದರೆ ಈ ಬಾರಿ ವಿದೇಶಿ, ಭಾರತೀಯ ಹಾಗೂ ಅನ್‌ಕ್ಯಾಪ್ಡ್ ಎಂಬಂತೆ ಆಟಗಾರರ ಪ್ರಯಾಣವನ್ನು ನಿಗದಿ ಮಾಡುವುದನ್ನು ಕೈ ಬಿಡಬೇಕೆಂದು ಎಸ್‌ಆರ್‌ಹೆಚ್ ಫ್ರಾಂಚೈಸಿ ಆಗ್ರಹಿಸಿದೆ.

ಇನ್ನು ರಿಟೈನ್‌ಗೂ ಮುನ್ನ ಆಟಗಾರರೊಂದಿಗೆ ಫ್ರಾಂಚೈಸಿಗಳು ಚರ್ಚಿಸಲು ಮುಕ್ತ ಅವಕಾಶ ನೀಡಬೇಕೆಂದು ಸನ್‌ರೈಸರ್ಸ್ ಹೈದರಾಬಾದ್ ಮಾಲೀಕರು ಒತ್ತಾಯಿಸಿದ್ದಾರೆ.

ಇದರಿಂದ ಕೆಲ ಸ್ಟಾರ್ ಆಟಗಾರರು ಹರಾಜಿನಲ್ಲಿ ಕಾಣಿಸಿಕೊಳ್ಳಲು ಬಯಸಿದರೂ ಅವರನ್ನು ಮನವೊಲಿಸಿ ತಂಡದಲ್ಲೇ ಉಳಿಸಿಕೊಳ್ಳಲು ಅವಕಾಶ ಸಿಗುತ್ತದೆ. ಹೀಗಾಗಿಯೇ ಎಸ್‌ಆರ್‌ಹೆಚ್ ಫ್ರಾಂಚೈಸಿಯು ಈ ವಿಶೇಷ ಬೇಡಿಕೆಯನ್ನು ಬಿಸಿಸಿಐ ಮುಂದಿಟ್ಟಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966